ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೭೭

**ಪಟ್ಟಿ – ೧೧**

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತಮೂರನೆಯ ಅಧಿವೇಶನ

(ಮುಂದುವರೆದ ಉಪವೇಶನ)

ಶುಕ್ರವಾರ, ದಿನಾಂಕ : ೨೪ನೇ ಮಾರ್ಚ್, ೨೦೧೭

---

## ಸಮೂಹ – V

೧. ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಉನ್ನತ ಶಿಕ್ಷಣ ಸಚಿವರು.

೪. ವಸತಿ ಸಚಿವರು.

೫. ಸಣ್ಣ ಕೈಗಾರಿಕೆ ಸಚಿವರು.

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು.

೭. ಸಾರಿಗೆ ಸಚಿವರು.

೮. ಗಣಿ ಮತ್ತು ಭೂವಿಜ್ಞಾನ ಸಚಿವರು.

---

## ದೈಹಿಕ ಶಿಕ್ಷಣ ಶಿಕ್ಷಕ ಉಪನ್ಯಾಸಕರ ಹುದ್ದೆಗಳ ಭರ್ತಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೧೬೧೪ (೧೫೩೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿರಿಯ ಪ್ರಾಥಮಿಕ ಶಾಲೆ, ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿರುವ ದೈಹಿಕ ಶಿಕ್ಷಣ ಶಿಕ್ಷಕರ/ ಉಪನ್ಯಾಸಕರ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಒಟ್ಟು ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು ; (ಅನುದಾನಿತ ಹಾಗೂ ಸರ್ಕಾರಿ ಶಾಲೆ/ಕಾಲೇಜುಗಳೆಷ್ಟು , ವಿವರ ನೀಡುವುದು) ಹುದ್ದೆಗಳ ಭರ್ತಿಗೆ ಸರ್ಕಾರದ ಕ್ರಮವೇನು ;

(ಇ) ದೈಹಿಕ ಶಿಕ್ಷಣ ನೀಡುವ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು ; ದೈಹಿಕ ಶಿಕ್ಷಕ, ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಾವಳಿಗಳ ಪರಿಷ್ಕರಣೆ ಕಾರ್ಯ ಯಾವ ಹಂತದಲ್ಲಿದೆ ; ಯಾವ ಕಾಲಮಿತಿಯೊಳಗೆ ಈ ಕಾರ್ಯ ಪೂರ್ಣಗೊಳ್ಳುವುದು ;

(ಈ) ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಹಂತದಲ್ಲಿ ಕ್ರೀಡಾ ನಿಧಿ ಸಂಗ್ರಹ ಮಾಡಲಾಗುತ್ತಿದೆಯೇ ; ಕ್ರೀಡಾ ನಿಧಿಯಲ್ಲಿರುವ ಹಣ ಎಷ್ಟು ; (ಮಾಹಿತಿಯ ವಿವರ ನೀಡುವುದು) ಸರ್ಕಾರದಿಂದ ಕ್ರೀಡೆಗಳನ್ನು ಸಂಘಟಿಸಲು ಒದಗಿಸಿರುವ ಅನುದಾನ ಎಷ್ಟು ?

## ೦೧-೦೮-೨೦೦೮ರ ನಂತರ ನೇಮಕವಾದ ಸಿಬ್ಬಂದಿಗಳಿಗೆ ಎಕ್ಸ್‌ಗ್ರೇಷಿಯಾ ನೀಡುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):-**

೧೬೧೫ (೧೪೮೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೦೧-೦೮-೨೦೦೮ರ ನಂತರ ನೇಮಕವಾಗಿರುವಂತಹ ಪ್ರೌಢ ಶಾಲಾ ಶಿಕ್ಷಕರಿಗೆ ಹಾಗೂ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ ಎಕ್ಸ್‌ಗ್ರೇಷಿಯಾ ನೀಡುವ ಕುರಿತು ಸರ್ಕಾರದ ನಿಲುವೇನು ; (ಇಲ್ಲಿಯವರೆಗೂ ನೇಮಕವಾಗಿರುವ ವಿವರ ಒದಗಿಸುವುದು)

(ಆ) ಈ ನಿಟ್ಟಿನಲ್ಲಿ ಕೋರ್ಟ್‌ನಿಂದ ಎಕ್ಸ್‌ಗ್ರೇಷಿಯಾ ನೀಡಬೇಕು ಎನ್ನುವ ಆದೇಶ ಬಂದಿದೆಯೇ ; ೨೦೦೮ ರಿಂದ ಇಲ್ಲಿಯವರೆಗೂ ನೇಮಕವಾಗಿರುವ ಈ ಸಿಬ್ಬಂದಿಗಳಿಗೆ ಎಕ್ಸ್‌ಗ್ರೇಷಿಯಾ ನೀಡಿದರೆ ತಗಲುಬಹುದಾದ ಅಂದಾಜು ಹಣಕಾಸು ವೆಚ್ಚ ಎಷ್ಟು ; ಯಾವ ಕಾಲಮಿತಿಯೊಳಗೆ ಇದನ್ನು ನೀಡಲಾಗುವುದು ?

## ಟಿ.ಜಿ.ಟಿ. ಶಿಕ್ಷಕರ ಸಮಸ್ಯೆಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):-**

೧೬೧೬ (೧೫೩೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ಹಾಗೂ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಟಿ.ಜಿ.ಟಿ. ಶಿಕ್ಷಕರ ಸಂಖ್ಯೆ ಎಷ್ಟು ; ಇವರು ಯಾವ ಯಾವ ವೇತನ ಶ್ರೇಣಿ ಪಡೆಯುತ್ತಿದ್ದಾರೆ ;

(ಆ) ಇವರು ಕಾರ್ಯನಿರ್ವಹಿಸುತ್ತಿರುವ ಹಂತ ಯಾವುದು ; ಆ ಹಂತದಲ್ಲಿ ಬೋಧನೆ ಮಾಡುತ್ತಿರುವ ಶಿಕ್ಷಕರು ಯಾರು ; ಅವರ ವೇತನ ಶ್ರೇಣಿ ಏನು ;

(ಇ) ಈ ಟಿ.ಜಿ.ಟಿ. ಶಿಕ್ಷಕರ ಸೇವೆಯನ್ನು ಪ್ರೌಢ ಶಾಲಾ ಹಂತಕ್ಕೆ ವಿಲೀನಗೊಳಿಸುವ ಪ್ರಸ್ತಾವನೆ ಇದೆಯೇ ;

(ಈ) ಈ ಶಿಕ್ಷಕರಿಗೆ, ಪ್ರೌಢ ಶಾಲಾ ಶಿಕ್ಷಕರಿಗೆ ನೀಡುವ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

## ೧೯೯೫ರ ನಂತರ ಪ್ರಾರಂಭವಾಗಿರುವ ಅನುದಾನ ರಹಿತ ಶಾಲಾ ಕಾಲೇಜುಗಳ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೧೬೧೭ (೧೫೩೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿರುವ ೧೯೯೫ರ ನಂತರ ಪ್ರಾರಂಭವಾಗಿರುವ ಅನುದಾನ ರಹಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು ; (ಆ ಶಾಲಾ ಕಾಲೇಜುಗಳ ಹೆಸರು, ವಿಳಾಸ ಹಾಗೂ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಷಯವಾರು ಶಿಕ್ಷಕರ ಸಂಪೂರ್ಣ ಮಾಹಿತಿ ನೀಡುವುದು)

(ಆ) ಇವರನ್ನು ಅನುದಾನಕ್ಕೊಳಪಡಿಸಲು ಸರ್ಕಾರ ಚಿಂತನೆ ನಡೆಸಿದೆಯೇ ;

(ಇ) ೧೯೮೭ರಿಂದ ೧೯೯೫ರ ಮಧ್ಯದ ಅವಧಿಯಲ್ಲಿ ಇನ್ನೂ ಅನುದಾನಕ್ಕೊಳಪಡದ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು ; ಈ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸದಿರಲು ಕಾರಣವೇನು ;

(ಈ) ರಾಜ್ಯದಲ್ಲಿ ಅನುದಾನ ಸಂಹಿತೆಯನ್ನು ಜಾರಿಗೊಳಿಸುವ ಚಿಂತನೆಯನ್ನು ಸರ್ಕಾರ ನಡೆಸಿದೆಯೇ ; ನಡೆಸಿದ್ದರೆ, ಅದರ ವಿವರಗಳನ್ನು ಒದಗಿಸುವುದು ; ನಡೆಸದೇ ಇದ್ದಲ್ಲಿ, ಅದಕ್ಕೆ ಕಾರಣಗಳೇನು ? (ವಿವರ ಒದಗಿಸುವುದು)

## ಖಾಸಗಿ ವಸತಿ ಶಾಲೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೧೮ (೧೬೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಖಾಸಗಿ ವಸತಿ ಶಾಲೆಗಳೆಷ್ಟು ; ಇದರಲ್ಲಿ ಅನುದಾನ ರಹಿತ/ಅನುದಾನ ಸಹಿತ ವಸತಿ ಶಾಲೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ತುಮಕೂರು ಜಿಲ್ಲೆಯ ಹುಳಿಯೂರು ತಾಲ್ಲೂಕಿನ ಬಳೆಕಟ್ಟಿ ವಿದ್ಯಾವಾರಿಧಿ ಇಂಟರ್‌ನ್ಯಾಷನಲ್ ವಸತಿ ಶಾಲೆಯಲ್ಲಿ ವಿಷಪೂರಿತ ಆಹಾರ ಸೇವನೆಯಿಂದ ವಿದ್ಯಾರ್ಥಿಗಳು ಮೃತಪಟ್ಟಿರುವುದು ನಿಜವೇ ; ಹಾಗಿದ್ದಲ್ಲಿ, ತಪ್ಪಿತಸ್ಥರು ಯಾರು ; ಇವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಸರ್ಕಾರದಿಂದ ಈ ವಸತಿ ಶಾಲೆಗೆ ಯಾವಾಗ ಅನುಮತಿ ನೀಡಲಾಗಿದೆ ; ನೀಡಿದ್ದಲ್ಲಿ, ಅನುಮತಿ ಮತ್ತು ನವೀಕರಣ ಪ್ರತಿ ಒದಗಿಸುವುದು ;

(ಈ) ಈ ಶಾಲೆಯು ವಿದ್ಯಾರ್ಥಿಗಳ ಪೋಷಕರಿಂದ ಪಡೆಯುತ್ತಿರುವ ವಾರ್ಷಿಕ ಮತ್ತು ಮಾಸಿಕ ಶುಲ್ಕವೆಷ್ಟು ; (ವಿವರ ನೀಡುವುದು)

(ಉ) ಈ ಶಾಲೆಯ ಸ್ವಚ್ಛತೆ, ಸುರಕ್ಷತೆ, ಭದ್ರತೆ ಬಗ್ಗೆ ಶಾಲಾ ತಪಾಸಣಾ ಭೇಟಿ ನೀಡಿದ ಹಿರಿಯ ಅಧಿಕಾರಿಗಳು ಯಾರು ; ವರದಿ ಸಲ್ಲಿಸಿರುವರೆ ; ಹಾಗಿದ್ದಲ್ಲಿ, ವರದಿಯಲ್ಲಿನ ನ್ಯೂನತೆಗಳಿದ್ದರೆ, ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಊ) ಕಳೆದ ಮೂರು ವರ್ಷಗಳಲ್ಲಿ ಖಾಸಗಿ ವಸತಿ ಶಾಲೆಗಳಲ್ಲಿ ವಿದ್ಯಾರ್ಥಿಗಳು ಅತ್ಯಾಚಾರ, ಪ್ರಾಣಾಪಾಯಕ್ಕೊಳಗಾದ ಪ್ರಕರಣಗಳೆಷ್ಟು ; ತಪ್ಪಿತಸ್ಥರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಪೋಷಕರಿಗೆ ಪರಿಹಾರ ನೀಡಲಾಗಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ?

## ತಾಂತ್ರಿಕ ವಿಶ್ವವಿದ್ಯಾಲಯ ವಿ.ಟಿ.ಯು. ವಿಭಜನೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೭೯ (೧೫೫೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೆರೆಯ ರಾಜ್ಯಗಳಲ್ಲಿ ತಾಂತ್ರಿಕ ವಿಶ್ವವಿದ್ಯಾಲಯದ ಅಧೀನದಲ್ಲಿ ೧೦೦ಕ್ಕಿಂತ ಹೆಚ್ಚು ಮಹಾವಿದ್ಯಾಲಯಗಳು ಇದ್ದ ಪಕ್ಷದಲ್ಲಿ, ಆಡಳಿತಾತ್ಮಕ ಮತ್ತು ನಿಯಂತ್ರಣದ ಸಲುವಾಗಿ ಎರಡು ವಿಶ್ವವಿದ್ಯಾಲಯಗಳನ್ನಾಗಿ ಯು.ಜಿ.ಸಿ ನಿಯಮದ ಪ್ರಕಾರ ವಿಂಗಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಜ್ಯದ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಅಧೀನದಲ್ಲಿ ೨೨೦ಕ್ಕೂ ಹೆಚ್ಚು ಮಹಾವಿದ್ಯಾಲಯಗಳಿದ್ದು, ಆಡಳಿತಾತ್ಮಕ ಮತ್ತು ನಿಯಂತ್ರಣವನ್ನು ಸುಲಭಗೊಳಿಸಲು ಎರಡು ವಿಶ್ವವಿದ್ಯಾಲಯವನ್ನಾಗಿ ವಿಂಗಡಿಸಲು ಸರ್ಕಾರ ಚಿಂತಿಸುವುದೇ ; (ಹಾಗಿದ್ದಲ್ಲಿ, ವಿವರ ನೀಡುವುದು)

(ಇ) ಬೆಂಗಳೂರು ಸ್ಥಳೀಯವಾಗಿ ೧೦೦ಕ್ಕೂ ಹೆಚ್ಚು ಮಹಾವಿದ್ಯಾಲಯಗಳಿರುವುದರಿಂದ ವಿ.ಟಿ.ಯು ವಿಂಗಡಣೆ ಸರ್.ಎಂ. ವಿಶ್ವೇಶ್ವರಯ್ಯರವರ ಹುಟ್ಟೂರಾದ ಮುದ್ದೇನಹಳ್ಳಿ ಗ್ರಾಮಕ್ಕೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವನ್ನು ಸ್ಥಳಾಂತರಿಸಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ ? (ವಿವರ ನೀಡುವುದು)

## ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ರಾತ್ರಿ ವೇಳೆಯಲ್ಲಿ ಚಲಿಸುವ ಬಸ್‌ಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೨೦ (೧೬೩೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ರಾತ್ರಿ ವೇಳೆ ಓಡಾಡುವ ಬಸ್‌ಗಳ ಸಂಖ್ಯೆ ಎಷ್ಟು ;

(ಆ) ಈ ಬಸ್‌ಗಳು ರಾತ್ರಿ ವೇಳೆಯಲ್ಲಿ ಸಮಯಕ್ಕೆ ಸರಿಯಾಗಿ ಸಂಚರಿಸದೆ ಇರುವುದರಿಂದ ಸಾರ್ವಜನಿಕರು ಪ್ರಯಾಣಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ರಾತ್ರಿ ವೇಳೆಯಲ್ಲಿ ದೂರದ ಊರುಗಳಿಂದ ಬರುವ ಹಾಗೂ ಹೋಗುವ ಪ್ರಯಾಣಿಕರಿಗೆ ಕೆಲವು ವೇಳೆ ಸಮಯಕ್ಕೆ ಸರಿಯಾಗಿ ಬಸ್ ದೊರಕದೆ ಆಟೋ ಮತ್ತು ಕ್ಯಾಬ್‌ಗಳನ್ನು ಅವಲಂಬಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿರುವುದು ನಿಜವೇ ; ಹಾಗಿದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಈ) ರಾತ್ರಿ ವೇಳೆಯಲ್ಲಿ ಪ್ರಯಾಣಿಸುವ ಸ್ತ್ರೀಯರಿಗೆ ಮತ್ತು ಮಕ್ಕಳಿಗೆ ಇದರಿಂದಾಗಿ ತುಂಬಾ ತೊಂದರೆಯಾಗುತ್ತಿರುವುದರಿಂದ, ಸರ್ಕಾರ ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಮಂಡ್ಯ ಜಿಲ್ಲೆಯಲ್ಲಿ ಶುದ್ಧ ನೀರಿನ ಘಟಕದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೨೧ (೧೬೩೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಗೆ ಮಂಜೂರಾದ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಜೂರಾದ ಘಟಕಗಳಲ್ಲಿ ಸಾರ್ವಜನಿಕರಿಗೆ ನಿರಂತರ ಸೇವೆ ಒದಗಿಸುತ್ತಿರುವ ಘಟಕಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಾರ್ಯನಿರ್ವಹಿಸದೆ ಇರುವ ಘಟಕಗಳ ಸಂಖ್ಯೆ ಎಷ್ಟು ; ಇದರ ದುರಸ್ಥಿ ಕಾರ್ಯದ ಜವಾಬ್ದಾರಿ ಯಾರ ಮೇಲಿದೆ ; ಇದನ್ನು ಎಷ್ಟು ಅವಧಿಯೊಳಗೆ ದುರಸ್ಥಿಗೊಳಿಸಲಾಗುವುದು ; (ವಿವರ ನೀಡುವುದು)

(ಈ) ಕಳೆದ ಎರಡು ವರ್ಷಗಳಲ್ಲಿನ ಈ ಘಟಕ ಯೋಜನೆ ಮಂಜೂರಾದ ಮೊತ್ತವೆಷ್ಟು ; ಇದರಲ್ಲಿ ವಿನಿಯೋಗವಾದ ಮೊತ್ತ ಎಷ್ಟು ; ಉಳಿಕೆಯಾಗಿರುವ ಮೊತ್ತವೆಷ್ಟು ; (ವಿವರ ನೀಡುವುದು)

(ಉ) ಈ ಯೋಜನೆಯನ್ನು ಸಮರ್ಪಕವಾಗಿ ನಿರ್ವಹಿಸದ ಅಧಿಕಾರಿ/ ನೌಕರರುಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಉದ್ಯೋಗ ಖಾತ್ರಿ ಯೋಜನೆ (ನರೇಗಾ) ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೨೨ (೧೬೩೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ನರೇಗಾ ಯೋಜನೆಯಡಿ ಎಷ್ಟು ಕೃಷಿಕರು, ಕೂಲಿಗಾರರು ಮತ್ತು ಕಾರ್ಮಿಕರಿಗೆ ಉದ್ಯೋಗ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ೨೦೧೬–೧೭ನೇ ಸಾಲಿನಲ್ಲಿ ನರೇಗಾ ಯೋಜನೆಗೆ ಮೀಸಲಿರಿಸಿದ್ದ ಹಣದ ಮೊತ್ತ ರೂ. ೩೭ ಸಾವಿರ ಕೋಟಿಯನ್ನು ೪೮ ಸಾವಿರ ಕೋಟಿಗಿರಿಸಿರುವುದು ನಿಜವೇ ; ಹಾಗಿದ್ದಲ್ಲಿ, ವಿನಿಯೋಗಿಸಿದ ಮೊತ್ತ ಎಷ್ಟು ; ಉಳಿಕೆಯಾಗಿರುವ ಮೊತ್ತ ಎಷ್ಟು ; (ವಿವರ ನೀಡುವುದು)

(ಇ) ರಾಜ್ಯದ ಮಹಾಲೇಖಪಾಲರು ೨೦೧೬–೧೭ರಲ್ಲಿ ನರೇಗಾದ ಕರ್ಮಕಾಂಡದಿಂದಾಗಿ ೧೬ ಲಕ್ಷ ೩೦ ಸಾವಿರ ೭೦೭ ನಕಲಿ ಉದ್ಯೋಗ ಚೀಟಿಗಳ ಸೃಷ್ಟಿಸಿ ಕೋಟ್ಯಾಂತರ ರೂ.ಗಳ ದುರುಪಯೋಗವಾಗಿರುವುದನ್ನು ಪತ್ತೆ ಹಚ್ಚಿರುವುದು ನಿಜವೇ ; ಹಾಗಿದ್ದಲ್ಲಿ, ಈ ಕರ್ಮಕಾಂಡಕ್ಕೆ ಕಾರಣರಾದವರನ್ನು ಸರ್ಕಾರ ಪತ್ತೆ ಹಚ್ಚಲಾಗಿದೆಯೇ ; (ವಿವರ ನೀಡುವುದು)

(ಈ) ನರೇಗಾದಲ್ಲಿ ಇಷ್ಟೊಂದು ಬೋಗಸ್ ಕಾರ್ಡ್‌ಗಳು ಹೇಗೆ ಸೃಷ್ಟಿಯಾಗಿವೆ ; ಇದಕ್ಕೆ ಹೊಣೆಗಾರರು ಯಾರು ; ತಪ್ಪಿತಸ್ಥರನ್ನು ಪತ್ತೆ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ತಪ್ಪಿತಸ್ಥರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಉ) ಸದರಿ ಕಾರ್ಡ್ ಹೊಂದಿರುವ ಜಿಲ್ಲೆ ಪಂಚಾಯಿತಿಗಳ ಪಟ್ಟಿ ಸಹಿತ ಸಿ.ಎ.ಜಿ. ತಂಡ ಸರ್ಕಾರಕ್ಕೆ ವರದಿ ಸಲ್ಲಿಸಿರುವುದು ನಿಜವೇ ;

(ಊ) ಆಡಳಿತಶಾಹಿ, ನೌಕರಶಾಹಿ ವೈಫಲ್ಯ ಇದಕ್ಕೆ ಕಾರಣವೇನು ? (ವಿವರ ನೀಡುವುದು)

## "ಸಹಾಯಕ ಪ್ರಾಧ್ಯಾಪಕರ" ಹುದ್ದೆಗಳ ನೇಮಕಾತಿ ಪ್ರಕ್ರಿಯೆಯಲ್ಲಿ ಗೊಂದಲ/ಅಕ್ರಮಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೬೨೩ (೧೬೨೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ "ಸಹಾಯಕ ಪ್ರಾಧ್ಯಾಪಕರ" ಹುದ್ದೆಗಳ ನೇಮಕಾತಿ ಪ್ರಕ್ರಿಯೆ ನಡೆದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ "ಸಹಾಯಕ ಪ್ರಾಧ್ಯಾಪಕರ" ನೇಮಕಾತಿ ಪ್ರಕ್ರಿಯೆಯಲ್ಲಿ ಗೊಂದಲ, ಅಕ್ರಮಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ದೂರುಗಳೇನಾದರೂ ಬಂದಿವೇಯೇ ; (ದೂರುಗಳ ಪ್ರತ್ಯೇಕ ಸಂಪೂರ್ಣ ವಿವರ ನೀಡುವುದು)

(ಇ) ಸದರಿ ನೇಮಕಾತಿ ಪ್ರಕ್ರಿಯೆಯಲ್ಲಿ ಆದಂತಹ ಗೊಂದಲಗಳನ್ನು ನಿವಾರಣೆ ಮಾಡಿ ನೇಮಕಾತಿ ಪ್ರಕ್ರಿಯೆಗೆ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಮುಂದಾಗುವುದೇ ? (ಸಂಪೂರ್ಣ ವಿವರ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಖಾಸಗಿ ಶಾಲೆ ಮತ್ತು ಕಾಲೇಜುಗಳ ವೇತನಾನುದಾನದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೬೨೪ (೧೬೨೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಶಾಲಾ ಹಾಗೂ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಶಾಲಾ ಹಾಗೂ ಕಾಲೇಜುವಾರು, ಸಂಪೂರ್ಣ ಮಾಹಿತಿ ನೀಡುವುದು)

(ಆ) ಮೇಲ್ಕಂಡ ಖಾಸಗಿ ಶಾಲಾ ಹಾಗೂ ಕಾಲೇಜುಗಳಲ್ಲಿ ವೇತನಾನುದಾನಕ್ಕೆ ಒಳಪಟ್ಟಂತಹ ಶಾಲಾ ಹಾಗೂ ಕಾಲೇಜುಗಳ ಸಂಖ್ಯೆ ಎಷ್ಟು ; (ಶಾಲೆ ಹಾಗೂ ಕಾಲೇಜುಗಳ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಶಾಲೆ ಹಾಗೂ ಕಾಲೇಜುಗಳು ೩೭೧ (ಜೆ) ಅಡಿಯ ವಿಶೇಷ ಪ್ರಕರಣದಲ್ಲಿ ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಮುಂದಾಗುವುದೇ ? (ಮಾಹಿತಿ ನೀಡುವುದು)

## ವೇತನ ತಾರತಮ್ಯದಲ್ಲಿ ದಶಕಗಳಿಂದ ಆದಂತಹ ಅನ್ಯಾಯವನ್ನು ಸರಿಪಡಿಸುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೬೨೫ (೧೬೨೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರ, ಪ್ರಾಂಶುಪಾಲರ, ಪ್ರೌಢ ಶಾಲಾ ಶಿಕ್ಷಕರ ಹಾಗೂ ಮುಖ್ಯ ಶಿಕ್ಷಕರ ವೇತನದಲ್ಲಿ ತಾರತಮ್ಯ ಆಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಆ) ಸರ್ಕಾರ ಈ ನಿಟ್ಟಿನಲ್ಲಿ ಅನ್ಯಾಯವನ್ನು ಸರಿಪಡಿಸದೆ ಇರಲು ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಈ ವೇತನ ತಾರತಮ್ಯವನ್ನು ಸರಿಪಡಿಸಿ ತದನಂತರ ೭ನೇ ವೇತನ ಆಯೋಗಕ್ಕೆ ಶಿಫಾರಸ್ಸು ಮಾಡಲು ಸರ್ಕಾರ ಮುಂದಾಗುವುದೇ ; ಹಾಗಿದ್ದರೆ, ಸರ್ಕಾರದ ಮುಂದಿರುವ ಕಾನೂನಾತ್ಮಕ ಅಂಶಗಳೇನು ; ಆರ್ಥಿಕವಾಗಿ ತೆಗೆದುಕೊಳ್ಳುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಸರ್ಕಾರಿ ಶಾಲಾ – ಕಾಲೇಜುಗಳಲ್ಲಿ ಶಿಕ್ಷಕರ ಹಾಗೂ ಉಪನ್ಯಾಸಕರ ಮುಂಬಡ್ತಿ ಪ್ರಕ್ರಿಯೆ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೬೨೬ (೧೬೨೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಶಾಲಾ ಹಾಗೂ ಕಾಲೇಜುಗಳಲ್ಲಿ ಶಿಕ್ಷಕರ ಹಾಗೂ ಉಪನ್ಯಾಸಕರ ಮುಂಬಡ್ತಿಗಳು ನಿಯಮಿತವಾಗಿ ಆಗುತ್ತಿವೆಯೇ ; ಇದ್ದರೆ ಆಗಬೇಕಾದ ಪ್ರಕ್ರಿಯೆಗಳ ಬಗ್ಗೆ ಮಾಹಿತಿ ನೀಡುವುದು ;

(ಆ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ೩೭೧(ಜೆ) ಅಡಿಯಲ್ಲಿ ಸರ್ಕಾರಿ ಶಾಲಾ ಹಾಗೂ ಕಾಲೇಜುಗಳ ಶಿಕ್ಷಕರ ಹಾಗೂ ಉಪನ್ಯಾಸಕರ ಮುಂಬಡ್ತಿಗಳ ಪ್ರಕ್ರಿಯೆ ಕೈಗೆತ್ತಿಕೊಳ್ಳಲಾಗಿದೆಯೇ ; (ಮುಂಬಡ್ತಿ ಪ್ರಕ್ರಿಯೆಯ ಹಂತವಾರು ಮಾಹಿತಿ ನೀಡುವುದು)

(ಇ) ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ೩೭೧(ಜೆ) ಅಡಿಯಲ್ಲಿ ಆಗಬೇಕಾದ ಮುಂಬಡ್ತಿಗಳಲ್ಲಿ ಗೊಂದಲಗಳು ಇರುವ ವಿಷಯ ಸರ್ಕಾರದ ಗಮನಕ್ಕೆ ಇದೆಯೇ ; (ವಿವರ ನೀಡುವುದು)

(ಈ) ಸದರಿ ಗೊಂದಲಗಳನ್ನು ನಿವಾರಣೆ ಮಾಡಿ, ಮುಂಬಡ್ತಿ ಪ್ರಕ್ರಿಯೆ ಕೈಗೆತ್ತಿಕೊಳ್ಳಲು ಸರ್ಕಾರ ಮುಂದಾಗುವುದೆ ? (ಕ್ರಮಗಳ ಬಗ್ಗೆ ಮಾಹಿತಿ ನೀಡುವುದು)

## ಸರ್ಕಾರದಿಂದ ಅನುದಾನಕ್ಕೆ ಒಳಪಟ್ಟಂತಹ ಶಾಲಾ ಮತ್ತು ಕಾಲೇಜುಗಳ ಖಾಲಿ ಹುದ್ದೆಗಳ ಭರ್ತಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):-**

೧೬೨೭ (೧೬೨೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರದಿಂದ ಅನುದಾನಕ್ಕೆ ಒಳಪಟ್ಟಂತಹ ಶಾಲಾ ಹಾಗೂ ಕಾಲೇಜುಗಳಲ್ಲಿ ವಿವಿಧ ಕಾರಣಗಳಿಂದ ಶಿಕ್ಷಕರ ಹುದ್ದೆಗಳು ಖಾಲಿ ಇರುವುದರಿಂದ, ಶೈಕ್ಷಣಿಕ ಪ್ರಗತಿ ಕುಂಠಿತವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈಶಾನ್ಯ ಪದವೀಧರ ಕ್ಷೇತ್ರದ ವ್ಯಾಪ್ತಿಯಲ್ಲಿ ಅನುದಾನಕ್ಕೆ ಒಳಪಟ್ಟಂತಹ ಶಾಲಾ ಹಾಗೂ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ; (ಜಿಲ್ಲಾವಾರು ಶಾಲಾ ಹಾಗೂ ಕಾಲೇಜುವಾರು ವಿವರ ನೀಡುವುದು)

(ಆ) ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ೩೧೭(ಜೆ) ಅಡಿ ಅನುದಾನಿತ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಪೂರ್ವಾನುಮತಿ ಇದ್ದಾಗಲೂ, ಈ ಹುದ್ದೆಗಳನ್ನು ಭರ್ತಿ ಮಾಡದೆ ಇರಲು ಕಾರಣಗಳೇನು ; (ಮಾಹಿತಿ ನೀಡುವುದು)

(ಇ) ಶೈಕ್ಷಣಿಕ ಪ್ರಗತಿಗಾಗಿ ಸರ್ಕಾರದಿಂದ ಅನುದಾನಕ್ಕೆ ಒಳಪಟ್ಟಂತಹ ಶಾಲಾ ಹಾಗೂ ಕಾಲೇಜುಗಳ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಮುಂದಾಗುವುದೇ ; ಹಾಗಿದ್ದಲ್ಲಿ, ಸರ್ಕಾರದ ಮುಂದಿರುವ ಕ್ರಮಗಳೇನು ;

(ಈ) ಸರ್ಕಾರದಿಂದ ಅನುದಾನಕ್ಕೆ ಒಳಪಟ್ಟಂತಹ ಶಾಲಾ ಹಾಗೂ ಕಾಲೇಜುಗಳ ಶಿಕ್ಷಕರಿಗೆ "ಜ್ಯೋತಿ ಸಂಜೀವಿನಿ" ಯೋಜನೆ ಅಡಿಯಲ್ಲಿ ಸೌಲಭ್ಯಗಳನ್ನು ಕಲ್ಪಿಸಲು ನಿಯಮಗಳಲ್ಲಿ ಇರುವ ತೊಡಕುಗಳೇನು ; (ವಿವರ ನೀಡುವುದು)

(ಉ) ಈ ತೊಡಕುಗಳನ್ನು ಬಗೆಹರಿಸಿ ಸರ್ಕಾರದಿಂದ ಅನುದಾನಕ್ಕೆ ಒಳಪಟ್ಟಂತಹ ಶಾಲಾ ಹಾಗೂ ಕಾಲೇಜುಗಳ ಶಿಕ್ಷಕರಿಗೆ "ಜ್ಯೋತಿ ಸಂಜೀವಿನಿ" ಯೋಜನೆ ಅಡಿಯಲ್ಲಿ ಸೌಲಭ್ಯ ಕಲ್ಪಿಸಲು ಸರ್ಕಾರ ಮುಂದಾಗುವುದೇ ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಕುಡಿಯುವ ನೀರಿನ ಪ್ರಯೋಗಾಲಯಗಳ ಸ್ಥಾಪಿಸಿರುವ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೬೨೮ (೧೬೨೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಷ್ಟು ತಾಲ್ಲೂಕುಗಳಲ್ಲಿ (NRDWP) ಘಟಕದಡಿ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕುಡಿಯುವ ನೀರಿನ ಪ್ರಯೋಗಾಲಯ ಸ್ಥಾಪಿಸಲು ಮತ್ತು ಪರೀಕ್ಷಾ ಉಪಕರಣಗಳನ್ನು ಖರೀದಿಸಲು SLSSC (State Level Scheme Sanctioning Committee) ಸಭೆಯನ್ನು ಯಾವ ದಿನಾಂಕಕ್ಕೆ ನಿಗದಿಪಡಿಸಲಾಗಿತ್ತು ;

(ಇ) SLSSC ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು ಯಾರು ; (ಹೆಸರುಗಳ ಸಹಿತ ಮಾಹಿತಿ ನೀಡುವುದು)

(ಈ) SLEC ಯಾವ ದಿನಾಂಕದಂದು ರಚನೆಯಾಗಿದೆ ; ರಾಜ್ಯಪಾಲರು ಯಾವ ದಿನಾಂಕದಂದು ಈ ಸಮಿತಿಯ ರಚನೆಗೆ ಅಂಕಿತ ಹಾಕಿದ್ದಾರೆ ;

(ಉ) ಕುಡಿಯುವ ನೀರಿನ ಪ್ರಯೋಗಾಲಯಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಎಸ್.ಎಲ್.ಇ.ಸಿ. ಸಮಿತಿಗೆ ಅಧಿಕಾರವಿದೆಯೇ ;

(ಊ) ಕುಡಿಯುವ ನೀರಿನ ಪ್ರಯೋಗಾಲಯಗಳ ಸ್ಥಾಪನೆ ಮತ್ತು ಪರೀಕ್ಷಾ ಉಪಕರಣ ಖರೀದಿಗೆ ಸಂಬಂಧಿಸಿದಂತೆ ಟೆಂಡರ್ ಡಾಕ್ಯೂಮೆಂಟ್ ಸಮಿತಿ ಅಥವಾ ಟೆಂಡರ್ ಗೌರ್ವನಿಂಗ್ ಕಮಿಟಿ ಸಭೆಯಲ್ಲಿ ಕೈಗೊಂಡ ನಿರ್ಣಯಗಳೇನು ?

## ವಾಯುವ್ಯ ಕರ್ನಾಟಕ ಸಾರಿಗೆ ಸಂಸ್ಥೆಯ ಹಾನಿ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೬೨೯ (೧೫೧೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಾಯುವ್ಯ ಕರ್ನಾಟಕ ಸಾರಿಗೆ ಸಂಸ್ಥೆಯು ಪ್ರತಿ ದಿನ ಎಷ್ಟು ಮೊತ್ತದ ನಷ್ಟ ಅನುಭವಿಸುತ್ತದೆ ;

(ಆ) ಕಳೆದ ವರ್ಷ ಒಟ್ಟಾರೆ ವಾಯುವ್ಯ ಕರ್ನಾಟಕ ಸಾರಿಗೆ ಸಂಸ್ಥೆ ಅನುಭವಿಸಿದ ನಷ್ಟ ಎಷ್ಟು ;

(ಇ) ಇಲ್ಲಿಯವರೆಗೆ ಆಗಿರುವ ಸಂಚಿತ ನಷ್ಟ ಎಷ್ಟು ;

(ಈ) ಈ ಹಾನಿಯಿಂದ ಸಂಸ್ಥೆಯನ್ನು ಲಾಭದತ್ತ ತರಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ೧೯೯೪-೯೫ನೇ ಸಾಲಿನವರೆಗೆ ಪ್ರಾರಂಭಿಸಿದ ಪ್ರಥಮ ದರ್ಜೆ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೧೬೫೦ (೧೬೨೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಿನಾಂಕ: ೦೧-೦೬-೧೯೮೭ರಿಂದ ೦೧-೦೭-೧೯೯೫ರ ಅವಧಿಯಲ್ಲಿ ಪ್ರಾರಂಭವಾದ ಪರಿಶಿಷ್ಟ ಜಾತಿ/ಪಂಗಡದ ಹಾಗೂ ಸಾಮಾನ್ಯ ಆಡಳಿತ ಮಂಡಳಿಯ ಪ್ರಥಮ ದರ್ಜೆ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾದ ಸಂಖ್ಯೆ ಎಷ್ಟು ; (ವಿಭಾಗವಾರು ಮಾಹಿತಿ ನೀಡುವುದು)

(ಆ) 'ನ್ಯಾಕ್' ನಿಂದ ಕನಿಷ್ಠ 'ಬಿ' ಗ್ರೇಡ್ ಮಾನ್ಯತೆ ಪಡೆದ ಖಾಸಗಿ ಅನುದಾನ ರಹಿತ ಪದವಿ ಕಾಲೇಜುಗಳಿಗೆ ಶಿಕ್ಷಣ ಕಾಯ್ದೆ ನಿಯಮ ೯ರ ಅಡಿಯಲ್ಲಿ ವೇತನಕ್ಕೆ ಒಳಪಡಿಸಲು ಅವಕಾಶವಿರುತ್ತದೆಯೇ ; ಇದ್ದರೆ, ಅಂತಹ ಖಾಸಗಿ ಅನುದಾನ ರಹಿತ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗಿದೆಯೇ ;

(ಇ) ರಾಜ್ಯದಲ್ಲಿ ಖಾಸಗಿ ಅನುದಾನ ರಹಿತ ನ್ಯಾಕ್ ಮಾನ್ಯತೆ ಪಡೆದ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) 'ನ್ಯಾಕ್' ಮಾನ್ಯತೆ ಪಡೆದ ಖಾಸಗಿ ಅನುದಾನ ರಹಿತ ಸಾಮಾನ್ಯ ಪದವಿ ಕಾಲೇಜುಗಳನ್ನು ಯಾವ ದಿನಾಂಕದಿಂದ ವೇತನಾನುದಾನಕ್ಕೆ ಒಳಪಡಿಸಲಾಗುತ್ತದೆ ?

## ಅನುದಾನಿತ ಪದವಿ ಕಾಲೇಜುಗಳಲ್ಲಿನ ಬೋಧಕ ವೃಂದದ ಹುದ್ದೆಗಳನ್ನು ಭರ್ತಿಗೊಳಿಸಲು ಅನುಮತಿ ನೀಡುವ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೧೬೫೧ (೧೬೭೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಅನುದಾನಿತ ಪದವಿ ಕಾಲೇಜುಗಳಲ್ಲಿ ಕಳೆದ ೯ ವರ್ಷಗಳಿಂದ ಖಾಲಿಯಾಗಿರುವ ಬೋಧಕ ವೃಂದದ ಹುದ್ದೆಗಳೆಷ್ಟು; ಪ್ರಾಚಾರ್ಯರ ಹುದ್ದೆಗಳೆಷ್ಟು ; (ಜಿಲ್ಲಾವಾರು, ವಿಷಯವಾರು ಸಂಖ್ಯೆ ಎಷ್ಟು)

(ಆ) ಕೆಲವೊಂದು ಅನುದಾನಿತ ಪದವಿ ಕಾಲೇಜುಗಳಲ್ಲಿ ಕೇವಲ ಒಂದು ಅಥವಾ ಎರಡು ಹುದ್ದೆಗಳು ಮಾತ್ರ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅನುದಾನಿತ ಪದವಿ ಕಾಲೇಜುಗಳಲ್ಲಿ ಇಲ್ಲಿಯವರೆಗೆ ಖಾಲಿಯಾದ ಬೋಧಕ ವೃಂದದ ಹುದ್ದೆಗಳನ್ನು ಭರ್ತಿಗೊಳಿಸಲು ಸರ್ಕಾರ ಅನುಮತಿ ನೀಡದಿರಲು ಕಾರಣಗಳೇನು ;

(ಈ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿ ಈಗಾಗಲೇ ದಿನಾಂಕ: ೩೧-೧೨-೨೦೧೨ರವರೆಗೆ ಖಾಲಿಯಾದ ಬೋಧಕ ವೃಂದದ ಹುದ್ದೆಗಳನ್ನು ಭರ್ತಿಗೊಳಿಸಲು ಅನುಮತಿ ನೀಡಿದ ಮಾದರಿಯಲ್ಲಿಯೇ ಪದವಿ ಕಾಲೇಜುಗಳ ಖಾಲಿ ಹುದ್ದೆಗಳನ್ನು ಭರ್ತಿಗೊಳಿಸಲು ಸರ್ಕಾರ ಅನುಮತಿ ನೀಡಲು ಕ್ರಮ ಕೈಗೊಳ್ಳುವುದೇ ?

## ಕೈಗಾರಿಕಾ ಪ್ರದೇಶದ ಜಮೀನಿನ ಬಗ್ಗೆ

**ಶ್ರೀ ಬಸನಗೌಡ ಆರ್.ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೩೨ (೧೪೬೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಜಯಪುರದಲ್ಲಿ ಕೈಗಾರಿಕೆ ಸಲುವಾಗಿ ಕೈಗಾರಿಕಾ ಪ್ರದೇಶದಲ್ಲಿರುವ ಜಮೀನು ಎಷ್ಟು ; ಇವುಗಳಲ್ಲಿ ಮಂಜೂರಾದ ಜಮೀನಿನ ವಿವರ ಹಾಗೂ ಖಾಲಿ ಇರುವ ಜಮೀನಿನ ವಿವರ ನೀಡುವುದು ;

(ಆ) ವಿಜಯಪುರದಲ್ಲಿ ಇರುವ ಕೈಗಾರಿಕೆ ಪ್ರದೇಶದಲ್ಲಿ ಸ್ಥಾಪನೆಯಾದ ಕೈಗಾರಿಕೆಗಳು ಎಷ್ಟು ; (ವಿವರ ನೀಡುವುದು) ಮತ್ತು ಅವುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವಲ್ಲಿ ಸರ್ಕಾರ ತೆಗೆದಕೊಂಡ ಕ್ರಮಗಳೇನು ;

(ಇ) ಕೈಗಾರಿಕೆ ಸ್ಥಾಪನೆ ಮಾಡುವ ಸಲುವಾಗಿ ಜಮೀನಿನ ಬೇಡಿಕೆಗಾಗಿ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು ; (ವಿವರ ನೀಡುವುದು) ಹಾಗೂ ಇದಕ್ಕೆ ಇನ್ನೂ ಎಷ್ಟು ಜಮೀನಿನ ಅವಶ್ಯಕತೆ ಇದೆ ; (ವಿವರ ನೀಡುವುದು)

(ಈ) ಕೈಗಾರಿಕೆ ಪ್ರದೇಶದ ಅಭಿವೃದ್ಧಿಗೆ ಸರ್ಕಾರ ಕಳೆದ ೧೦ ವರ್ಷಗಳಿಂದ ಖರ್ಚು ಮಾಡಿರುವ ಹಣ ಎಷ್ಟು ? (ಸಂಪೂರ್ಣ ವಿವರ ನೀಡುವುದು)

(ಉ) ವಿಜಯಪುರ ಕೈಗಾರಿಕೆ ಪ್ರದೇಶದಲ್ಲಿ ಮಂಜೂರಾದ ಜಮೀನಿನಲ್ಲಿ ಉದ್ದೇಶಿತ ಕೈಗಾರಿಕೆ ಪ್ರಾರಂಭಿಸಲಾಗಿದೆಯೇ ; (ವಿವರ ನೀಡುವುದು) ನಿಗದಿತ ಸಮಯದಲ್ಲಿ, ಕೈಗಾರಿಕೆ ಪ್ರಾರಂಭಿಸದೇ ಉಳಿದ ಜಮೀನು ಎಷ್ಟು ; (ವಿವರ ನೀಡುವುದು) ಇದಕ್ಕೆ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಊ) ವಿಜಯಪುರದಲ್ಲಿ ಕೈಗಾರಿಕೆ ಪ್ರದೇಶ ವಿಸ್ತರಣೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ ಇನ್ನೂ ಎಷ್ಟು ಜಮೀನಿನ ಅವಶ್ಯಕತೆ ಇದೆ, ಇದಕ್ಕಾಗಿ ಸರ್ಕಾರ/ಇಲಾಖೆ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಋ) ಉದ್ದಿಮೆದಾರರಿಗೆ ಇಲಾಖೆಯಿಂದ ಯಾವ ರೀತಿಯ ತಾಂತ್ರಿಕತೆ ಹಾಗೂ ಇನ್ನಿತರೆ ಸಹಾಯ ನೀಡಿದೆ ? (ವಿವರ ನೀಡುವುದು)

## ಪರಿಹಾರ ನೀಡಲು ವಿಳಂಬ

**ಶ್ರೀ ಬಸನಗೌಡ ಆರ್.ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩೩ (೧೪೬೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮತ್ತು ತಾಲ್ಲೂಕು ಮತ್ತು ಜಿಲ್ಲೆಯ ಮಧುಬಾವಿ ಗ್ರಾಮದ ಸ.ನಂ. ೪೩೩ರ ೨೨ ಎಕರೆ ಜಮೀನು ಖಾಸಗಿಯವರ ಜಮೀನಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಖಾಸಗಿ ಜಮೀನಿನಲ್ಲಿ ಸರ್ಕಾರದ ವತಿಯಿಂದ ಅಂಬೇಡ್ಕರ್ ಗ್ರಾಮ, ಗ್ರಾಮೀಣ ವಸತಿ ಯೋಜನೆಯಡಿಯಲ್ಲಿ ಮನೆ ನಿರ್ಮಾಣ, ಅಂಗನವಾಡಿ ಕಟ್ಟಡ ಸಮುದಾಯ ಭವನ, ನೀರಿನ ಹೆಡ್ ಟ್ಯಾಂಕ್, ಜೆ.ಎ.ಎಲ್.ಬಿ.ಸಿ. ಬ್ಯಾಂಕ್, ಸರ್ಕಾರಿ ಶಾಲೆಗೆ ಕಟ್ಟಡ ಮತ್ತು ಸರ್ಕಾರದ ಗೊಂಡುಬಾವಿ ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಖಾಸಗಿಯವರಿಗೆ ಪರಿಹಾರ ನೀಡಿದೆಯೇ ;

(ಇ) ಪರಿಹಾರ ನೀಡಲು ವಿಳಂಬವಾಗುವುದಕ್ಕೆ ಕಾರಣವೇನು ; ಯಾವ ಕಾಲಮಿತಿಯೊಳಗೆ ಪರಿಹಾರ ನೀಡಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ವಕ್ಫ್ ಇಲಾಖೆ ಅನುದಾನ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩೪ (೧೪೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಇಲ್ಲಿಯವರೆಗೆ ವಕ್ಫ್ ಇಲಾಖೆಯಿಂದ ಯಾವ ಯಾವ ಯೋಜನೆ ಅಡಿಯಲ್ಲಿ ಎಷ್ಟೆಷ್ಟು ಅನುದಾನ ಮಂಜೂರು ಮಾಡಲಾಗಿದೆ ;

(ಆ) ದೇವದುರ್ಗ ತಾಲ್ಲೂಕಿನ ಯಾವ ಗ್ರಾಮಗಳ ಯಾವ ಯಾವ ಮಸೀದಿ, ದರ್ಗಾ, ಖಬರಸ್ಥಾನ, ಶಾದಿಮಹಲಾ, ಈದ್ಗಾಗಳ ಜೀರ್ಣೋದ್ಧಾರಕ್ಕೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ;

(ಇ) ಅನುದಾನದ ಹೆಸರಿನ ಜೊತೆ ಸದರಿ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ೨೦೧೫-೧೬ ನೇ ಸಾಲಿಗೆ ದೇವದುರ್ಗ ತಾಲ್ಲೂಕಿನಲ್ಲಿ ಜೀರ್ಣೋದ್ಧಾರಕ್ಕಾಗಿ ಕೋರಿ ಬಂದ ಮನವಿಗಳ ಸಂಖ್ಯೆ ಎಷ್ಟು ; ಆ ಪೈಕಿ ಅನುದಾನ ಬಿಡುಗಡೆ ಮಾಡಲಾದ ಮನವಿಗಳ ಸಂಖ್ಯೆ ಎಷ್ಟು ? (ವಿವರ ಒದಗಿಸುವುದು)

## ಸಾರಿಗೆ ನೌಕರರ ವರ್ಗಾವಣೆ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩೫ (೧೪೭೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ರಸ್ತೆ ಸಾರಿಗೆ ನಿಗಮಗಳ ನೌಕರರಿಗೆ ವರ್ಗಾವಣೆ ನೀತಿಯನ್ನು ಸರ್ಕಾರದಿಂದ ಜಾರಿಗೆ ತರಲಾಗಿದೆಯೇ ; ತಂದಿದ್ದಲ್ಲಿ, ಯಾವಾಗ ಜಾರಿಗೆ ಬಂದಿದೆ ;

(ಆ) ಒಂದು ನಿಗಮದಿಂದ ಇನ್ನೊಂದು ನಿಗಮಕ್ಕೆ ನೌಕರರು ವರ್ಗಾವಣೆ ಹೊಂದಲು ನೀಡಿರುವ ಮಾನದಂಡಗಳೇನು ;

(ಇ) ರಾಜ್ಯದ ಹೈದ್ರಾಬಾದ್–ಕರ್ನಾಟಕ (ಉತ್ತರ ಕರ್ನಾಟಕ) ಭಾಗದಲ್ಲಿ ವಾಸಿಸುತ್ತಿರುವ ಬಹುತೇಕ ಸಿಬ್ಬಂದಿ ದಕ್ಷಿಣ ಕರ್ನಾಟಕದ ಸಾರಿಗೆ ನಿಗಮಗಳಲ್ಲಿ ಸೇವೆಯಲ್ಲಿರುವುದು ನಿಜವೇ ;

(ಈ) ಸಾರಿಗೆ ಕಾರ್ಮಿಕರು ತಮ್ಮ ಮಾತೃ ಜಿಲ್ಲೆಗೆ ವರ್ಗಾವಣೆ ಬಯಸುವುದು ನ್ಯಾಯ ಸಮ್ಮತವೆಂದು ಸರ್ಕಾರ ಭಾವಿಸುವುದೇ ;

(ಉ) ಅಂತಹ ನೌಕರರನ್ನು ಮಾತೃ ಜಿಲ್ಲೆಗೆ ವರ್ಗಾವಣೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ ?

## ನಿರ್ಮಿತಿ ಕೇಂದ್ರಗಳ ಸ್ಥಾಪನೆ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು)** :–

೧೬೩೬ (೧೫೧೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನಿರ್ಮಿತ ಕೇಂದ್ರಗಳು ಯಾವಾಗ ಸ್ಥಾಪನೆಯಾಯಿತು ; ಇದರ ಸ್ಥಾಪನೆಗೆ ಅಳವಡಿಸಿರುವ ಸರ್ಕಾರದ ಮಾನದಂಡಗಳೇನು ; ಹಾಗೂ ಉದ್ದೇಶವೇನು ; (ಮಾಹಿತಿಯೊಂದಿಗೆ ವಿವರ ನೀಡುವುದು)

(ಆ) ರಾಜ್ಯದಲ್ಲಿ ಎಲ್ಲೆಲ್ಲಿ ನಿರ್ಮಿತಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿದೆ ; ಎಲ್ಲೆಲ್ಲಿ ಮುಚ್ಚಲ್ಪಟ್ಟಿದೆ ; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ನಿರ್ಮಿತಿ ಕೇಂದ್ರಗಳಿಗೆ ಸರ್ಕಾರದಿಂದ ವಹಿಸಿರುವ ಕಾಮಗಾರಿಗಳು ಯಾವುದು ; ತಗಲಿರುವ ವೆಚ್ಚ ಎಷ್ಟು ; (ವಿವರ ನೀಡುವುದು)

(ಈ) ಈ ಕಾಮಗಾರಿಗಳು ಯಾವ ಹಂತದಲ್ಲಿದೆ ; ಯಾವಾಗ ಮುಕ್ತಾಯವಾಗುವುದು ? (ವಿವರ ನೀಡುವುದು)

## ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಪೂರೈಕೆ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೩೭ (೧೫೧೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಅನೇಕ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು ಸಿಗದೆ ಜನ ಜಾನುವಾರುಗಳು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕುಡಿಯುವ ನೀರಿನ ಪೂರೈಕೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಕುಡಿಯುವ ನೀರಿನ ಪೂರೈಕೆಗೆ ಬಿಡುಗಡೆಯಾದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು ? (ವಿವರ ನೀಡುವುದು)

## ರಾಜ್ಯದಲ್ಲಿ ಒದಗಿಸಿರುವ ಮೂಲ ಸೌಲಭ್ಯಗಳ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೩೮ (೧೫೧೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಮೂಲ ಸೌಲಭ್ಯ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನವೆಷ್ಟು ; ಖರ್ಚಾದ ಅನುದಾನವೆಷ್ಟು ; (ವರ್ಷಾವಾರು ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಕೈಗೊಂಡ ಅಭಿವೃದ್ಧಿ ಕಾರ್ಯಗಳು ಯಾವುವು ; (ವಿವರ ನೀಡುವುದು)

(ಇ) ಈ ಕಾಮಗಾರಿಗಳು ಯಾವ ಹಂತದಲ್ಲಿದೆ ? (ವಿವರ ನೀಡುವುದು)

## ಹಟ್ಟಿ ಚಿನ್ನದ ಗಣಿ ಕಂಪನಿಯಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಕಾರ್ಮಿಕರ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೩೯ (೧೪೯೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ರಲ್ಲಿ ಹಟ್ಟಿ ಚಿನ್ನದ ಗಣಿ ಕಂಪನಿಯಿಂದ ಉತ್ಪತ್ತಿಯಾಗಿರುವ ಚಿನ್ನ ಎಷ್ಟು ; ಅದರ ಮಾರಾಟದಿಂದ ಬಂದಿರುವ ಆದಾಯ ಎಷ್ಟು ;

(ಆ) ಹಟ್ಟಿ ಚಿನ್ನದ ಗಣಿ ಸಂಸ್ಥೆಯ ಕಾರ್ಮಿಕರ ಬೇಡಿಕೆಯನ್ನು ಈಡೇರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯ ಪ್ರಾಥಮಿಕ, ಪ್ರೌಢ ಶಾಲೆಗಳು ಹಾಗೂ ಉರ್ದು ಪದವಿ ಪೂರ್ವ ಕಾಲೇಜುಗಳ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೪೦ (೧೪೯೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿರುವ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ;

(ಆ) ಜಿಲ್ಲೆಯಲ್ಲಿ ಪ್ರಸ್ತುತ ಇರುವ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾಭ್ಯಾಸ (ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಹಾಗೂ ಭೋದನೆ ಮಾಡುತ್ತಿರುವ ಶಿಕ್ಷಕರುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ರಾಯಚೂರು ಜಿಲ್ಲೆಯಲ್ಲಿ ಉರ್ದು ಪ್ರೌಢಶಾಲೆಗಳು ಹಾಗೂ ಉರ್ದು ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯಲ್ಲಿ A/C ಬಸ್‌ಗಳನ್ನು ಪ್ರಾರಂಭಿಸುವ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೪೧ (೧೪೯೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಪ್ರತಿನಿತ್ಯ ಸಂಚರಿಸುತ್ತಿರುವ ಬಸ್‌ಗಳ ಸಂಖ್ಯೆ ಎಷ್ಟು ; ಜಿಲ್ಲಾದ್ಯಾಂತ ಪ್ರತಿದಿನ ಪ್ರಯಾಣಿಸುತ್ತಿರುವ ಪ್ರಯಾಣಿಕರ ಸಂಖ್ಯೆ ಎಷ್ಟು ; ೨೦೧೬–೧೭ರಲ್ಲಿ ಪ್ರತಿದಿನ ಪ್ರಯಾಣಿಸುತ್ತಿರುವ ಪ್ರಯಾಣಿಕರುಗಳಿಂದ ಸಾರಿಗೆ ಇಲಾಖೆಗೆ ಬಂದಿರುವ ಆದಾಯ ಎಷ್ಟು ;

(ಆ) ರಾಯಚೂರು ಜಿಲ್ಲೆಯು ಅತಿಹೆಚ್ಚು ಉಷ್ಣಾಂಶ ಹೊಂದಿರುವ ಜಿಲ್ಲೆಯಾಗಿದ್ದು ಎಕ್ಸ್‌ಪ್ರೆಸ್ ಬಸ್ (Express Bus) ಗಳಲ್ಲಿ A/C ಅಳವಡಿಸಲು ಅಥವಾ ನೂತನ ಹವಾ ನಿಯಂತ್ರಿತ ಬಸ್‌ಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಮಾನ್ವಿ ಪಟ್ಟಣದಲ್ಲಿ ನೂತನ ಬಸ್ ಡಿಪೋ ನಿರ್ಮಾಣ ಮಾಡುವ ಪ್ರಸ್ತಾವನೆ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಮುಂದಿನ ಶೈಕ್ಷಣಿಕ ವರ್ಷದಿಂದ ೧ನೇ ತರಗತಿಯಿಂದಲೇ ಕ್ರೀಡೆ ವಿಷಯವನ್ನು ಅನುಷ್ಠಾನಗೊಳಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೬೪೨ (೧೫೧೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮುಂದಿನ ಶೈಕ್ಷಣಿಕ ವರ್ಷದಿಂದ ೧ನೇ ತರಗತಿಯಿಂದಲೇ ಕ್ರೀಡಾ ವಿಷಯವನ್ನು ಕಡ್ಡಾಯಗೊಳಿಸಲು ಸರ್ಕಾರ ನಿರ್ಧರಿಸಿದೆಯೇ ;

(ಆ) ರಾಜ್ಯದಲ್ಲಿ ಆಟದ ಮೈದಾನಗಳೇ ಇರದಿರುವ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ೧೧ ವರ್ಷಗಳಿಂದ ಶಾಲೆಗಳಲ್ಲಿ ದೈಹಿಕ ಶಿಕ್ಷಕರನ್ನು ನೇಮಕ ಮಾಡದಿರಲು ಕಾರಣಗಳೇನು ;

(ಈ) ಆಟದ ಮೈದಾನ ಹಾಗೂ ದೈಹಿಕ ಶಿಕ್ಷಕರೇ ಇರದಿರುವ ಈ ಸ್ಥಿತಿಯಲ್ಲಿ ಕ್ರೀಡಾ ವಿಷಯವನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಲಾಗುವುದು ಸಾಧ್ಯವೆ ? (ವಿವರ ನೀಡುವುದು)

## ರಾಜ್ಯದಲ್ಲಿ ಕನ್ನಡ ಮಾಧ್ಯಮ ಪ್ರಾಥಮಿಕ ಪ್ರೌಢ ಮತ್ತು ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೬೪೩ (೧೫೧೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೧೯೯೫ ಜೂನ್ ನಂತರ ರಾಜ್ಯದಲ್ಲಿ ಎಷ್ಟು ಕನ್ನಡ ಮಾಧ್ಯಮ, ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳನ್ನು ತೆರೆಯಲಾಗಿದೆ ; (ವಾರ್ಷಿಕ ವಿವರ ನೀಡುವುದು)

(ಆ) ಈ ಶಾಲೆಗಳಲ್ಲಿ ಪ್ರಸಕ್ತ ಸಾಲಿನಲ್ಲಿ ಎಷ್ಟು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ ; (ವಿವರ ನೀಡುವುದು)

(ಇ) ಈ ಶಾಲೆಗಳನ್ನು ಅರ್ಹತೆಯ ಆಧಾರದಲ್ಲಿ ಅನುದಾನದ ವ್ಯಾಪ್ತಿಗೆ ಒಳಪಡಿಸಲು ಸರ್ಕಾರ ನಿರ್ಣಯ ಕೈಗೊಂಡಲ್ಲಿ ವಾರ್ಷಿಕ ತಗಲಬಹುದಾದ ವೆಚ್ಚವೆಷ್ಟು ? (ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು)

# ರಾಜ್ಯದಲ್ಲಿ "ಆದರ್ಶ ವಿದ್ಯಾಮಂದಿರ" ಎನ್ನುವ ಮಾದರಿ ಶಾಲೆಯನ್ನು ಪ್ರಾರಂಭಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೬೪೪ (೧೫೨೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ (ಖಾಸಗಿ ಅನುದಾನಿತ, ಸರ್ಕಾರಿ, ಇಂಗ್ಲೀಷ್ ಮಾಧ್ಯಮ, ಇನ್ನಿತರ ಶಾಲೆಗಳು ಸೇರಿದಂತೆ) ಕಳೆದ ೩ ಶೈಕ್ಷಣಿಕ ವರ್ಷಗಳಲ್ಲಿ ಮೊದಲನೆ ತರಗತಿಗೆ ಎಷ್ಟು ವಿದ್ಯಾರ್ಥಿಗಳನ್ನು ದಾಖಲಿಸಲಾಗಿದೆ ; (ವಾರ್ಷಿಕ ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಎಷ್ಟು ವಿದ್ಯಾರ್ಥಿಗಳು (ಖಾಸಗಿ ಅನುದಾನಿತ, ಸರ್ಕಾರಿ ಶಾಲೆಗಳು ಸೇರಿದಂತೆ) ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ಬರೆದಿರುತ್ತಾರೆ ; (ವಾರ್ಷಿಕ ವಿವರ ನೀಡುವುದು)

(ಇ) ವಿದ್ಯಾರ್ಥಿಗಳ ಸಂಖ್ಯೆ ಇಳಿಮುಖವಾಗುತ್ತಿರುವ ಸಂದರ್ಭದಲ್ಲಿ ಸರ್ಕಾರವು ಶಾಲೆಗಳ ಭವಿಷ್ಯದ ಕುರಿತಾಗಿ ಗ್ರಾಮಕ್ಕೊಂದು/ ಗ್ರಾಮ ಪಂಚಾಯಿತಿಗೊಂದು/ವಾರ್ಡ್‌ಗೊಂದು "ಆದರ್ಶ ವಿದ್ಯಾಮಂದಿರ ಎನ್ನುವ ಮಾದರಿ ಶಾಲೆಗಳನ್ನು ಯಾಕೆ ಪ್ರಾರಂಭಿಸಬಾರದು ; ಈ ರೀತಿಯ ಚಿಂತನೆ ಸರ್ಕಾರದ ಮುಂದೆ ಇದೆಯೇ ?

## ಸರ್ಕಾರವು ದೈಹಿಕ ಶಿಕ್ಷಕರಿಗೆ ಉನ್ನತ ಶಿಕ್ಷಣ ನೀಡುವಂತಾಗಲು ಅವಕಾಶ ಕಲ್ಪಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೬೪೫ (೧೫೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿಕ್ಷಣ ಇಲಾಖೆಯ ಇತರೆ ಎಲ್ಲಾ ಶಿಕ್ಷಕರಿಗೆ ಲಭ್ಯವಿರುವಂತೆ ದೈಹಿಕ ಶಿಕ್ಷಣ ಶಿಕ್ಷಕರಿಗೆ B.PEd. & M.PEd ಕೋರ್ಸ್‌ಗಳನ್ನು ವ್ಯಾಸಂಗ ಮಾಡಲು ಎಂದಿನಿಂದ ಅವಕಾಶವನ್ನು ನಿರಾಕರಿಸಲಾಗಿದೆ;

(ಆ) ಅವಕಾಶ ನಿರಾಕರಿಸಲು ಕಾರಣಗಳೇನು ;

(ಇ) ಈ ಕುರಿತಾಗಿ ದೈಹಿಕ ಶಿಕ್ಷಕರಿಗೆ ಉನ್ನತ ಶಿಕ್ಷಣ ನೀಡುವಂತಾಗಲು ಅವಕಾಶ ಕಲ್ಪಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

## ರಾಜ್ಯದಲ್ಲಿ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಹಾಗೂ ಪ್ರೌಢ ಶಾಲಾ ಮುಖ್ಯೋಪಾಧ್ಯಾಯರಿಗೆ ಪ್ರತಿ ತಿಂಗಳ ವಿಶೇಷ ಭತ್ಯೆ ಮಂಜೂರಾತಿ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೬೪೬ (೧೫೧೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೦೮ರ ನಂತರ ನೇಮಕಾತಿ ಹಾಗೂ ಬಡ್ತಿ ಹೊಂದಿದ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಪ್ರತಿ ತಿಂಗಳು ರೂ. ೪೦೦ ಹಾಗೂ ಪ್ರೌಢ ಶಾಲಾ ಮುಖ್ಯೋಪಾಧ್ಯಾಯರು ಹಾಗೂ ತತ್ಸಮಾನ ವೃಂದದವರಿಗೆ ಪ್ರತಿ ತಿಂಗಳು ರೂ. ೫೦೦ ವಿಶೇಷ ಭತ್ಯೆ ಮಂಜೂರು ಮಾಡಬೇಕೆಂಬ ಬೇಡಿಕೆ ಇದೆಯೇ ; ಹಾಗಿದ್ದಲ್ಲಿ, ಸರ್ಕಾರದ ನಿಲುವೇನು ;

(ಆ) ಸ್ನಾತಕೋತ್ತರ ಪದವಿ ಪಡೆದ ಸಹಶಿಕ್ಷಕರನ್ನು ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗಳಿಗೆ ಮುಂಬಡ್ತಿ ಕೊಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಇದ್ದರೆ, ಇದನ್ನು ಯಾವಾಗ ಅನುಷ್ಠಾನಗೊಳಿಸಲಾಗುವುದು ;

(ಈ) ಅನುದಾನಿತ ಶಾಲೆಯ ಶಿಕ್ಷಕರಿಗೆ ಕಾಲ್ಪನಿಕ ವೇತನ ಬಡ್ತಿಯ ಹಾಗೂ ಆರೋಗ್ಯ ಸಂಜೀವಿನಿ ವಿಮಾ ಯೋಜನೆ ಜಾರಿಗೊಳಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ?

## ಶಾಲೆಗಳಲ್ಲಿ ಸಾಂಸ್ಕೃತಿಕ ಕಲೆಗಳ ತರಬೇತಿ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೪೭ (೧೬೧೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಾಲೆಗಳಲ್ಲಿ ಪಾಠಪ್ರವಚನಗಳ ಜೊತೆಗೆ ಮಕ್ಕಳ ಸರ್ವಾಂಗೀಣ ಬೆಳವಣಿಗೆ ದೃಷ್ಟಿಯಿಂದ ಸಾಂಸ್ಕೃತಿಕ ಕಲೆಗಳ ಬಗ್ಗೆಯೂ ವಾರದಲ್ಲಿ ಒಂದು ದಿನ (One period) ತರಗತಿಯನ್ನು ನಡೆಸಲು ಸರ್ಕಾರ ಆಲೋಚಿಸುತ್ತದೆಯೇ ;

(ಆ) ಭಾವಗೀತೆ, ಜಾನಪದಗೀತೆ, ಸಂಗೀತ, ನಾಟಕ ಮುಂತಾದ ಸಾಂಸ್ಕೃತಿಕ ಕಲೆಗಳ ಬಗ್ಗೆಯೂ ತರಬೇತಿ ನೀಡುವುದರಿಂದ, ಅವರಲ್ಲಿ ಸುಪ್ತವಾಗಿರುವ ಪ್ರತಿಭೆಗೆ ಪ್ರೋತ್ಸಾಹ ನೀಡುವಂತಾಗುವುದಲ್ಲದೆ ಮಕ್ಕಳು ಪ್ರತಿಭಾವಂತರಾಗಿ ರೂಪುಗೊಳ್ಳಲು ಸಹಕಾರಿಯಾಗುವುದರಿಂದ ಈ ಬಗ್ಗೆ ಸರ್ಕಾರ ಚಿಂತಿಸುತ್ತದೆಯೇ ;

(ಇ) ಈ ಬಗ್ಗೆ ಪರಿಶೀಲಿಸಿ, ಅಗತ್ಯವಾದ ಕಲಾ ಶಿಕ್ಷಕರನ್ನು ನೇಮಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ ?

## ಸಣ್ಣ ಕೈಗಾರಿಕೆಗಳಿಗೆ ಪ್ರೋತ್ಸಾಹ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೪೮ (೧೬೦೯) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗೆ ಯಾವ ರೀತಿಯ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ ;

(ಆ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ನಿವೇಶನವನ್ನು ಹಂಚಿಕೆ ಮಾಡುವಾಗ ಸಣ್ಣ ಕೈಗಾರಿಕೆಗಳಿಗೆ ಆದ್ಯತೆಯನ್ನು ನೀಡಲಾಗುತ್ತಿದೆಯೇ ;

(ಇ) ನಿರುದ್ಯೋಗ ಸಮಸ್ಯೆ ನಿವಾರಣೆಗೂ ಇದು ಸಹಾಯಕಾರಿಯಾಗುವುದರಿಂದ, ಸಣ್ಣ ಕೈಗಾರಿಕೆಗಳ ಬೆಳವಣಿಗೆಗೆ ಪ್ರೋತ್ಸಾಹ ನೀಡಲು ಸರ್ಕಾರ ಸೂಕ್ತ ಕ್ರಮಗಳನ್ನು ಕೈಗೊಳ್ಳುತ್ತದೆಯೇ ?

## ಮಾತೃ ಭಾಷೆಯಲ್ಲಿ ಶಿಕ್ಷಣ ನೀಡುವ ಬಗ್ಗೆ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೪೯ (೧೬೧೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಕ್ಕಳಿಗೆ ಕಡ್ಡಾಯವಾಗಿ ಮಾತೃ ಭಾಷೆಯಲ್ಲಿ ಶಿಕ್ಷಣ ನೀಡಬೇಕೆಂದು ಹಲವಾರು ವರ್ಷಗಳಿಂದ ಶಿಕ್ಷಣ ತಜ್ಞರು ಒತ್ತಾಯಿಸುತ್ತಿದ್ದು, ಸುಪ್ರೀಂ ಕೋರ್ಟ್ ತೀರ್ಪಿನಿಂದ ಈ ವಿಚಾರದಲ್ಲಿ ಹಿನ್ನೆಡೆಯಾಗಿದೆಯೇ ;

(ಆ) ಹಾಗಿದ್ದರೆ, ಮಾತೃ ಭಾಷೆಯಲ್ಲಿ ಶಿಕ್ಷಣ ನೀಡುವ ವಿಚಾರದಲ್ಲಿ ಸರ್ಕಾರದ ನಿಲುವೇನು ; ಕಾನೂನು ಹೋರಾಟವನ್ನು ಮುಂದುವರೆಸಲಾಗುವುದೇ ;

(ಇ) ಶಿಕ್ಷಣ ತಜ್ಞರು, ಕಾನೂನು ತಜ್ಞರು, ಬುದ್ಧಿ ಜೀವಿಗಳ ಸಲಹೆ ಸೂಚನೆಗಳನ್ನು ಪಡೆದು ಕೇಂದ್ರ ಸರ್ಕಾರದ ಜೊತೆಯೂ ಚರ್ಚಿಸಿ ಮಾತೃ ಭಾಷೆಯಲ್ಲಿ ಕಡ್ಡಾಯವಾಗಿ ಶಿಕ್ಷಣ ನೀಡುವ ದಿಸೆಯಲ್ಲಿ ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ ?

## ಅಕ್ಷರ ದಾಸೋಹ ಯೋಜನೆಯಿಂದ ಅಗ್ನಿನಂದಕ (ಫೈಯರ್ ಪ್ರೂಪ್) ಏಪ್ರಾನ್ ಖರೀದಿಸುವಲ್ಲಿ ಅವ್ಯವಹಾರ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೫೦ (೧೪೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಅಕ್ಷರ ದಾಸೋಹ ಯೋಜನೆಯ ಅಗ್ನಿನಂದಕ (ಫೈಯರ್ ಪ್ರೂಫ್) ಏಪ್ರಾನ್ ಖರೀದಿ ಅವ್ಯವಹಾರದಲ್ಲಿ ಬಾಗಿಯಾದ ಹಿರಿಯ ಅಧಿಕಾರಿಗಳು ಯಾರ್‍ಯಾರು; ಉನ್ನತ ಹುದ್ದೆ ಅಲಂಕರಿಸಿದ ಅಧಿಕಾರಿಯೊಬ್ಬರು ತಮ್ಮದೇ ಏಜೆನ್ಸಿಯೊಂದರ ಮೂಲಕ ಅವ್ಯವಹಾರ ನಡೆಸಿರುವ ಬಗ್ಗೆ ಹಿಂದಿನ ಅಧಿವೇಶನದಲ್ಲಿ ಪ್ರಸ್ತಾಪ ಮಾಡಿದ್ದು, ಈ ಕುರಿತು ತನಿಖೆ ಪ್ರಗತಿಯಲ್ಲಿರುತ್ತದೆಂದು ತಿಳಿಸಿದ ಪ್ರಕಾರ ಇಲ್ಲಿಯವರೆಗೆ ಆದ ತನಿಖೆ ಏನು ; (ವಿವರ ನೀಡುವುದು) ದುರುಪಯೋಗ ಪಡಿಸಿಕೊಂಡ ಅನುದಾನ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಏಪ್ರಾನ್ ಖರೀದಿಯಲ್ಲಿ ೨೦.೪೯ ಲಕ್ಷ ರೂಪಾಯಿಗಳ ದುರುಪಯೋಗವಾಗಿರುವುದು ನಿಜವೇ ; ಹಾಗಿದ್ದಲ್ಲಿ, ಈ ಬಗ್ಗೆ ಯಾವ ತನಿಖೆ ಕ್ರಮ ಕೈಗೊಳ್ಳಲಾಗಿದೆ ; ಇದರಲ್ಲಿ, ಶಾಮೀಲಾಗಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ಕರ್ತವ್ಯನಿರ್ವಹಿಸುತ್ತಿರುವ ನೌಕರರ ಭದ್ರತೆಯ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೫೧ (೧೪೮೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ಸುಮಾರು ೪,೦೦೦ ನೌಕರರು ನೇರ ನೇಮಕಾತಿ ಹಾಗೂ ವಿಲೀನಗೊಂಡು

ಕರ್ತವ್ಯನಿರ್ವಹಿಸುತ್ತಿದ್ದು, ನೇಮಕಾತಿಯಾಗಿ ೪ ವರ್ಷವಾದರೂ ಯಾವುದೇ ಸೇವಾ ಭದ್ರತೆಯಿಲ್ಲದೇ, ಬಹಳಷ್ಟು ಸಮಸ್ಯೆಗಳು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಲ್ಲಿಯವರೆಗೆ ಸುಮಾರು ೩೧ ಮೃತ ಪಟ್ಟ ನೌಕರರ ಕುಟುಂಬಕ್ಕೆ ಯಾವುದೇ ಕನಿಷ್ಠ ಪರಿಹಾರ ದೊರೆತಿರುವುದಿಲ್ಲ, ಹಾಗೂ ಇವರಿಗೆ ಗ್ರ್ಯಾಚುಟಿ ಇನ್ನಿತರೆ ಯಾವುದೇ ಉಳಿತಾಯ ಕಡಿತಗಳು ಆಗುತ್ತಿಲ್ಲ ಹಾಗೂ ವರ್ಗಾವಣೆ ನಿಯುಮ ಪಾಲಿಸುತ್ತಿಲ್ಲಾ ; ೪ ವರ್ಷವಾದರೂ ಸೇವಾ ಜ್ಯೇಷ್ಠತಾ ಪಟ್ಟಿಯುನ್ನು ಪ್ರಕಟಿಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸದರಿ ವಿಷಯದಲ್ಲಿ ಇಲ್ಲಿಯವರೆಗೆ ಏನು ಕ್ರಮ ಕೈಗೊಂಡಿರುತ್ತಾರೆ ? (ವಿವರ ನೀಡುವುದು)

## ಹೊಸದಾಗಿ ನಿರ್ಮಿಸುತ್ತಿರುವ ಬಸ್ ನಿಲ್ದಾಣಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೫೨ (೧೪೮೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚನ್ನರಾಯುಪಟ್ಟಣ ತಾಲ್ಲೂಕಿನಲ್ಲಿ ಹೊಸದಾಗಿ ನಿರ್ಮಾಣಗೊಳ್ಳುತ್ತಿರುವ ಬಸ್ ನಿಲ್ದಾಣಗಳು ಯಾವುವು ; (ವಿವರ ನೀಡುವುದು)

(ಆ) ಚನ್ನರಾಯಪಟ್ಟಣ ತಾಲ್ಲೂಕಿನ ಬಾಗೂರು ಹೋಬಳಿಯು ಸುಮಾರು ೫೦,೦೦೦ ಜನಸಂಖ್ಯೆ ಇರುವ ದೊಡ್ಡ ಹೋಬಳಿ ಕೇಂದ್ರವಾಗಿರುವುದರಿಂದ, ಸದರಿ ಹೋಬಳಿ ಕೇಂದ್ರದಲ್ಲಿ ಹೊಸದಾಗಿ ಬಸ್ ನಿಲ್ದಾಣದ ಕಾಮಗಾರಿ ಕೈಗೊಳ್ಳಲು ಉದ್ದೇಶಿಸಲಾಗಿದೆಯೇ ; ಉದ್ದೇಶಿಸಿದ್ದಲ್ಲಿ, ಬಸ್ ನಿಲ್ದಾಣದ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ? (ವಿವರ ಒದಗಿಸುವುದು)

## ಆಟೋ ಮತ್ತು ಟ್ಯಾಕ್ಸಿಗಳಲ್ಲಿ ಮಹಿಳೆಯರ ಬಗ್ಗೆ ಅಸಹ್ಯಕರ ಬರವಣಿಗೆ ಕುರಿತು

**ಡಾ : ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೬೫೩ (೧೪೧೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಬೆಂಗಳೂರು ನಗರದಲ್ಲಿ ಸಂಚರಿಸುತ್ತಿರುವ ಕೆಲ ಆಟೋ ಮತ್ತು ಟ್ಯಾಕ್ಸಿಗಳ ಹಿಂಭಾಗದಲ್ಲಿ ಮಹಿಳೆಯರ ಕುರಿತು ಕೆಳಕಂಡ ಕೆಲ ಮಾದರಿಯ ಅಸಹ್ಯಕರ ಬರವಣಿಗೆ/ಸ್ಟಿಕರ್ ಅಂಟಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

“My love only for my mom and dad, not Stupid girls”

‘Virgin hunterz’ “Don’t racing, I F**k you” ............

‘Don’t peep in it may by your daughter’..............

‘Be live a snake but not a girl’ ...............

‘Take poison but don’t believe in girls ..............

(ಆ) ಮಕ್ಕಳು ಮತ್ತು ಮಹಿಳೆಯರ ಮೇಲೆ ಹೆಚ್ಚಾಗುತ್ತಿರುವ ಲೈಂಗಿಕ ಶೋಷಣೆಯ ಹಿನ್ನಲೆಯಲ್ಲಿ ಮಹಿಳೆಯರನ್ನು ತುಚ್ಛೀಕರಿಸಿ, ಸಾರ್ವಜನಿಕವಾಗಿ ಹೀಯಾಳಿಸುತ್ತಿರುವ ಇಂತಹ ಬರಹಗಳ ನಿಯಂತ್ರಣಕ್ಕೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಕೆ.ಎಸ್.ಓ.ಯು ಕುರಿತು

**ಡಾ : ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೬೫೪ (೧೪೧೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ (ಕೆ.ಎಸ್.ಓ.ಯು)ದ ಮಾನ್ಯತೆಯನ್ನು ಯು.ಜಿ.ಸಿ. ರದ್ದುಪಡಿಸಿದ್ದು, ಮಾನ್ಯತೆಯ ಅವಧಿಯಲ್ಲಿ ವ್ಯಾಸಂಗ ಮಾಡಿ, ಪರೀಕ್ಷೆ ಬರೆದಿರುವ ವಿದ್ಯಾರ್ಥಿಗಳಿಗೆ ಅಂಕಪಟ್ಟಿಗಳನ್ನು ನೀಡಿದ್ದು, ಪ್ರಾವಿಷನಲ್ ಪದವಿ ಪ್ರಮಾಣಪತ್ರ ಮತ್ತು ಪದವಿ ಪ್ರಮಾಣ ಪತ್ರಗಳನ್ನು ನೀಡದಿರುವುದು, ಇನ್ನೂ ಕೆಲ ವಿದ್ಯಾರ್ಥಿಗಳು ಸದರಿ ವಿಶ್ವವಿದ್ಯಾಲಯದಿಂದ ನೋಂದಣಿ ಪಡೆದ ಖಾಸಗಿ ವಿದ್ಯಾಸಂಸ್ಥೆಗಳು/ಏಜೆನ್ಸಿಗಳ ಮೂಲಕ ಪರೀಕ್ಷೆ ಬರೆದಿದ್ದು, ಈ ವಿದ್ಯಾರ್ಥಿಗಳು ಕೂಡ ಇಂತಹದೆ ತೊಂದರೆಗಳನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣ ಪತ್ರಗಳನ್ನು ಕೊಡಿಸುವ ವ್ಯವಸ್ಥೆ ಸರ್ಕಾರ ಮಾಡುವುದು ?

## ಹೊಸ ಪ್ರೌಢ ಶಾಲೆಗಳನ್ನು ಪ್ರಾರಂಭಿಸುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೫೫ (೧೪೭೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನಲ್ಲಿ ಹೊಸದಾಗಿ ಪ್ರೌಢ ಶಾಲೆಗಳನ್ನು ಆರಂಭಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಇದ್ದಲ್ಲಿ, ಎಷ್ಟು ಪ್ರೌಢ ಶಾಲೆಗಳನ್ನು ಆರಂಭಿಸಲಾಗುವುದು ? (ಜಿಲ್ಲಾವಾರು ವಿವರ ನೀಡುವುದು)

## ಗ್ರಾಮೀಣ ಭಾಗದ ಕುಡಿಯುವ ನೀರಿನ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೫೬ (೧೪೭೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ತೊಂದರೆ ತೀವ್ರವಾಗಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ೨೦೧೭–೧೮ನೇ ಸಾಲಿನಲ್ಲಿ ಗ್ರಾಮೀಣ ಕುಡಿಯುವ ನೀರಿನ ಸೌಲಭ್ಯಕ್ಕಾಗಿ ಹೆಚ್ಚಿನ ಅನುದಾನ ನೀಡುವ ಯೋಜನೆ ಸರ್ಕಾರದ ಮುಂದೆ ಇದೆಯೇ ?

## ಗ್ರಾಮೀಣಾಭಿವೃದ್ಧಿ ಇಲಾಖೆಯ ಅಡಿಯಲ್ಲಿ ಸಾರ್ವಜನಿಕ ಸೌಲಭ್ಯ ನೀಡುವ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೫೭ (೧೪೨೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಕಂದಾಯ ಇಲಾಖೆಗಳ ಸಹಯೋಗದೊಂದಿಗೆ 'ಪಂಚಾಯತ್–೧೦೦' ರಡಿ ಎಷ್ಟು ಗ್ರಾಮ ಪಂಚಾಯತ್‌ಗಳಲ್ಲಿ ಬಾಪೂಜಿ ಸೇವಾ ಕೇಂದ್ರಗಳಿಗೆ ಚಾಲನೆ ನೀಡಲಾಗಿದೆ ;

(ಆ) ಈ ಗ್ರಾಮ ಪಂಚಾಯತ್‌ಗಳಲ್ಲಿ ಯಾವ ಯಾವ ಸೇವೆಗಳ ಪ್ರಮಾಣಪತ್ರವನ್ನು ವಿತರಿಸಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಒಂದೇ ಸೂರಿನಡಿ ಸೇವೆಗಳ ಪ್ರಮಾಣ ಪತ್ರವನ್ನು ಒದಗಿಸಲು ಗ್ರಾಮ ಪಂಚಾಯತ್‌ಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; ಇವುಗಳ ನಿರ್ವಹಣೆಯನ್ನು ಆಯಾ ಪಂಚಾಯತ್‌ಗಳೇ ನಿರ್ವಹಿಸುತ್ತಿದೆಯೇ; ಅಥವಾ ಬೇರೆ ಯಾವುದಾದರೂ ಸಂಸ್ಥೆಗೆ ವಹಿಸಿಕೊಡಲಾಗಿದೆಯೇ ;

(ಈ) ಹಾಗಿದ್ದಲ್ಲಿ, ಆ ಸಂಸ್ಥೆ/ಕಂಪನಿ ಯಾವುದು ; (ವಿವರ ನೀಡುವುದು) ಹಾಗೂ ತುಮಕೂರು ಜಿಲ್ಲೆಯಲ್ಲಿ ನಿರ್ವಹಣೆ ಮಾಡುತ್ತಿರುವ ಸಂಸ್ಥೆ/ಕಂಪನಿ ಯಾವುದು ; (ವಿವರ ನೀಡುವುದು)

(ಉ) ತುಮಕೂರು ಜಿಲ್ಲೆಯಲ್ಲಿ ಎಷ್ಟು ಗ್ರಾಮ ಪಂಚಾಯತ್‌ಗಳಲ್ಲಿ ಒಂದೇ ಸೂರಿನಡಿ ಸೇವೆಗಳ ಪ್ರಮಾಣ ಪತ್ರವನ್ನು ಒದಗಿಸಲು ಅವಕಾಶ ಕಲ್ಪಿಸಿಕೊಡಲಾಗಿದೆ ; ಇದಕ್ಕಾಗಿ ಖರ್ಚು ಮಾಡಲಾಗಿರುವ ಮೊತ್ತ ಎಷ್ಟು ;

(ಊ) ಒಂದೇ ಸೂರಿನಡಿ ಸೇವೆಗಳನ್ನು ಒದಗಿಸಲು ಮೂಲಭೂತ ಸೌಲಭ್ಯಗಳು/ಕಂಪ್ಯೂಟರ್/ಸಾಫ್ಟ್‌ವೇರ್/ಸಿಬ್ಬಂದಿ ಹೀಗೆ ಇತ್ಯಾದಿಗಳಗೆ ಒಟ್ಟು ಎಷ್ಟು ಹಣವನ್ನು ಖರ್ಚು ಮಾಡಿ ಎಷ್ಟು ಪಂಚಾಯತಿಗಳಿಗೆ ಈ ಸೇವೆ ನೀಡಲಾಗಿದೆ ; (ವಿವರ ನೀಡುವುದು)

(ಋ) ರಾಜ್ಯದ ಇನ್ನುಳಿದ ಗ್ರಾಮ ಪಂಚಾಯಿತಿಗಳಿಗೆ ಎಷ್ಟು ದಿನಗಳಲ್ಲಿ ಒಂದೇ ಸೂರಿನಡಿ ೧೦೦ ಸೇವೆಗಳನ್ನು ಒದಗಿಸಲಾಗುವುದು ಹಾಗೂ ಇದಕ್ಕಾಗಿ ಮಾಡಿಕೊಂಡಿರುವ ಸಿದ್ದತೆಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ತುಮಕೂರು ನಗರದ ಬಸ್ ನಿಲ್ದಾಣವನ್ನು ನಿರ್ಮಿಸುವ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೫೮ (೧೪೨೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ನಗರದಲ್ಲಿರುವ ಬಸ್ ನಿಲ್ದಾಣ ತುಂಬಾ ವರ್ಷಗಳ ಹಿಂದೆ ನಿರ್ಮಾಣಗೊಂಡಿದ್ದು, ಇತ್ತೀಚೆಗೆ ಕಟ್ಟಡದ ಒಂದು ಭಾಗ ಕುಸಿದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ತುಮಕೂರು ನಗರದ ಮೂಲಕ ಎರಡು ರಾಷ್ಟ್ರೀಯ ಹೆದ್ದಾರಿಗಳು ಹಾದು ಹೋಗಿರುವುದರಿಂದ ಮತ್ತು ತುಮಕೂರು ನಗರದ ಮೂಲಕವೇ ಉತ್ತರ ಕನ್ನಡದ ೭-೮ ಜಿಲ್ಲೆಗಳ ಸಾರಿಗೆ ಬಸ್‌ಗಳ ಸಂಚರಿಸಬೇಕಾಗಿರುವುದರಿಂದ, ಈಗಿರುವ ಬಸ್ ನಿಲ್ದಾಣವನ್ನು ಬೆಂಗಳೂರಿನ ಪೀಣ್ಯ ಬಸ್ ನಿಲ್ದಾಣದ ಮಾದರಿಯಲ್ಲಿ ನಿರ್ಮಿಸಲು ಸರ್ಕಾರಕ್ಕಿರುವ ತೊಂದರೆ ಏನು ; (ವಿವರ ನೀಡುವುದು)

(ಈ) ತುಮಕೂರು ನಗರವು ಮಹಾನಗರ ಪಾಲಿಕೆಯಾಗಿ ಮಾರ್ಪಟ್ಟಿದ್ದು, ದಿನೇ ದಿನೇ ಜನಸಂಖ್ಯೆಯು ಹೆಚ್ಚಾಗುತ್ತಿರುವುದರಿಂದ ಹಾಗೂ ಇತ್ತೀಚೆಗೆ ಕೇಂದ್ರ ಸರ್ಕಾರವು ತುಮಕೂರು ನಗರವನ್ನು ಸ್ಮಾರ್ಟ್ ಸಿಟಿ ಎಂದು ಘೋಷಣೆ ಮಾಡಿರುವುದರಿಂದ, ತುಮಕೂರು ನಗರಕ್ಕೆ ಒಂದು ಅತ್ಯಾಧುನಿಕ ಬಸ್ ನಿಲ್ದಾಣವನ್ನು ನಿರ್ಮಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮವೇನು ? (ವಿವರ ನೀಡುವುದು)

## ಪ್ರೌಢ ಶಾಲೆಗಳಲ್ಲಿ ಮಾಹಿತಿ ಸಿಂಧು ಯೋಜನೆ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೪೫ (೧೪೨೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗು ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಜಾರಿಯಲ್ಲಿದ್ದ ಉಚಿತ ಕಂಪ್ಯೂಟರ್ ಶಿಕ್ಷಣ ಯೋಜನೆಯು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದಲ್ಲಿ, ಎಷ್ಟು ವರ್ಷಗಳಿಂದ ಸ್ಥಗಿತಗೊಳಿಸಲಾಗಿದೆ ; ಇದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಇ) ರಾಜ್ಯ ಸರ್ಕಾರದ ಮಾಹಿತಿ ಸಿಂಧು, ಉಚಿತ ಕಂಪ್ಯೂಟರ್ ಶಿಕ್ಷಣವನ್ನು ಹೊರ ಗುತ್ತಿಗೆ ಮೇಲೆ ನೀಡಲಾಗಿತ್ತೆ ; ಹಾಗಿದ್ದಲ್ಲಿ, ಅಲ್ಲಿ ಕೆಲಸ ಮಾಡುತ್ತಿದ್ದ ಮಾಹಿತಿ ಸಿಂಧು ಕಂಪ್ಯೂಟರ್ ಶಿಕ್ಷಕರು ಕಳೆದ ೫ ವರ್ಷದಿಂದ ಅವರ ಕುಟುಂಬ ಸಮೇತ ಬೀದಿ ಪಾಲಾಗಿರುವ ಬಗ್ಗೆ ಸರ್ಕಾರದ ನಿಲುವೇನು ;

(ಈ) ಬಂದಿದ್ದಲ್ಲಿ, ಈ ಅನ್ಯಾಯವನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಬಡ ಹಳ್ಳಿಗಾಡಿನ ಮಕ್ಕಳಿಗೆ, ರೈತರ ಮಕ್ಕಳಿಗೆ ಕೂಲಿ ಕಾರ್ಮಿಕರ ಮಕ್ಕಳಿಗೆ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಈ ಮಾಹಿತಿ ಸಿಂಧು ಉಚಿತ ಕಂಪ್ಯೂಟರ್ ಶಿಕ್ಷಣವನ್ನು ನೀಡಲು ಸರ್ಕಾರ ಯಾವ ರೀತಿ ಕ್ರಮ ತೆಗೆದುಕೊಂಡಿದೆ ?

## ರಾಜ್ಯದಲ್ಲಿರುವ ಗ್ರಾಮ ಪಂಚಾಯತ್‌ಗಳ ಸ್ವಂತ ಕಟ್ಟಡಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೦ (೧೪೨೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಗ್ರಾಮ ಪಂಚಾಯತ್‌ಗಳ ಸಂಖ್ಯೆ ಎಷ್ಟು; ಈ ಗ್ರಾಮ ಪಂಚಾಯತ್‌ಗಳಿಗೆ ಸ್ವಂತ ಕಟ್ಟಡಗಳಿವೆಯೇ ; ಇಲ್ಲದಿದ್ದಲ್ಲಿ, ಕಟ್ಟಡಗಳನ್ನು ಒದಗಿಸಬೇಕಾದ ಗ್ರಾಮ ಪಂಚಾಯತ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಪ್ರತಿ ಗ್ರಾಮ ಪಂಚಾಯತ್‌ಗಳಿಗೆ ಪಿ.ಡಿ.ಓ. ಗಳನ್ನು ಕಾರ್ಯದರ್ಶಿಗಳನ್ನು ನೇಮಕ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ/ಕಾರ್ಯದರ್ಶಿಗಳಿಗೆ/ ಲೆಕ್ಕಸಹಾಯಕರಿಗೆ ಸರ್ಕಾರದ ಅನುದಾನದಲ್ಲಿ ಸಂಬಳ ನೀಡಲಾಗುತ್ತಿದೆಯೇ ; ಹೌದಾದಲ್ಲಿ, ಪಂಚಾಯತಿಯಲ್ಲಿರುವ ಇನ್ನುಳಿದ ಸಿಬ್ಬಂದಿಗಳಿಗೆ ಸರ್ಕಾರದ ಅನುದಾನದಲ್ಲಿ ವೇತನ ನೀಡಲು ಸರ್ಕಾರಕ್ಕಿರುವ ತೊಂದರೆಯೇನು ;(ವಿವರ ನೀಡುವುದು)

(ಈ) ತುಮಕೂರು ಜಿಲ್ಲೆಯಲ್ಲಿ ಕಟ್ಟಡಗಳಿಲ್ಲದೆ ಗ್ರಾಮ ಪಂಚಾಯತ್‌ಗಳ ಸಂಖ್ಯೆ ಎಷ್ಟು ; ಈ ಪಂಚಾಯ್‌ಗಳಿಗೆ ಎಷ್ಟು ದಿವಸಗಳಲ್ಲಿ ಕಟ್ಟಡಗಳನ್ನು ಕಟ್ಟಿಸಿಕೊಡಲಾಗುವುದು ;

(ಉ) ತುಮಕೂರು ಜಿಲ್ಲೆಯಲ್ಲಿರುವ ಗ್ರಾಮ ಪಂಚಾಯತ್‌ಗಳಲ್ಲಿ ಖಾಲಿ ಇರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ/ಕಾರ್ಯದರ್ಶಿಗಳ/ ಲೆಕ್ಕ ಸಹಾಯಕರ ಹುದ್ದೆಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಊ) ಖಾಲಿ ಇರುವ ಹುದ್ದೆಗಳನ್ನು ಎಷ್ಟು ದಿವಸಗಳಲ್ಲಿ ತುಂಬಲಾಗುವುದು ; (ಖಚಿತ ಉತ್ತರ ನೀಡುವುದು)

(ಋ) ಪಂಚಾಯತ್‌ಗಳಲ್ಲಿ ಖಾಲಿ ಇರುವ ಹುದ್ದೆಗಳಿಂದ ಗ್ರಾಮ ಪಂಚಾಯತ್ ವ್ಯಾಪ್ತಿಯ ಅಭಿವೃದ್ಧಿ ಕಾಮಗಾರಿಗಳು ಕುಂಠಿತಗೊಂಡಿಲ್ಲವೇ ; ಈ ಬಗ್ಗೆ ಸರ್ಕಾರ ಕೂಡಲೇ ಕ್ರಮ ವಹಿಸುವುದೇ ?

## ತುಮಕೂರು ತಾಲ್ಲೂಕು ಊರಕೆರೆ ಗ್ರಾಮ ಪಂಚಾಯಿತಿಗೆ ಸೇರಿದ ರಸ್ತೆ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೧ (೧೪೨೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ನಗರಕ್ಕೆ ಹೊಂದಿಕೊಂಡಿರುವ ತುಮಕೂರು ತಾಲ್ಲೂಕು ಊರಕೆರೆ ಗ್ರಾಮ ಪಂಚಾಯಿತಿಗೆ ಸೇರಿದ ಹೆಬ್ಬಾಕ ಗ್ರಾಮಕ್ಕೆ ಹೋಗಲು ಅಲ್ಲಿನ ಗ್ರಾಮಸ್ಥರು ಹೆಬ್ಬಾಕ ಕೆರೆ ಏರಿ ರಸ್ತೆ ಅವಲಂಭಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಆ ಕೆರೆ ಏರಿ ರಸ್ತೆಯ ಅವ್ಯವಸ್ಥೆ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ; (ವಿವರ ನೀಡುವುದು)

(ಇ) ರಾಷ್ಟ್ರೀಯ ಹೆದ್ದಾರಿಯಿಂದ ಕೇವಲ ೨ ಕಿ.ಮೀ. ದೂರದಲ್ಲಿರುವ ಈ ಗ್ರಾಮಕ್ಕೆ ೮–೧೦ ವರ್ಷಗಳಿಂದಲೂ ರಸ್ತೆ ಇಲ್ಲದೆ ಹೆಬ್ಬಾಕ ಕೆರೆ ಏರಿ ಮೇಲೆ ಓಡಾಡಿದರೆ ಸಾವಿನ ಮೇಲೆ ಸವಾರಿ ಎನ್ನುವ ಈ ಗ್ರಾಮಕ್ಕೆ ಈಗಲಾದರೂ ರಸ್ತೆ ನಿರ್ಮಾಣ ಮಾಡಲಾಗುವುದೇ?

## ನಗರಗಳಲ್ಲಿ ವಾಹನ ದಟ್ಟಣೆ ಅತಿಯಾಗಿ ರಸ್ತೆಯಲ್ಲಿ ಸಮಯ ಮತ್ತು ಅಮೂಲ್ಯ ಇಂಧನ ಪೋಲಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೨ (೧೬೦೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ನಗರಗಳಲ್ಲಿ ವಾಹನ ದಟ್ಟಣೆ ಅತಿಯಾಗಿ ಜನಜೀವನ ಗತಿ ನಿಧಾನವಾಗುತ್ತಿರುವುದು, ಸಮಯ ಹಾಗೂ ಅಮೂಲ್ಯ ಇಂಧನ ಪೋಲಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಸ್ತೆಯಲ್ಲಿ ಕಿರಿಕಿರಿ ತಪ್ಪಿಸಿ, ಸಮಯ ಹಾಗೂ ಅಮೂಲ್ಯ ಇಂಧನ ಉಳಿಸುವ ನಿಟ್ಟಿನಲ್ಲಿ ಸರ್ಕಾರ ಯಾವ ಯಾವ ವೈಜ್ಞಾನಿಕ ನಿಯಮಗಳನ್ನು ರೂಪಿಸಲಿದೆ ; ಈಗಾಗಲೇ ಜಾರಿಯಲ್ಲಿರುವ ನಿಯಮಗಳೇನು ;

(ಇ) ರಸ್ತೆಯಲ್ಲಿ ಕಾನೂನಿನ ನಿಯಮ ಉಲ್ಲಂಘಿಸುವ ವಾಹನ ಸವಾರರಿಗೆ ಏನೇನು ಕಠಿಣ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು; ಅವರಿಗೆ ವಿಧಿಸುವ ಶುಲ್ಕಗಳು ಎಷ್ಟು ; (ವಿವರ ಒದಗಿಸುವುದು)

(ಈ) ರಸ್ತೆ ನಿಯಮ ಉಲ್ಲಂಘನೆ ಮಾಡುವವರನ್ನು ನಿಯಂತ್ರಿಸಲು ಹಾಗೂ ರಸ್ತೆ ಅಪಘಾತಗಳನ್ನು ತಪ್ಪಿಸಿ ಟ್ರಾಫಿಕ್ ಜಾಮ್ ನಿಯಂತ್ರಣದಲ್ಲಿ ತರಲು ಸರ್ಕಾರ ಇನ್ನೂ ಕಠಿಣ ನಿಯಮಗಳನ್ನು ರೂಪಿಸಲು ಚಿಂತಿಸುತ್ತಿದೆಯೇ ? (ವಿವರ ನೀಡುವುದು)

## ರಾಜ್ಯದೊಳಕ್ಕೆ ಅಕ್ರಮವಾಗಿ ಮರಳು ಸಾಗಾಣಿಕೆಯಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೩ (೧೬೦೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅತಿ ಹೆಚ್ಚು ಬೇಡಿಕೆಯಿರುವ ಮರಳು ತಮಿಳುನಾಡಿನಿಂದ ರಾಜ್ಯದೊಳಕ್ಕೆ ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಅಕ್ರಮವಾಗಿ ಮರಳು ಸಾಗಾಣಿಕೆ ಮಾಡುತ್ತಿರುವ ಮರಳು ದಂಧೆಕೋರರ ವಿರುದ್ಧ ಸರ್ಕಾರ ಏನು ಕ್ರಮಗಳನ್ನು ಕೈಗೊಂಡಿದೆ ; ಅಕ್ರಮವಾಗಿ ರಾಜ್ಯದೊಳಕ್ಕೆ ನುಸುಳುವ ಮರಳು ಲಾರಿಗಳನ್ನು ತಡೆಯಲು ಸರ್ಕಾರ ಏನೇನು ಕ್ರಮಗಳನ್ನು ತೆಗೆದುಕೊಂಡಿದೆ ;

(ಇ) ಪರರಾಜ್ಯಗಳಿಂದ ರಾಜ್ಯದೊಳಕ್ಕೆ ಅಕ್ರಮ ಮರಳು ಯಾವ ಯಾವ ಮಾರ್ಗಗಳ ಮೂಲಕ ಸಾಗಿಸಲಾಗುತ್ತಿದೆ ; ಅಕ್ರಮ ಮರಳು ಸಾಗಾಣಿಕೆ ಮಾರ್ಗಗಳನ್ನು ಗುರುತಿಸಲಾಗಿದೆಯೇ ; ಅವು ಯಾವುವು ;

(ಈ) ರಾಜ್ಯದಲ್ಲಿನ ಮರಳು ಬೇಡಿಕೆಯನ್ನು ಪೂರೈಸುವ ಹಿನ್ನೆಲೆಯಲ್ಲಿ ಸರ್ಕಾರವು ಏನು ಕ್ರಮಗಳನ್ನು ಕೈಗೊಳ್ಳಲಿದೆ ; ಹೀಗಿರುವ ಕಠಿಣ ಮರಳು ಸಾಗಾಣಿಕೆ ನಿಯಮಗಳನ್ನು ಸಡಿಲಿಸುವ ಚಿಂತನೆಯಿದೆಯೇ ;

(ಉ) ಬದಲಿ ಮರಳಾದ ಎಂ.ಸ್ಯಾಂಡ್ ಉತ್ಪಾದನೆ ಘಟಕ ಸ್ಥಾಪಿಸಲು ಸರ್ಕಾರವು ರೂಪಿಸಿರುವ ಮಾರ್ಗಸೂಚಿಗಳೇನು ; ಎಂ.ಸ್ಯಾಂಡ್ ಉತ್ಪಾದನೆ ಘಟಕ ಸ್ಥಾಪಿಸುವವರಿಗೆ ಸರ್ಕಾರವು ಯಾವ ಯಾವ ಪ್ರೋತ್ಸಾಹಗಳನ್ನು ನೀಡುತ್ತದೆ ; ಇದರಲ್ಲಿ ಮಹಿಳಾ ಸ್ವಾವಲಂಭಿಗಳಿಗೆ ಸರ್ಕಾರವು ಏನೇನು ನೆರವು ನೀಡಲಿದೆ ; ಮಾರ್ಗಸೂಚಿಗಳೇನು ? (ವಿವರ ನೀಡುವುದು)

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆಯ ಅಭಿವೃದ್ಧಿ ಕಾರ್ಯಗಳು ಅನುದಾನ ಕೊರತೆಯಿಂದ ಅಪೂರ್ಣವಾಗಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೪ (೧೬೦೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣ ಭಾಗದ ಪ್ರಗತಿಗೆ ಪೂರಕವಾಗಿ ಕಾರ್ಯನಿರ್ವಹಿಸುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ೨೦೧೬–೧೭ನೇ ಸಾಲಿನ ಅಭಿವೃದ್ಧಿ ಕಾರ್ಯಗಳು ಅರ್ಧಕ್ಕೆ ಕುಂಠಿತಗೊಂಡು ಅಪೂರ್ಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ೨೦೧೪–೧೫, ೨೦೧೫–೧೬ ಹಾಗೂ ೨೦೧೬–೧೭ನೇ ಸಾಲಿಗೆ, ಇಲಾಖೆಗೆ ಸರ್ಕಾರ ಹಂಚಿಕೆ ಮಾಡಿದ್ದ ಅನುದಾನವೆಷ್ಟು ; ಅದರಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; ಬಾಕಿ ಅನುದಾನವೆಷ್ಟು ; (ವರ್ಷವಾರು ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಇಲಾಖೆಗೆ ಕೇಂದ್ರ ಸರ್ಕಾರದಿಂದ ವಿವಿಧ ಯೋಜನೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; ಅದರಲ್ಲಿ ಬಳಕೆಯಾದ ಅನುದಾನವೆಷ್ಟು ; ಉಳಿದ ಅನುದಾನವೆಷ್ಟು; (ವಿವರ ನೀಡುವುದು)

(ಈ) ಕಳೆದ ವರ್ಷದ ಬಜೆಟ್‌ನಲ್ಲಿ ಘೋಷಣೆಯಾದ ಇಲಾಖೆಯ ಯೋಜನೆಗಳಾವುವು ; ಅವುಗಳಲ್ಲಿ ಅನುಷ್ಠಾನಗೊಂಡ ಯೋಜನೆಗಳಾವುವು ; ಅಪೂರ್ಣಗೊಂಡ ಯೋಜನೆಗಳಾವುವು ; (ಪ್ರತಿ ಶತ ವಿವರ ನೀಡುವುದು)

(ಉ) ಅವುಗಳಿಗೆ ಹಂಚಿಕೆಯಾಗಿದ್ದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ? (ವಿವರ ನೀಡುವುದು)

# ಬೆಳಗಾವಿ ಜಿಲ್ಲೆಯ ಕೊಳಗೇರಿ ಪ್ರದೇಶಗಳು ಅಭಿವೃದ್ಧಿಯಾಗದೆ ಇರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೫ (೧೬೦೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಾದ್ಯಾದಂತ ಕೊಳಗೇರಿ(ಸ್ಲಂ) ಪ್ರದೇಶಗಳ ಅಭಿವೃದ್ಧಿಗೆ ಹಾಗೂ ಮೂಲ ಸೌಕರ್ಯಕ್ಕಾಗಿ ಕೋಟಿ ಕೋಟಿ ಹಣ ಖರ್ಚು ಮಾಡಿದ್ದರೂ ಕೊಳಗೇರಿ ಪ್ರದೇಶಗಳಲ್ಲಿ ಯಾವುದೇ ಅಭಿವೃದ್ಧಿಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ೨೦೧೪-೧೫, ೨೦೧೫-೧೬ ಮತ್ತು ೨೦೧೬-೧೭ನೇ ಸಾಲಿಗೆ ಜಿಲ್ಲೆಯ ಕೊಳಗೇರಿ ಪ್ರದೇಶಗಳ ಅಭಿವೃದ್ಧಿಗೆ ಸರ್ಕಾರ ಮೀಸಲಿರುವ ಹಣವೆಷ್ಟು ; ಬಿಡುಗಡೆಯಾದ ಬಾಕಿ ಇರುವ ಹಣವೆಷ್ಟು ;

(ಇ) ಸರ್ಕಾರ ಕೋಟಿ ಕೋಟಿ ಹಣ ಸುರಿದರೂ ಕೊಳಗೇರಿ ಪ್ರದೇಶಗಳಲ್ಲಿ ಯಾವುದೇ ಬದಲಾವಣೆ ಆಗದೆ ಇರಲು ಕಾರಣಗಳೇನು ; ಯಾವ ಕಾಲಮಿತಿಯೊಳಗೆ ಸದರಿ ಪ್ರದೇಶಗಳು ಮೂಲ ಸೌಕರ್ಯಗಳಿಂದ ಅಭಿವೃದ್ಧಿಯಾಗಲಿವೆ ;

(ಈ) ಜಿಲ್ಲೆಯಾದ್ಯಾದಂತ ಎಷ್ಟು ಕೊಳಗೇರಿ ಪ್ರದೇಶಗಳನ್ನು ಗುರುತಿಸಲಾಗಿದೆ ; ಅವು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು) ಅವುಗಳಲ್ಲಿ ಎಷ್ಟು ಪ್ರದೇಶಗಳು ಅಭಿವೃದ್ಧಿಯಾಗಿವೆ; ಎಷ್ಟು ಪ್ರಗತಿಯಲ್ಲಿವೆ ? (ವಿವರ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಪ್ರದೇಶದ ವ್ಯಾಪ್ತಿಯಲ್ಲಿರುವ ಪ್ರಾಥಮಿಕ ಶಾಲೆಗಳು

**ಶ್ರೀ ಕೆ.ಸಿ.ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೬ (೧೪೩೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶಗಳಲ್ಲಿರುವ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ; ವಿವಿಧ ಮಾದ್ಯಮಗಳ ಹಾಗೂ ಅನುದಾನಿತ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸದರಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಹೊಂದಿರದ ಶಾಲೆಗಳು ಎಷ್ಟು ; ಮತ್ತು ಸದರಿ ಸೌಕರ್ಯಗಳನ್ನು ಒದಗಿಸಿಕೊಡುವಲ್ಲಿ ಸರ್ಕಾರದ ಸಕಾಲಿಕ ಕ್ರಮಗಳು ಯಾವುವು ;

(ಇ) ಭಾಷಾ ಮಾದ್ಯಮ ಶಾಲೆಗಳನ್ನು ಜನಪ್ರಿಯಗೊಳಿಸುವ ಮೂಲಕ ಸರ್ಕಾರಿ ಶಾಲೆಗಳನ್ನು ಉಳಿಸಿಕೊಳ್ಳುವ ದಿಶೆಯಲ್ಲಿ ಸರ್ಕಾರದ ಕ್ರಿಯಾಯೋಜನೆಗಳು ಯಾವುವು ?

## ಸರ್ಕಾರಿ ಶಾಲೆಗಳಿಗೆ ಸಮವಸ್ತ್ರ ಪೂರೈಕೆ ಕುರಿತು

**ಶ್ರೀ ಕೆ.ಸಿ.ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೭ (೧೪೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಾಲಾ ಮಕ್ಕಳಿಗೆ ಸಮವಸ್ತ್ರ ಪೂರೈಕೆಯ ಅನುಷ್ಠಾನದಲ್ಲಿ ಸರ್ಕಾರವು ವಿನಿಯೋಗಿಸುತ್ತಿರುವ ಅನುದಾನದ ಮೊತ್ತ ಎಷ್ಟು ; (ಮೂರು ವರ್ಷಗಳ ವಿವರಗಳನ್ನು ನೀಡುವುದು) ಒಟ್ಟು ವಿದ್ಯಾರ್ಥಿಗಳು ಪ್ರಮುಖ ಯೋಜನೆಯ ಸೌಲಭ್ಯವನ್ನು ಪಡೆಯುತ್ತಿದ್ದಾರೆ ;

(ಆ) ಸಮವಸ್ತ್ರ ಪೂರೈಕೆಗಾಗಿ ಪ್ರಸ್ತುತ ವಿಧಿಸಿರುವ ಮಾನದಂಡಗಳು ಮತ್ತು ನೀತಿನಿಯಮಗಳು ಯಾವುವು ; (ವಿವರ ನೀಡುವುದು)

(ಇ) ಸಮವಸ್ತ್ರ ಸರಬರಾಜನ್ನು ರಾಜ್ಯ ಕೈಮಗ್ಗ ಅಭಿವೃದ್ಧಿ ನಿಗಮದವರಿಗೆ ಪೂರ್ಣ ಪ್ರಮಾಣದಲ್ಲಿ ನೀಡುವ ಮೂಲಕ ಕ್ಷೀಣಿಸುತ್ತಿರುವ ಕೈಮಗ್ಗ ಗುಡಿ ಕೈಗಾರಿಕೆ ಮತ್ತು ನಿಗಮಕ್ಕೆ ಪುನಃಶ್ಚೇತನ ನೀಡಲು ಕುರಿತಾದ ಸರ್ಕಾರದ ನಿಲುವುಗಳೇನು ?

## ಗ್ರಾಮ ಪಂಚಾಯತ್‌ಗಳು ತೆರಿಗೆ ವಿಧಿಸಿ ವಸೂಲಿ ಮಾಡುವಲ್ಲಿ ವಿಫಲವಾಗುತ್ತಿರುವ ಕುರಿತು ಮತ್ತು ಆದಾಯ ಕೋರಿಕೆ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೮ (೧೫೦೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯತ್‌ಗಳು ಸ್ವಂತ ಸಂಪನ್ಮೂಲ ಕ್ರೋಢೀಕರಣಕ್ಕಾಗಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ಕಾಯಿದೆಯಲ್ಲಿ ಪ್ರದತ್ತವಾದ ಅಧಿಕಾರವನ್ನು ಬಳಸಿಕೊಳ್ಳಲು ವಿಫಲವಾಗಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಆ) ಗ್ರಾಮ ಪಂಚಾಯತ್‌ಗಳ ಒಟ್ಟು ಸ್ವಂತ ಸಂಪನ್ಮೂಲದ ಬೇಡಿಕೆ–ವಸೂಲಿ–ಬಾಕಿ ಎಷ್ಟು ; (ಕಳೆದ ೩ ವರ್ಷದ ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು ; ಗ್ರಾಮ ಪಂಚಾಯತ್‌ನ ಸ್ವಂತ ಸಂಪನ್ಮೂಲ ಕ್ರೋಢೀಕರಣಕ್ಕಾಗಿ ತೆರಿಗೆ, ಶುಲ್ಕ ವಿಧಿಸಿ ವಸೂಲಿ ಮಾಡಲು ಇರುವ ಅವಕಾಶಗಳೇನು ;

(ಇ) ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿರುವ ಮೊಬೈಲ್ ಟವರ್, ವಿಂಡ್ ಮಿಲ್, ಓ.ಎಫ್.ಸಿ. ಕೇಬಲ್, ಖಾಸಗಿ ವಿದ್ಯಾ ಸಂಸ್ಥೆಗಳು, ವಿಮಾನ ನಿಲ್ದಾಣ, ಎಸ್.ಇ.ಝಡ್, ಸಂಖ್ಯೆ ಎಷ್ಟು ; ಎಷ್ಟು

ಪ್ರಕರಣದಲ್ಲಿ ತೆರಿಗೆ/ಶುಲ್ಕ ವಿಧಿಸಲಾಗಿದೆ ; ತೆರಿಗೆ/ಶುಲ್ಕ ವಿಧಿಸಲು ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿರುವ ಮೊಬೈಲ್ ಟವರ್, ವಿಂಡ್ ಮಿಲ್, ಓ.ಎಫ್.ಸಿ. ಕೇಬಲ್, ಖಾಸಗಿ ವಿದ್ಯಾ ಸಂಸ್ಥೆಗಳು, ವಿಮಾನ ನಿಲ್ದಾಣ, ಎಸ್.ಇ.ಝಡ್‌ಗಳಿಗೆ, ತೆರಿಗೆ ಮತ್ತು ಶುಲ್ಕ ವಿಧಿಸಲು ಕಾಯಿದೆಯಲ್ಲಿ ಅವಕಾಶ ಕಲ್ಪಿಸಲಾಗಿದ್ದರೂ ತೆರಿಗೆ ವಿಧಿಸಿ ವಸೂಲಿ ಮಾಡದೆ ಇರಲು ಕಾರಣವೇನು ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ತೆರಿಗೆ ಶುಲ್ಕಗಳನ್ನು ವಿಧಿಸಿ ನಿಯಮಿತವಾಗಿ ವಸೂಲಿ ಮಾಡಲು, ಆದಾಯ ಸೋರಿಕೆ ತಡೆಯಲು ಹಾಗೂ ಗ್ರಾಮ ಪಂಚಾಯತ್ ಸ್ವಂತ ಸಂಪನ್ಮೂಲ ಹೆಚ್ಚಳಕ್ಕೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಶಿಕ್ಷಣ ಹಕ್ಕು ಕಾಯಿದೆ ಅನುಷ್ಠಾನದಲ್ಲಿನ ಗೊಂದಲಗಳ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೯ (೧೫೦೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿಕ್ಷಣ ಹಕ್ಕು ಕಾಯ್ದೆಯಡಿ ಕಳೆದ ಸಾಲಿನಲ್ಲಿ ಲಭ್ಯವಿದ್ದ ಸೀಟುಗಳ ಸಂಖ್ಯೆ ಎಷ್ಟು ; ದಾಖಲಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಶಿಕ್ಷಣ ಹಕ್ಕು ಕಾಯ್ದೆಯಡಿ ಪ್ರಸಕ್ತ ಸಾಲಿನಲ್ಲಿ ಲಭ್ಯವಿರುವ ಸೀಟುಗಳ ಸಂಖ್ಯೆ ಎಷ್ಟು ; ದಾಖಲಾತಿಗೆ ಇರುವ ಅರ್ಹತೆ ಮಾನದಂಡಗಳೇನು ; ಅರ್ಜಿಗಳನ್ನು ಯಾವಾಗ ಪ್ರಾರಂಭಿಸಿ ಯಾವಾಗ ಆಯ್ಕೆ ಪ್ರಕಟಿಸಲಾಗುವುದು ;

(ಇ) ಶಿಕ್ಷಣ ಹಕ್ಕು ಕಾಯ್ದೆ ಅನುಷ್ಠಾನಕ್ಕಾಗಿ ಕಳೆದ ೨ ವರ್ಷದಲ್ಲಿ ವಿನಿಯೋಗಿಸಿದೆ ಹಾಗೂ ಪ್ರಸಕ್ತ ಸಾಲಿನಲ್ಲಿ ಕಾಯ್ದಿರಿಸಿದ ಅನುದಾನ ಎಷ್ಟು ;

(ಈ) ಕಠಿಣ ಮಾನದಂಡ ಜಾರಿ ಮಾಡಿ ಬಡವರ ಮಕ್ಕಳು ಆರ್.ಟಿ.ಇ ಕಾಯ್ದೆಯಡಿ ಖಾಸಗಿ ಸಂಸ್ಥೆಯಲ್ಲಿ ಶಿಕ್ಷಣ ಪಡೆಯುವುದರಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಕಳೆದ ಸಾಲಿನಲ್ಲಿ ಆರ್.ಟಿ.ಇ ಅನುಷ್ಠಾನದಲ್ಲಿ ಮಾರ್ಗಸೂಚಿಯಲ್ಲಿ ಗೊಂದಲ ನಿರ್ಮಾಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಪ್ರಸಕ್ತ ಸಾಲಿನಲ್ಲಿ ಲಭ್ಯವಿರುವ ಆರ್.ಟಿ.ಇ ಸೀಟುಗಳ ಅರ್ಹ ಬಡ ವಿದ್ಯಾರ್ಥಿಗಳಿಗೆ ಲಭಿಸುವಂತೆ ಮಾಡಲು ಹಾಗೂ ಗೊಂದಲವಿಲ್ಲದೆ ವಿದ್ಯಾರ್ಥಿಗಳ ದಾಖಲಾತಿಗೆ ಪೋಷಕರಿಗೆ ಸಹಾಯವಾಗುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಋ) ಆರ್.ಟಿ.ಇ ಮಾರ್ಗಸೂಚಿ ಸಡಿಲಗೊಳಿಸಿ, ಬಡ ಮಕ್ಕಳು ಹತ್ತಿರದ ಖಾಸಗಿ ಶಾಲೆಯಲ್ಲಿ ದಾಖಲಾತಿ ಪಡೆಯಲು ಅವಕಾಶವಾಗುವಂತೆ ಕ್ರಮ ವಹಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಪಿ.ಡಿ.ಓ ಹುದ್ದೆ ಮೇಲ್ದರ್ಜೆಗೇರಿಸುವುದು ಮತ್ತು ಆರ್.ಡಿ.ಓ ಹಾಗೂ ಸಹಾಯ ನಿರ್ದೇಶಕರ ಹೆಚ್ಚುವರಿ ಹುದ್ದೆ ಸೃಜನೆ ನೇಮಕಾತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೭೦ (೧೫೦೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರ ಈ ಹಿಂದೆ ಘೋಷಿಸಿದಂತೆ, ಆರ್.ಡಿ.ಓ ಹುದ್ದೆ ನೇಮಕಾತಿ ಪ್ರಕ್ರಿಯೆ ಯಾವ ಹಂತದಲ್ಲಿದೆ ; ಆರ್.ಡಿ.ಓ ಹುದ್ದೆ ನೇಮಕಾತಿ ಪ್ರಕ್ರಿಯೆ ನೆನೆಗುದಿಗೆ ಬೀಳಲು ಕಾರಣಗಳೇನು ;

(ಆ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಆರ್.ಡಿ.ಓ ಹುದ್ದೆಯ ಅವಶ್ಯಕತೆಯ ಕುರಿತು ಸರ್ಕಾರದ ನಿಲುವೇನು ;

(ಇ) ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್–ಬಿ ದರ್ಜೆಗೆ ಎರಿಸುವ ಪ್ರಸ್ತಾವನೆ ದೀರ್ಘಕಾಲದಿಂದ ಅನುಮೋದನೆಯಾಗದೆ ಬಾಕಿಯಿರಲು ಕಾರಣಗಳೇನು ; ಯಾವಾಗ ಹುದ್ದೆ ಮೇಲ್ದರ್ಜೆಗೇರಿಸಲಾಗುವುದು ;

(ಈ) ತಾಲ್ಲೂಕು ಪಂಚಾಯತ್ ಮಟ್ಟದಲ್ಲಿ ಹೆಚ್ಚುವರಿ ಸಹಾಯಕ ನಿರ್ದೇಶಕರ ಹುದ್ದೆ ಸೃಜನೆಯು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಈ ಕುರಿತು ಜಿಲ್ಲಾ ಪಂಚಾಯತ್‌ಗಳಿಂದ ವರದಿ ಪಡೆಯಲಾಗಿದೆಯೇ ; (ವರದಿಯ ಪ್ರತಿಯನ್ನು ಒದಗಿಸುವುದು)

(ಉ) ತಾಲ್ಲೂಕು ಪಂಚಾಯತ್ ಮಟ್ಟದಲ್ಲಿ ಯೋಜನೆಗಳಿಗೆ ಹಾಗೂ ಆಡಳಿತಕ್ಕಾಗಿ ಎರಡಕ್ಕಿಂತ ಹೆಚ್ಚು ಸಹಾಯಕ ನಿರ್ದೇಶಕರ ಹುದ್ದೆ ಸೃಜನೆಯ ಅವಶ್ಯಕತಕೆಯ ಕುರಿತು ಸರ್ಕಾರದ ನಿಲುವೇನು ;

(ಊ) ಆರ್.ಡಿ.ಓ ಹುದ್ದೆ ಹಾಗೂ ಹೆಚ್ಚುವರಿ ಸಹಾಯಕ ನಿರ್ದೇಶಕರ ಹುದ್ದೆ ಸೃಜನೆ ಹಾಗೂ ಶೀಘ್ರವಾಗಿ ಭರ್ತಿಮಾಡುವ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ; ಯಾವಾಗ ಈ ಕುರಿತು ಕ್ರಮ ಕೈಗೊಳ್ಳಲಿದೆ ?

## ಉಡುಪಿ ನಗರದಲ್ಲಿ ಸುಸಜ್ಜಿತ ಸರಕಾರಿ ಬಸ್ ನಿಲ್ದಾಣ ನಿರ್ಮಾಣ ಮಾಡುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೭೧ (೧೪೪೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ನಗರದಲ್ಲಿ ಸುಸಜ್ಜಿತ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸು ನಿಲ್ದಾಣ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಉಡುಪಿ ಜಿಲ್ಲೆಯಲ್ಲಿ ನಗರ ಸಾರಿಗೆ ಹಾಗೂ ಕೆ.ಎಸ್.ಆರ್.ಟಿ.ಸಿ. ಬಸ್ಸುಗಳಿಗೆ ಸುಸಜ್ಜಿತ ನಿಲ್ದಾಣ ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಹಂತದಲ್ಲಿದೆ ; ವಿಳಂಬಕ್ಕೆ ಕಾರಣಗಳೇನು ;

(ಇ) ನಗರ ಹಾಗೂ ಗ್ರಾಮಾಂತರ ಸಾರಿಗೆಗಾಗಿ ಉಚಿತ ನಿವೇಶನ ಮಂಜೂರಾಗಿ ೨ ವರ್ಷ ಸಂದರೂ, ನಿಲ್ದಾಣ ಪ್ರಾರಂಭಿಸುದಿರುವುದಕ್ಕೆ ಕಾರಣಗಳೇನು ;

(ಈ) ಉಡುಪಿ ಜಿಲ್ಲೆಯ ಗ್ರಾಮೀಣ ಪ್ರದೇಶಗಳಿಗೆ, ಇನ್ನೂ ಸರ್ಕಾರಿ ಸಾರಿಗೆ ಸಂಸ್ಥೆಯ ಬಸ್ಸುಗಳನ್ನು ಓಡಿಸದೇ ಇರುವುದಕ್ಕೆ ಖಾಸಗಿ ಲಾಭಿ ಕಾರಣ ಎನ್ನುವ ಸಾರ್ವಜನಿಕರ ಆರೋಪ ನಿಜವೇ ;

(ಉ) ಉಡುಪಿ ಜಿಲ್ಲೆಯ ಪ್ರತಿಯೊಂದು ಹಳ್ಳಿಗಳಿಗೂ ಸರ್ಕಾರಿ ಬಸ್ ಸೌಲಭ್ಯ, ಪ್ರತ್ಯೇಕ ಸುಸಜ್ಜಿತ ಗ್ರಾಮೀಣ, ನಗರ ಸಾರಿಗೆ ಬಸ್ ನಿಲ್ದಾಣ ಸುಸಜ್ಜಿತ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ ನಿರ್ಮಾಣವನ್ನು ಶೀಘ್ರದಲ್ಲಿ ಕೈಗೆತ್ತಿಕೊಳ್ಳಲು ಸರ್ಕಾರ ಯಾವ ಹಂತದಲ್ಲಿ ಏನೇನು ಕ್ರಮ ಕೈಗೊಳ್ಳಲಿದೆ ?

# ಗ್ರಾಮೀಣ ವಸತಿ ಯೋಜನೆಗಳ ಅನುಷ್ಠಾನದಲ್ಲಿನ ಗೊಂದಲಗಳ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೭೨ (೧೯೪೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣ ವಸತಿ ಯೋಜನೆಗಳ ಅನುಷ್ಠಾನದಲ್ಲಿ ಇಲಾಖೆಯು ಗೊಂದಲ ನಿರ್ಮಾಣ ಮಾಡಿರುವುದು ನಿಜವೇ ;

(ಆ) ವಸತಿ ಯೋಜನೆಗಳ ಮನೆಗಳನ್ನು ಬ್ಲಾಕ್, ನಾಟ್ ಓ.ಕೆ. ಹೈಯ್ ಕೋಸ್ಟ್ ಸೇರಿದಂತೆ ವಿವಿಧ ಕಾರಣ ನೀಡಿ ಅನುದಾನ ತಡೆ ಹಿಡಿದಿರುವುದು ನಿಜವೇ ; ಹೀಗೆ ಅನುದಾನ ತಡೆಹಿಡಿದಿರುವ ಪ್ರಕರಣಗಳೆಷ್ಟು ;

(ಇ) ವಸತಿ ಯೋಜನೆಗಳ ಮನೆಗಳ ನಿರ್ಮಾಣಕ್ಕೆ ಭೂ ಪರಿವರ್ತನೆಯಿಂದ ವಿನಾಯಿತಿ ನೀಡಲಾಗಿದೆಯೇ ; (ವಿನಾಯಿತಿ ಆದೇಶದ ಪ್ರತಿ ಒದಗಿಸುವುದು) ಸದರಿ ಆದೇಶ ಪಾಲನೇ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆ ಸೇರಿದಂತೆ ೫ ಜಿಲ್ಲೆಗಳಲ್ಲಿ ಸರ್ಕಾರಿ ಭೂಮಿಯಲ್ಲಿ ವಾಸಿಸುತ್ತಿರುವ ವಸತಿರಹಿತರಿಗೆ ವಸತಿ ಯೋಜನೆಗಳ ಮನೆ ಮಂಜೂರು ಮಾಡುವ ಆದೇಶ ಹೊರಡಿಸಲಾಗಿದೆಯೇ ; ಸದರಿ ಆದೇಶ ಪಾಲನೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ವಸತಿ ಯೋಜನೆಗಳ ಅನುಷ್ಠಾನಕ್ಕಾಗಿ ವಸತಿ ಯೋಜನೆಯಲ್ಲಿ ಮಂಜೂರಾಗಿರುವ ಮತ್ತು ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಸಿಬ್ಬಂದಿಗಳ ಸಂಖ್ಯೆ ಹೆಚ್ಚಳಕೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಊ) ಗ್ರಾಮ ಪಂಚಾಯತ್‌ಗಳಲ್ಲಿ ಸಿಬ್ಬಂದಿ ಕೊರತೆ ಹಾಗೂ ಅನೇಕ ಬಡತನ ನಿರ್ಮೂಲನಾ ಕಾರ್ಯಕ್ರಮ ಸೇರಿದಂತೆ ವಿವಿಧ ಯೋಜನೆಗಳ ಅನುಷ್ಠಾನದ ಜವಾಬ್ದಾರಿಯ ಹೊರತನಾಗಿಯೂ, ಕೇವಲ ವಸತಿ ಯೋಜನೆ ಅನುಷ್ಠಾನಕ್ಕೆ ಒತ್ತಡ ಹೇರುತ್ತಿರುವುದು, ಪದೇ ಪದೇ ನೋಟೀಸ್ ನೀಡುವುದು ಹಾಗೂ ಹಣಕಾಸು ಅವ್ಯವಹಾರದಂತಹ ಗಂಭೀರ ಆರೋಪ ಇಲ್ಲದಾಗ್ಯೂ, ಅಮಾನತ್ತು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಋ) ಎಲ್ಲಾ ಗೊಂದಲ, ಒತ್ತಡ ನಿವಾರಿಸಿ, ಗ್ರಾಮೀಣ ವಸತಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕಾಗಿ ಸರ್ಕಾರ ಯಾವ ಯಾವ ಕ್ರಮ ಕೈಗೊಳ್ಳಲಿದೆ ? ( ವಿವರ ಒದಗಿಸುವುದು)

## ತುರುವೇಕೆರೆ ತಾಲ್ಲೂಕಿನ ಕನ್ನಡ ಭವನಕ್ಕೆ ವಾಚನಾಲಯ ಮಂಜೂರು ಮಾಡುವ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ)(ನಾಮನಿರ್ದೇಶನ ಹೊಂದಿದವರು) :–**

೧೬೭೩ (೧೫೪೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆ ತಾಲ್ಲೂಕಿನಲ್ಲಿ ಇರುವ ವಾಚನಾಲಯಗಳೆಷ್ಟು ; ಅವು ಯಾವುವು ;

(ಆ) ಎಲ್ಲಾ ವಾಚನಾಲಯಗಳಲ್ಲಿ ಮೇಲ್ವಿಚಾರಕರು ಚೆನ್ನಾಗಿ ಕೆಲಸ ನಿರ್ವಹಿಸುತ್ತಿರುವರೆ ;

(ಇ) ತುರುವೇಕೆರೆ ನಗರದಲ್ಲಿರುವ ವಾಚನಾಲಯ ಜೊತೆಗೆ ವಿಶೇಷವಾಗಿ ಕನ್ನಡ ಭವನಕ್ಕೆ ಒಂದು ವಾಚನಾಲಯ ಅವಶ್ಯಕತೆ ಇರುವುದರಿಂದ ಈ ವರ್ಷ ಮಂಜೂರು ಮಾಡಲಾಗುವುದೇ ?

## ನೇಕಾರರಿಗೆ ಉದ್ಯೋಗ ಮಾಡಲು ಜಮೀನು ಮಂಜೂರು ಮಾಡುವ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೬೭೪ (೧೬೦೨) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಬಡ ನೇಕಾರರಿಗೆ ಸಣ್ಣ ಕೈಗಾರಿಕೆ ವಲಯದಲ್ಲಿರುವ ಯೋಜನೆಗಳಾವುವು ;

(ಆ) ಕಳೆದ ೩ ವರ್ಷಗಳಲ್ಲಿ ಯಾವ್ಯಾವ ಯೋಜನೆಗಳನ್ನು ನೇಕಾರರಿಗೆ ನೀಡಲಾಗಿದೆ ;

(ಇ) ನೇಕಾರಿಕೆ ಉದ್ಯೋಗ ಮಾಡಲು ಈ ಇಲಾಖೆಯಿಂದ ಜಮೀನು ಪಡೆಯಲು ಏನು ಕ್ರಮವಹಿಸಬೇಕು ;

(ಈ) ಅರ್ಜಿ ಹಾಕಿದ ಎಷ್ಟು ದಿನದಲ್ಲಿ ಮಂಜೂರು ಮಾಡಲಾಗುವುದು ?

## ತುಮಕೂರು ಜಿಲ್ಲೆಯ ಗ್ರಾಮಗಳಿಗೆ ಬಸ್ ಸೌಕರ್ಯ ಕಲ್ಪಿಸುವ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೬೭೫ (೧೬೦೧)ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯಲ್ಲಿ ಬಸ್ ಸೌಕರ್ಯ ಇಲ್ಲದಿರುವ ಗ್ರಾಮಗಳಿಗೆ ಬಸ್ ಸೌಲಭ್ಯ ಕಲ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ತುಮಕೂರು ನಗರದಲ್ಲಿ ಸಿಟಿ ಬಸ್ ಸ್ಟ್ಯಾಂಡ್‌ಗಳನ್ನು ಪ್ರಾರಂಭ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು ;

(ಇ) ಎಲ್ಲೆಲ್ಲಿ, ಹಳೆಯ ಬಸ್‌ಗಳನ್ನು ಬದಲಾಯಿಸಿ ಹೊಸ ಬಸ್‌ಗಳನ್ನು ಯಾವಾಗ ನೀಡಲಾಗುವುದು ?

## ವೋಲ್ವೋ ಬಸ್‌ಗಳಲ್ಲಿ ನೀರಿನ ಸೌಲಭ್ಯ ಕಡಿತಗೊಳಿಸುವ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೬೭೬ (೧೬೦೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಪ್ರತಿ ದಿವಸ ಬಂದು ಹೋಗುವ ಸ್ಲೀಪರ್ ಮತ್ತು ಸುವಿಹಾರಿ ಬಸ್‌ಗಳ ಸಂಖ್ಯೆ ಎಷ್ಟು ;

(ಆ) ಎಲ್ಲಿಂದ ಹಾಗೂ ಎಲ್ಲಿಗೆ ಸಂಚರಿಸುತ್ತವೆ ; (ವಿವರ ನೀಡುವುದು)

(ಇ) ಈ ಬಸ್‌ಗಳಲ್ಲಿ ಕುಡಿಯುವ ನೀರಿನ ಸೌಲಭ್ಯ ನಿಲ್ಲಿಸಲು ಕಾರಣವೇನು ;

(ಈ) ಬಸ್‌ಗಳಲ್ಲಿ ಶುಚಿತ್ವ ಹಾಗೂ ನಿರ್ವಹಣೆ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು ;

(ಉ) ರಾತ್ರಿ ವೇಳೆ ಶೌಚಾಲಯಕ್ಕೆ ಅನುಕೂಲ ಮಾಡಿಕೊಡಲಾಗುವುದೆ ?

## ಚಿಕ್ಕಮಗಳೂರು ಜಿಲ್ಲೆಯ ಗ್ರಾಮ ಪಂಚಾಯತಿಗಳ ರಸ್ತೆ ಕಾಮಗಾರಿಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೭೭ (೧೪೮೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆಯ ಗ್ರಾಮ ಪಂಚಾಯತಿಗಳಿಗೆ ರಸ್ತೆ ಕಾಮಗಾರಿಗಳ ಅನುಷ್ಠಾನಕ್ಕಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ಒಟ್ಟು ಅನುದಾನವೆಷ್ಟು ;

(ಆ) ಸದರಿ ಅನುದಾನದಲ್ಲಿ ಖರ್ಚಾಗಿರುವ ಅನುದಾನವೆಷ್ಟು ; ಮತ್ತು ಉಳಿದಿರುವ ಅನುದಾನವೆಷ್ಟು ? (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

## ಮೂಡಿಗೆರೆ ಕ್ಷೇತ್ರ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿಗೆ ಬರುವ ಲೂಪ್ ರಸ್ತೆಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೭೮ (೧೫೨೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೂಡಿಗೆರೆ ಕ್ಷೇತ್ರ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಬರುವ ಲೂಪ್ ರಸ್ತೆಗಳು ಯಾವುವು ಮತ್ತು ಅವುಗಳ ಉದ್ದವೆಷ್ಟು ;

(ಆ) ಕೆಲವು ರಾಜ್ಯ ಹೆದ್ದಾರಿಗಳು ರಾಷ್ಟ್ರೀಯ ಹೆದ್ದಾರಿಗೆ ಸಂಪರ್ಕ ಕಲ್ಪಿಸುವಂತ ರಸ್ತೆಗಳಲ್ಲಿ ಒಂದಾದ ಬಸ್ಕಲ್ ಹಾಂದಿ ಲೂಪ್ ರಸ್ತೆ ತುಂಬಾ ಹಾಳಾಗಿ ಹೊಂಡಗಳಿಂದ ಕೂಡಿದ್ದು ದಿನನಿತ್ಯ ನೂರಾರು ವಾಹನಗಳ ಸಂಚಾರಕ್ಕೆ ಅಡ್ಡಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈವರೆವಿಗೂ ಕ್ರಮ ಕೈಗೊಳ್ಳದಿರಲು ಕಾರಣವೇನು ?

## ಸಿನಿಮಾ ಕಲಾವಿದರಿಗೆ ಕಡಿಮೆ ದರದಲ್ಲಿ ನಿವೇಶನ ನೀಡುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೭೯ (೧೪೧೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಿನಿಮಾ ಕಲಾವಿದರಿಗೆ ಕಡಿಮೆ ದರದಲ್ಲಿ ವಸತಿ ಸೌಕರ್ಯ ನೀಡಲು ಸರ್ಕಾರ ನಿರ್ಧರಿಸಿದೆಯೇ ;

(ಆ) ಈ ವಸತಿ ಸೌಕರ್ಯಕ್ಕೆ ಇರುವ ಮಾನದಂಡವೇನು ;

(ಇ) ಈ ವಸತಿ ಸೌಕರ್ಯವು ಯಾವ ಶ್ರೇಣಿಯ ಕಲಾವಿದರಿಗೆ ನೀಡಲಾಗುತ್ತಿದೆ ?

## ನೂತನ ಕಾಲೇಜು ಪ್ರಾರಂಭಿಸುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

೧೬೮೦(೧೪೧೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರ್ಥಿಕ ವರ್ಷದಲ್ಲಿ ನೂತನ ಖಾಸಗಿ ಕಾಲೇಜು ಆರಂಭಿಸಲು ಒಟ್ಟು ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಖಾಸಗಿ ಕಾಲೇಜು ಆರಂಭಿಸಲು ಇರುವ ಮಾನದಂಡವೇನು ;

(ಇ) ಈಗಿರುವ ಸರ್ಕಾರಿ ಮತ್ತು ಖಾಸಗಿ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಸರ್ಕಾರಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಮೂಲ ಸೌಕರ್ಯದ ಕೊರತೆಯೇ, ಈಗ ಖಾಸಗಿಯವರಿಗೆ ಬಂಡವಾಳವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಬಿಡುಗಡೆಯಾದ ಅನುದಾನ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೧ (೧೩೭೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಈ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ವಿವರಗಳನ್ನು ನೀಡುವುದು)

(ಇ) ಸರ್ಕಾರ ಬಿಡುಗಡೆ ಮಾಡಿದ್ದ ಅನುದಾನದಲ್ಲಿ ಇದುವರೆವಿಗೂ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ; (ಕಾಮಗಾರಿಗಳವಾರು ವಿವರಗಳನ್ನು ಒದಗಿಸುವುದು)

(ಈ) ಈ ಯೋಜನೆಯ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕೂಡಲೇ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದು ?

## ವಾಣಿಜ್ಯ ಪರೀಕ್ಷೆಗಳಾದ ಬೆರಳಚ್ಚು ಮತ್ತು ಶೀಘ್ರಲಿಪಿ ಪರೀಕ್ಷೆಗಳ ಮೌಲ್ಯ ಮಾಪನ ಕೇಂದ್ರಗಳ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೨ (೧೧೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಾಣಿಜ್ಯ ಪರೀಕ್ಷೆಯ ಮೌಲ್ಯಮಾಪನ ೧೦ ವರ್ಷಗಳಿಂದ ಒಂದೇ ಕಡೆ ಮಾತ್ರ ಮಾಡುತ್ತಿದ್ದು ಈಗ ೪ ವಿಭಾಗಗಳಾಗಿ ವಿಂಗಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರಸ್ತುತ ೪ ವಿಭಾಗಗಳಾಗಿ ಮೌಲ್ಯ ಮಾಪನ ಕೇಂದ್ರಗಳನ್ನು ಮಾಡಿದ್ದು ಪರೀಕ್ಷೆಗಳು ನಡೆದು ೨ ತಿಂಗಳುಗಳಾಗಿದ್ದರೂ, ಇನ್ನು ಫಲಿತಾಂಶ ಬಾರದೆ ಇರುವುದರಿಂದ, ವಿದ್ಯಾರ್ಥಿಗಳ ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಆಗದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಹಿಂದೆ ವಾಣಿಜ್ಯ ಪರೀಕ್ಷೆ ವಿದ್ಯಾರ್ಥಿಗಳ ಸಂಖ್ಯೆಯು ೮೦೦೦ ಇದ್ದು, ಮೌಲ್ಯ ಮಾಪನವನ್ನು ಬೆಂಗಳೂರು ಕೇಂದ್ರದಲ್ಲಿ ಮಾಡಿಸುತ್ತಿದ್ದರಿಂದ, ಫಲಿತಾಂಶ ಬೇಗ ಪ್ರಕಟವಾಗುತ್ತಿದ್ದರಿಂದ ಅದರಂತೆಯೇ, ಬೆಂಗಳೂರು ಕೇಂದ್ರದಲ್ಲಿಯೇ ಮೌಲ್ಯ ಮಾಪನ ಮಾಡುವುದು ಸೂಕ್ತವಲ್ಲವೆ ;

(ಈ) ಈ ಎಲ್ಲಾ ಹಿನ್ನೆಲೆಯಲ್ಲಿ ಬೆರಳಚ್ಚು ಮತ್ತು ಶೀಘ್ರಲಿಪಿ ವಾಣಿಜ್ಯ ಪರೀಕ್ಷೆಗಳ ಮೌಲ್ಯ ಮಾಪನವನ್ನು ಬೆಂಗಳೂರು ಕೇಂದ್ರದಲ್ಲಿ ಮಾಡುವ ಕುರಿತು ಶಿಕ್ಷಣ ಇಲಾಖೆ ಕ್ರಮ ಕೈಗೊಳ್ಳುವುದೇ ?

## ವಸತಿ ಯೋಜನೆಗಳಡಿ ಮಂಜೂರಾದ ಮನೆಗಳ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೩ (೧೩೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳಡಿ ಮಂಜೂರಾದ ಮನೆಗಳೆಷ್ಟು ; ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಹಂಚಿಕೆ ಮಾಡಲಾದ ಮನೆಗಳ ಸಂಖ್ಯೆ ಎಷ್ಟು ;

(ಆ) ಸರ್ಕಾರ ನಿಗಧಿಪಡಿಸಿರುವ ಅನುದಾನದಲ್ಲಿ ಗ್ರಾಮೀಣ ಪ್ರದೇಶದ ಬಡ ಕುಟುಂಬಗಳು ಎಷ್ಟು ವಿಸ್ತೀರ್ಣದಲ್ಲಿ ಮನೆ ನಿರ್ಮಿಸಿಕೊಳ್ಳಲು ಸಾಧ್ಯವಿದೆ ; (ವಿವರ ನೀಡುವುದು)

(ಇ) ಸರ್ಕಾರವೇ ನಿವೇಶನಗಳನ್ನು ಗುರುತಿಸಿ ವಸತಿ ರಹಿತರಿಗೆ ಕಡಿಮೆ ಖರ್ಚಿನಲ್ಲಿ ಮನೆಗಳನ್ನು ನಿರ್ಮಿಸಿಕೊಡಲು ಸಾಧ್ಯವಾಗುವುದಿಲ್ಲವೇ ;

(ಈ) ಹಾಗಿದ್ದಲ್ಲಿ, ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

# ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿರುವ ಕೈಗಾರಿಕೆಗಳ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೪ (೧೩೯೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿರುವ ಕೈಗಾರಿಕೆಗಳಾವುವು ; (ವಿವರಗಳನ್ನು ನೀಡುವುದು)

(ಆ) ಈ ಕೈಗಾರಿಕೆಗಳಿಗೆ ಸರ್ಕಾರವು ನೀಡಿರುವ ಸೌಲಭ್ಯಗಳೇನು ; (ತಾಲ್ಲೂಕುವಾರು ಅರ್ಜಿದಾರರ ಸಂಪೂರ್ಣ ಮಾಹಿತಿ ನೀಡುವುದು)

(ಇ) ಕೈಗಾರಿಕೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವಂತೆ ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಸರ್ಕಾರಕ್ಕೆ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ವರ್ಷವಾರು ವಿವರ ನೀಡುವುದು)

(ಈ) ರಾಜ್ಯ ಸರ್ಕಾರಕ್ಕೆ ಸಲ್ಲಿಕೆಯಾಗಿರುವ ಅರ್ಜಿಗಳಲ್ಲಿ ವಿಲೇವಾರಿಯಾಗಿರುವ ಮತ್ತು ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ವಿಲೇವಾರಿಯಾಗದಿರಲು ಕಾರಣಗಳೇನು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ಹೊಸದಾಗಿ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರಕ್ಕೆ ಸಲ್ಲಿಕೆಯಾಗಿರುವ ಅರ್ಜಿಗಳಿಗೆ ಮಂಜೂರು ಮಾಡಿದ ಜಮೀನಿನ ವಿಸ್ತೀರ್ಣವೆಷ್ಟು ; ಹಾಗೂ ಜಮೀನಿಗೆ ನಿಗಧಿಪಡಿಸಲಾದ ಮೊತ್ತವೆಷ್ಟು ? (ಕೈಗಾರಿಕಾ ಪ್ರದೇಶಗಳವಾರು ಸಂಪೂರ್ಣ ವಿವರ ನೀಡುವುದು)

## ಹಾಸ್ಟೆಲ್‌ಗಳ ವಿದ್ಯಾರ್ಥಿಗಳಿಗೆ ಬಸ್ ಪಾಸ್ ಒದಗಿಸುವ ಬಗ್ಗೆ

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೬೮೫ (೧೪೩೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿವಿಧ ಹಾಸ್ಟೆಲ್‌ಗಳು ಮತ್ತು ಶಾಲಾ, ಕಾಲೇಜುಗಳ ನಡುವೆ ಸುಮಾರು ೪ ಕಿಲೋ ಮೀಟರ್ ಅಂತರವಿರುವ ಸ್ಥಳಗಳಲ್ಲಿ ವಿದ್ಯಾರ್ಥಿಗಳಿಗೆ ಶಾಲಾ/ಕಾಲೇಜುಗಳಿಗೆ ಹೋಗಿ ಬರಲು ತೊಂದರೆಯಾಗುತ್ತಿದ್ದು ಇಂತಹ ಹಾಸ್ಟೆಲ್‌ಗಳಿಗೆ ವಿಶೇಷ ಪ್ರಕರಣ ಎಂದು ಭಾವಿಸಿ ಬಸ್ ಪಾಸ್ ವಿತರಿಸಲು ಸಾಧ್ಯವೆ ;

(ಆ) ವಿಶೇಷವಾಗಿ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಬಸ್ ಪಾಸ್ ವ್ಯವಸ್ಥೆ ಇಲ್ಲದಿರುವುದರಿಂದ ಇಂತಹ ವಿದ್ಯಾರ್ಥಿಗಳ ಶಿಕ್ಷಣದ ಹಿತದೃಷ್ಟಿಯಿಂದ ವಿಶೇಷ ಪ್ರಕರಣವೆಂದು ಪರಿಗಣಿಸಿ ಬಸ್ ಪಾಸ್ ಕೊಡಲು ಸರ್ಕಾರಕ್ಕಿರುವ ತೊಂದರೆಗಳೇನು ?

## ಅತಿಥಿ ಉಪನ್ಯಾಸಕರ ಗೌರವಧನ ಕುರಿತು

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೬೮೬ (೧೪೩೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ೬/೧೨/೨೦೧೬ರಿಂದ ಪ್ರತಿ ತಿಂಗಳೂ ಗೌರವಧನ ೭೦೦೦ ರೂ. ನೀಡಬೇಕೆಂದು ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆ ತಿಳಿಸಿದೆ ;

(ಆ) ಹಾಗಿದ್ದಲ್ಲಿ, ಸದರಿ ಗೌರವಧನ ಪ್ರತಿ ತಿಂಗಳಿಗೆ ರೂ. ೭೦೦೦/– ದಂತೆ ರೂ. ೪೨೦೦೦/–ಗಳನ್ನು ನೀಡದೇ ३೮೫೦೦/–ಗಳನ್ನು ನೀಡುತ್ತಿರಲು ಕಾರಣವೇನು ?

## ಗ್ರಾಮಠಾಣಾ ವ್ಯಾಪ್ತಿಯನ್ನು ವಿಸ್ತರಿಸುವ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೮೭ (೧೪೭೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮಠಾಣಾ ವ್ಯಾಪ್ತಿಯನ್ನು ಮೀರಿ ಗ್ರಾಮಗಳು ಬೆಳೆದಿರುವುದು (ವಿಸ್ತಾರ ಹೊಂದಿರುವುದು) ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಗ್ರಾಮಠಾಣಾ ವ್ಯಾಪ್ತಿಯನ್ನು ಈ ಹಿಂದೆ ಯಾವಾಗ ನಿಗಧಿಪಡಿಸಲಾಗಿತ್ತು; ಅಂದಿನ ರಾಜ್ಯದ ಜನ ಸಂಖ್ಯೆಯೆಷ್ಟು;

(ಇ) ಗ್ರಾಮಠಾಣಾ ವ್ಯಾಪ್ತಿಯನ್ನು ವಿಸ್ತರಿಸದೆ ಇರುವುದರಿಂದ ಗ್ರಾಮೀಣ ಪ್ರದೇಶದ ಜನತೆಗೆ ಮನೆ ನಿರ್ಮಿಸಿಕೊಳ್ಳಲು ಹಲವು ರೀತಿಯ ಸಮಸ್ಯೆಗಳುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಗ್ರಾಮಠಾಣಾ ವ್ಯಾಪ್ತಿಯನ್ನು ಪುನರ್ ನಿಗಧಿಪಡಿಸಲು ಸರ್ಕಾರ ತೀರ್ಮಾನಿಸಿದೆಯೇ;

(ಉ) ತೀರ್ಮಾನಿಸಿದ್ದಲ್ಲಿ, ಪುನರ್ ನಿಗಧಿಪಡಿಸಲು ಗೊತ್ತುಪಡಿಸಲಾದ ಕಾಲಮಿತಿ ಎಷ್ಟು?

## ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿನ ಅನುದಾನದ ಕುರಿತು

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೮ (೧೬೩೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲಾ ಪಂಚಾಯತ್‌ಗೆ ರಾಜ್ಯ ಸರ್ಕಾರದಿಂದ ಕಳೆದ ಮೂರು ವರ್ಷಗಳಿಂದ ಬಂದಿರುವ ಅನುದಾನವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಬಂದಿರುವ ಅನುದಾನವನ್ನು ಯಾವ ಯಾವ ಅಭಿವೃದ್ಧಿ ಕಾಮಗಾರಿಗಳಿಗೆ ಎಷ್ಟೆಷ್ಟು ಹಣ ವೆಚ್ಚ ಮಾಡಲಾಗಿದೆ;

(ಇ) ಎಲ್ಲಾ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆಯೇ?

## ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಜಾಗದಲ್ಲಿ ವಸತಿ ಮತ್ತು ವಾಣಿಜ್ಯ ಮಳಿಗೆಗಳನ್ನು ನಿರ್ಮಿಸುವ ಕುರಿತು

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೯ (೧೬೩೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಕಾರ್ಖಾನೆ ಸ್ಥಾಪಿಸಲು ನೀಡುವ ಜಾಗದಲ್ಲಿ ವಸತಿ ಯೋಜನೆಗಳನ್ನು ಮಾಡಬಹುದೆ;

(ಆ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಮೆ: ಸಾಯಿ ಲಕ್ಷ್ಮಿ ಇಂಡಸ್ಟ್ರೀಸ್ ಪ್ರೈ ಲಿಮಿಟೆಡ್, ಕನ್ನಮಂಗಲ ವೈಟ್ ಫೀಲ್ಡ್ ರೋಡ್, ಬೆಂಗಳೂರು ಇವರಿಗೆ ನೀಡಿರುವ ಸುಮಾರು ೩೨ ಎಕರೆ ೧೨ ಗುಂಟೆ ಜಾಗದಲ್ಲಿ ಬೃಹತ್ ವಸತಿ ಮತ್ತು ವಾಣಿಜ್ಯ ಮಳಿಗೆಗಳನ್ನು ಕಟ್ಟುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಕೈಗೊಳ್ಳಲಾಗುವ ಕ್ರಮಗಳೇನು;

(ಈ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಜಾಗದಲ್ಲಿ ವಸತಿ ಮತ್ತು ವಾಣಿಜ್ಯ ಕಟ್ಟಡಗಳನ್ನು ಕಟ್ಟಲು ಅನುಮತಿ ಇದ್ದದರೆ, ರಾಜ್ಯದ ಬೇರೆ ಬೇರೆ ಕರ್ನಾಟಕ ಕೈಗಾರಿಗಾ ಪ್ರದೇಶಾಭಿವೃದ್ಧಿ ಮಂಡಳಿ ಜಾಗದಲ್ಲಿ ಕಟ್ಟಡಗಳನ್ನು ನಿರ್ಮಿಸಬಹುದೆ?

## ಬೆಂಗಳೂರು ಮಹಾನಗರ ಸಾರಿಗೆ ಬಸ್‌ಗಳ ಮೇಲೆ ಜಾಹೀರಾತು ಪ್ರದರ್ಶಿಸುವ ಕುರಿತು

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೯೦ (೧೬೩೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ಸಾರಿಗೆಯ ಎಲ್ಲಾ ಮಾದರಿಯ ಬಸ್‌ಗಳಲ್ಲಿ ಜಾಹೀರಾತು ಪ್ರದರ್ಶಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಸಾರಿಗೆ ಬಸ್‌ಗಳ ಮೇಲೆ ಜಾಹೀರಾತು ಪ್ರದರ್ಶಿಸಲು ಯಾವ ಯಾವ ಏಜೆನ್ಸಿಗಳಿಗೆ ಪರವಾನಗಿ ನೀಡಲಾಗಿದೆ; ಜಾಹೀರಾತು ಪರವಾನಗಿ ನೀಡುವಾಗ ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು?

## ವಿವಿಧ ಯೋಜನೆಗಳಡಿ ಗ್ರಾಮ ಪಂಚಾಯತ್‌ಗಳಿಗೆ ಬಂದಿರುವ ಅನುದಾನದ ಕುರಿತು

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೯೧ (೧೬೩೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯ ಸರ್ಕಾರದಿಂದ ವಿವಿಧ ಯೋಜನೆಗಳಿಗಾಗಿ ಗ್ರಾಮ ಪಂಚಾಯತ್‌ಗಳಿಗೆ ಬಂದಿರುವ ಅನುದಾವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರದಿಂದ ಬಂದಿರುವ ಅನುದಾನದಲ್ಲಿ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಗೊಳ್ಳಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಬಂದಿರುವಂತಹ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)

## ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೭ (೧೪೪೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ತಾಂತ್ರಿಕ ಶಿಕ್ಷಣ (Engineering) ಸಂಸ್ಥೆಗಳ ಸಂಖ್ಯೆ ಎಷ್ಟು; ಅವು ಯಾವುವು; ಅವುಗಳಲ್ಲಿ ಪ್ರವೇಶಕ್ಕೆ ಅವಕಾಶವಿರುವ ಸೀಟುಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ವಿದ್ಯಾರ್ಜನೆ ಮಾಡುತ್ತಿರುವ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; (ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಖಾಸಗಿ ತಾಂತ್ರಿಕ ಶಿಕ್ಷಣ (Engineering) ಸಂಸ್ಥೆಗಳ ಸಂಖ್ಯೆ ಎಷ್ಟು; ಅವು ಯಾವುವು; ಮತ್ತು ಅವುಗಳಲ್ಲಿ

ಪ್ರವೇಶಕ್ಕೆ ಅವಕಾಶವಿರುವ ಸೀಟುಗಳ ಸಂಖ್ಯೆ ಎಷ್ಟು; ಮತ್ತು ಇವುಗಳಲ್ಲಿ ವಿದ್ಯಾರ್ಜನೆ ಮಾಡುತ್ತಿರುವ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು;

(ಇ) ರಾಜ್ಯದಲ್ಲಿರುವ ಡೀಮ್ಡ್ ವಿಶ್ವವಿದ್ಯಾನಿಲಯಗಳ ಸಂಖ್ಯೆ ಎಷ್ಟು; ಅವು ಯಾವುವು; ಇವುಗಳು ಹೊಂದಿರುವ ತಾಂತ್ರಿಕ ಶಿಕ್ಷಣ ಸಂಸ್ಥೆಗಳು ಎಷ್ಟು; ಅವು ಯಾವುವು; ಈ ವಿಶ್ವವಿದ್ಯಾನಿಲಯಗಳು ಹೊಂದಿರುವ ಸೌಲಭ್ಯಗಳು ಯಾವುವು; ವಿಶೇಷ ಹಕ್ಕುಗಳು ಯಾವುವು; (ಡೀಮ್ಡ್ ವಿಶ್ವವಿದ್ಯಾನಿಲಯವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿರುವ ಸರ್ಕಾರಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳಿಗೂ ಹಾಗೂ ಡೀಮ್ಡ್ ವಿಶ್ವವಿದ್ಯಾನಿಲಯಗಳಿಗೂ ಇರುವ ವ್ಯತ್ಯಾಸಗಳೇನು;

(ಉ) ರಾಜ್ಯದಲ್ಲಿರುವ ಖಾಸಗಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಸರ್ಕಾರ ನಿಗಧಿಪಡಿಸಿದ ಸೀಟನ್ನು ಭರ್ತಿಗೊಳಿಸಲು ಆಗದ ಶಿಕ್ಷಣ ಸಂಸ್ಥೆಗಳು ಎಷ್ಟು; ಅವು ಯಾವುವು? (ಶಿಕ್ಷಣ ಸಂಸ್ಥೆವಾರು ಬಾಕಿ ಇರುವ ಸೀಟುಗಳ ವಿವರದೊಂದಿಗೆ ಮಾಹಿತಿ ನೀಡುವುದು)

## ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ಗಣಿಗಾರಿಕೆಗೆ ಗ್ರಾಮ ಪಂಚಾಯತ್ N.O.C ಕಡ್ಡಾಯಗೊಳಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩ (೧೪೪೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿನ ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ಕೆಂಪುಕಲ್ಲು, ಶಿಲೆಕಲ್ಲು ಮತ್ತು

ಮರಳು ಗಣಿಗಾರಿಕೆಗಳು ವ್ಯಾಪಕವಾಗಿ ನಡೆಯುತ್ತಿದ್ದು, ಈ ಗಣಿಗಾರಿಕೆ ನಡೆಸಲು ಗ್ರಾಮ ಪಂಚಾಯತ್‌ನಿಂದ ಯಾವುದೇ ನಿರಾಪೇಕ್ಷಣಾ ಪತ್ರ (N.O.C) ಪಡೆಯದೆ ಗಣಿಗಾರಿಕೆಯನ್ನು ನಡೆಸುತ್ತಿರುವುದು ಸರ್ಕಾರ ಗಮನಿಸಿದೆಯೇ; ಗಮನಿಸಿದಲ್ಲಿ, ಏನು ಕ್ರಮ ಕೈಗೊಳ್ಳಲಾಗುವುದು; ಇಲ್ಲವಾದಲ್ಲಿ, ಕಾರಣವೇನು;

(ಆ) ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ಗಣಿಗಾರಿಕೆ ನಡೆಸುವವರು ಜಿಲ್ಲಾ ಪಂಚಾಯತ್ ಮತ್ತು ಗ್ರಾಮ ಪಂಚಾಯತ್ ರಸ್ತೆಗಳನ್ನು ಬಳಸಿಕೊಳ್ಳುವುದರಿಂದ, ಆ ರಸ್ತೆಗಳು ಹದಗೆಡುವುದರಿಂದ ಆ ರಸ್ತೆಗಳ ನಿರ್ವಹಣೆಯ ಹೊಣೆಯನ್ನು ಗ್ರಾಮ ಪಂಚಾಯತ್‌ಗಳು ಹೊರಬೇಕಾಗಿರುವುದರಿಂದ, ಗಣಿಗಾರಿಕೆಯು ಮೂಲಕ ಸಂಗ್ರಹವಾಗುವ ರಾಜಧನ (Royalty) ಅರ್ಧವನ್ನಾದರೂ ಗ್ರಾಮ ಪಂಚಾಯತ್‌ಗಳಿಗೆ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ;

(ಇ) ಗ್ರಾಮ ಪಂಚಾಯತ್‌ಗಳು ಗಣಿಗಾರಿಕೆಗೆ ನಿರಾಪೇಕ್ಷಣಾ ಪತ್ರ (N.O.C) ಮತ್ತು ರಾಜಧನದಲ್ಲಿ ಅರ್ಧದಷ್ಟನ್ನು ಪಡೆಯುವ ಅಧಿಕಾರವನ್ನು ಹೊಂದಿದಾಗ ಅಕ್ರಮ ಗಣಿಗಾರಿಕೆಯು ಹತೋಟಿಗೆ ಬರುವ ಸಾಧ್ಯತೆ ಇದೆ ಎನ್ನುವುದನ್ನು ಸರ್ಕಾರ ಮನಗಂಡಿದೆಯೇ; ಇದರ ನಿರ್ವಹಣೆ ಮತ್ತು ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಲಾಗುವುದೇ?

## ರಾಜ್ಯದಲ್ಲಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗಳಾಗಿ ಮೇಲ್ದರ್ಜೆಗೇರಿಸಲು ಇರುವ ಮಾನದಂಡಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೪ (೧೪೩೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಿರಿಯ ಪ್ರಾಥಮಿಕ ಶಾಲೆಯನ್ನು ಹಿರಿಯ ಪ್ರಾಥಮಿಕ ಶಾಲೆಯನ್ನಾಗಿ ಮೇಲ್ದರ್ಜೆಗೇರಿಸಲು ಇರುವ ಇಲಾಖಾ ಮಾರ್ಗಸೂಚಿಗಳೇನು; (ಮಾರ್ಗಸೂಚಿಯ ಪ್ರತಿಯನ್ನು ಒದಗಿಸುವುದು)

(ಆ) ಕಿರಿಯ ಪ್ರಾಥಮಿಕ ಶಾಲೆಯಿಂದ ಹಿರಿಯ ಪ್ರಾಥಮಿಕ ಶಾಲೆ, ಹಿರಿಯ ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ ಇರುವ ದೂರದ ಮಿತಿ ಮತ್ತು ಮಾನದಂಡಗಳು ಯಾವುವು; (ಪ್ರತಿ ಒದಗಿಸುವುದು)

(ಇ) ಶಾಲೆಗಳಿಗಿರುವ ದೂರದ ಮಿತಿಯನ್ನು ವೈಮಾನಿಕ ದೂರ (Aerial Distance) ಮೂರು ಮತ್ತು ಐದು ಕಿ.ಮೀ. ಎಂದು ನಿರ್ಧರಿಸುವುದಕ್ಕಿಂತ ಅತ್ಯಂತ ಹತ್ತಿರದ ದಾರಿಯನ್ನು ಪರಿಗಣನೆಗೆ ತೆಗದುಕೊಳ್ಳುವ ಯೋಜನೆ ಸರ್ಕಾರದ ಮುಂದಿದೆಯೇ; ಇಲ್ಲವಾದಲ್ಲಿ, ಕಾರಣವೇನು;

(ಈ) ವೈಮಾನಿಕ ದೂರ (Aerial Distance) ವನ್ನು ಪರಿಗಣೆನೆಗೆ ತೆಗೆದುಕೊಳ್ಳುವುದರಿಂದ, ಅಭಿವೃದ್ಧಿ ಹೊಂದುತ್ತಿರುವಂತಹ ಶಿಕ್ಷಣ ಸಂಸ್ಥೆಗಳ ಅಭಿವೃದ್ಧಿಗೆ ಮಾರಕವಾಗುವುದಿಲ್ಲವೇ; ಇದನ್ನು ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದೇ?

## ಉಡುಪಿ ಜಿಲ್ಲೆಯಲ್ಲಿ ಗ್ರಾಮ ಪಂಚಾಯತ್ P.D.O ಗಳಿಂದ ನೀಡಿದ ದೂರಿನ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೭೫ (೧೪೫೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಆಡಳಿತಾತ್ಮಕ ವಿಚಾರದಲ್ಲಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಪೊಲೀಸ್‌ಠಾಣೆಗೆ ನೀಡಿದ ದೂರಿನ ಸಂಖ್ಯೆ ಎಷ್ಟು; ಮತ್ತು ದೂರುಗಳ ಮೇಲೆ ತೆಗೆದುಕೊಂಡ ಕ್ರಮಗಳೇನು; (ವರ್ಷವಾರು ಪ್ರಕರಣವಾರು, ಗ್ರಾಮ ಪಂಚಾಯತ್‌ವಾರು ವಿವರ ನೀಡುವುದು)

(ಆ) ಗ್ರಾಮ ಪಂಚಾಯತ್‌ಗಳ ಶಾಸನಬದ್ಧ ಅಧಿಕಾರವನ್ನು ಚಲಾಯಿಸಲು ತಡೆಯೊಡ್ಡುವ, ಅಕ್ರಮ ಚಟುವಟಿಕೆಗಳನ್ನು ಮಾಡುವವರ ವಿರುದ್ಧ ಪೊಲೀಸ್‌ಠಾಣೆಗಳಲ್ಲಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ದೂರನ್ನು ನೀಡಿದಾಗ ಕನಿಷ್ಠ FIRನ್ನು ದಾಖಲಿಸದೆ ಇರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ್‌ನ ನಿರ್ಣಯದ ಪ್ರತಿಯೊಂದಿಗೆ ಪೊಲೀಸ್ ಠಾಣೆಗೆ ದೂರು ನೀಡಿದಾಗಲೂ ಕ್ರಮ ಕೈಗೊಳ್ಳದ ಪೊಲೀಸ್ ಇಲಾಖಾಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರ ಮೂಲಕ ಹಿರಿಯ ಪೊಲೀಸ್ ಅಧಿಕಾರಿಗಳಿಗೆ ಆಗ್ರಹಿಸಲಾಗುವುದೇ; ಇಲ್ಲವಾದಲ್ಲಿ, ಕಾರಣಗಳೇನು?

## ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಮಂಜೂರಾದ ನಿವೇಶನಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೯೬ (೧೪೩೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಮಂಜೂರು ಮಾಡಿರುವ ನಿವೇಶನಗಳ ಸಂಖ್ಯೆ ಎಷ್ಟು; ಮಂಜೂರಾತಿಯ ಹಂತದಲ್ಲಿರುವ ನಿವೇಶನಗಳ ಸಂಖ್ಯೆ ಎಷ್ಟು; ಮಂಜೂರು ಮಾಡುವ ಗುರಿ ಎಷ್ಟು; (ತಾಲ್ಲೂಕುವಾರು, ವರ್ಷಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕಂದಾಯ ಇಲಾಖೆಯಿಂದ ಗುರುತಿಸಿದ ನಿವೇಶನಗಳ ಸಂಖ್ಯೆ ಎಷ್ಟು; ಖರೀದಿಸಲ್ಪಟ್ಟ ನಿವೇಶನಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ವರ್ಷಾವಾರು ವಿವರ ನೀಡುವುದು)

(ಇ) ಕಳೆದ ಒಂದು ದಶಕದಿಂದ ರಾಜ್ಯದಲ್ಲಿ ನಿವೇಶನಗಳ ಕೊರತೆಯಿಂದಾಗಿ ನಿಯಂತ್ರಣಕ್ಕೂ ಮೀರಿ ಮನೆಗಳನ್ನು ಅಕ್ರಮವಾಗಿ ಕಟ್ಟಿಕೊಂಡು ವಾಸವಾಗಿರವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ೯೪ಸಿ ಜಾರಿಗೆ ಬಂದು ಕುಡಿಯುವ ನೀರು, ದಾರಿದೀಪ, ರಸ್ತೆಗಳಂತಹ ಮೂಲಭೂತ ಅವಶ್ಯಕತೆಗಳನ್ನು ಪೂರೈಸುವಲ್ಲಿ ಸರ್ಕಾರಕ್ಕೆ ಹೊರೆಯಾಗುವುದಿಲ್ಲವೆ;

(ಈ) ಸರ್ಕಾರಕ್ಕೆ ಮೂಲಭೂತ ಅವಶ್ಯಕತೆಗಳ ಪೂರೈಕೆಯ ಹೊರೆಯನ್ನು ತಪ್ಪಿಸಲು ಅಧಿಕ ಮೌಲ್ಯಕೊಟ್ಟು ನಿವೇಶನಗಳನ್ನು ಖರೀದಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಇಲ್ಲವಾದ್ದಲ್ಲಿ, ಕಾರಣವೇನು?

## ಮರಳು ದಾಸ್ತಾನು ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೯೭ (೧೪೪೯) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಒಂದು ಲಾರಿ ಮರಳಿಗೆ ಸರ್ಕಾರವು ನಿಗಧಿಪಡಿಸಿರುವ ದರ ಎಷ್ಟು;

(ಆ) ಹಾವೇರಿ ಹಾಗೂ ಗದಗ ಜಿಲ್ಲೆಗಳಲ್ಲಿ ಒಂದು ವರ್ಷಕ್ಕೆ ಎಷ್ಟು ಟನ್ ಮರಳು ಸಂಗ್ರಹವಾಗುತ್ತಿದೆ;

(ಇ) ನದಿ ಮೂಲಗಳು ಇಲ್ಲದೆ ಇರುವ ಪ್ರದೇಶಗಳಲ್ಲಿ (ಉದಾ: ಧಾರವಾಡ) ಮರುಳು ಸಾಗಾಣಿಕೆಗೆ ಯಾವ ಕ್ರಮ ಕೈಗೊಳ್ಳಲಾಗುತ್ತಿದೆ?

## ಎನ್.ಜಿ.ಇ.ಎಫ್ (ಹುಬ್ಬಳ್ಳಿ) ಇದರ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೭೮ (೧೪೫೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎನ್.ಜಿ.ಇ.ಎಫ್ (ಹುಬ್ಬಳ್ಳಿ) ಇದರ ಹಾಲಿ ಕಾರ್ಯವೈಖರಿಗಳೇನು; (ಸಂಪೂರ್ಣ ವಿವರ ನೀಡುವುದು)

(ಆ) ಇದರಲ್ಲಿ ಹಾಲಿ ಇರುವ ವರ್ಗವಾರು ಹುದ್ದೆಗಳು ಯಾವುವು; (ಸಂಪೂರ್ಣ ವಿವರ ನೀಡುವುದು)

(ಇ) ಸಂಸ್ಥೆಯ ಸಂಪನ್ಮೂಲ ಕ್ರೋಢೀಕರಣ ವಿಧಾನಗಳೇನು? (ವಿವರ ನೀಡುವುದು)

## ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೭೯ (೧೪೪೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ ಜಿಲ್ಲೆ, ಹುಬ್ಬಳ್ಳಿ ತಾಲ್ಲೂಕು, ತಾರಿಹಾಳ, ಬೇಲೂರು ಕೈಗಾರಿಕಾ ಪ್ರದೇಶಗಳಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಕಳೆದ ಮೂರು ವರ್ಷಗಳಿಂದ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಸದರಿ ಕಾಮಗಾರಿಗಳ ಪ್ರಗತಿ ಪ್ರಸ್ತುತ ಯಾವ ಹಂತದಲ್ಲಿದೆ; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಹಮ್ಮಿಕೊಂಡಿರುವ ಕಾಲಮಿತಿ ಏನು; ಹೊಸದಾಗಿ ಕೈಗೊಳ್ಳಲು ನಿರ್ಧರಿಸಿರುವ ಅಭಿವೃದ್ಧಿ ಕಾಮಗಾರಿಗಳು ಯಾವುವು; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಕೈಗಾರಿಕಾ ಪ್ರದೇಶಗಳಲ್ಲಿ ತೆರಿಗೆ ಸಂಗ್ರಹಿಸಲು ಯಾವ ಕ್ರಮಗಳನ್ನು ಅನುಸರಿಸಲಾಗುತ್ತಿದೆ;

(ಈ) ಈ ಪ್ರದೇಶದಲ್ಲಿ ಕಳೆದ ಮೂರು ವರ್ಷಗಳಿಂದ ಎಷ್ಟು ತೆರಿಗೆ ಸಂಗ್ರಹವಾಗಿದೆ; ಎಷ್ಟು ಬಾಕಿ ಉಳಿದಿವೆ? (ವರ್ಷಾವಾರು ಸಂಪೂರ್ಣ ವಿವರ ನೀಡುವುದು)

## ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ಸೌಲಭ್ಯಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೦೦ (೧೪೫೧) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದಿಂದ ವಿವಿಧ ವರ್ಗದವರಿಗೆ ನೀಡಲಾಗುತ್ತಿರುವ ವೈಯಕ್ತಿಕ ಹಾಗೂ ಸಾಮೂಹಿಕ ಸೌಲಭ್ಯಗಳು ಯಾವುವು; (ಯೋಜನೆವಾರು ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ವಿವಿಧ ವರ್ಗದವರಿಗೆ ಯಾವ ಯೋಜನೆಗಳಡಿಯಲ್ಲಿ ಎಷ್ಟು ಸೌಲಭ್ಯಗಳನ್ನು ವಿತರಿಸಲಾಗಿದೆ; ವಿವಿಧ ಯೋಜನೆಗಳಡಿಯಲ್ಲಿ ಬಾಕಿ ಉಳಿದಿರುವ ಅರ್ಜಿಗಳೆಷ್ಟು; ಅವುಗಳು ಯಾವುವು? (ಜಿಲ್ಲಾವಾರು, ಯೋಜನೆವಾರು ಸಂಪೂರ್ಣ ವಿವರ ನೀಡುವುದು)

**ವಸತಿ ಯೋಜನೆಗಳ ಕುರಿತು**

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೦೧ (೧೪೫೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಕಳೆದ ಒಂದು ವರ್ಷದಿಂದ ವಸತಿ ಯೋಜನೆಯ ಫಲಾನುಭವಿಗಳಿಗೆ ವಿವಿಧ ಕಾರಣದಿಂದ ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತದಿಂದ ಸಹಾಯಧನ ಬಿಡುಗಡೆ ಆಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು; ಎಷ್ಟು ಪ್ರಕರಣಗಳು ಬಾಕಿ ಉಳಿದಿವೆ; ಇವುಗಳ ಪ್ರಗತಿ ಕಾರ್ಯವು ಪ್ರಸ್ತುತ ಯಾವ ಹಂತದಲ್ಲಿವೆ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಇ) ಇವುಗಳನ್ನು ಇತ್ಯರ್ಥಗೊಳಿಸಲು ಸರ್ಕಾರವು ಹಮ್ಮಿಕೊಂಡಿರುವ ಕಾಲಮಿತಿ ಏನು? (ವಿವರ ನೀಡುವುದು)

## ಗ್ರಾಮ ವಿಕಾಸ ಯೋಜನೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೦೨ (೧೪೫೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪ ರಿಂದ ೨೦೧೭ನೇ ಸಾಲಿನಲ್ಲಿ ಗ್ರಾಮ ವಿಕಾಸ ಯೋಜನೆಯಡಿ ಚಿಕ್ಕಮಗಳೂರು ಜಿಲ್ಲೆಗೆ ಬಿಡುಗಡೆಯಾದ ಅನುದಾನ ಎಷ್ಟು; ಯಾವ ಯಾವ ಗ್ರಾಮಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಕೈಗೊಂಡ ಕಾಮಗಾರಿಗಳು ಯಾವುವು; ಕಾಮಗಾರಿಗಳು ಯಾವ ಹಂತದಲ್ಲಿ ಇವೆ? (ತಾಲ್ಲೂಕುವಾರು, ಗ್ರಾಮವಾರು ಸಂಪೂರ್ಣ ಮಾಹಿತಿ ನೀಡುವುದು)

## ಗ್ರಾಮ ಪಂಚಾಯತ್‌ಗಳಲ್ಲಿ ಸ್ವೈಪಿಂಗ್ ಮಿಷಿನ್ ಮತ್ತು ಆನ್‌ಲೈನ್ ವ್ಯವಸ್ಥೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೦೩ (೧೪೫೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್‌ಗಳಲ್ಲಿ ಸ್ವೈಪಿಂಗ್ ಮಿಷಿನ್ ಮತ್ತು ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರುವ ಯೋಜನೆ ಸರ್ಕಾರದ ಮುಂದೆ ಇದೆಯೇ; ಇಲ್ಲಿಯವರೆಗೆ ಚಿಕ್ಕಮಗಳೂರು ಜಿಲ್ಲೆಯ ಎಷ್ಟು ಗ್ರಾಮ ಪಂಚಾಯತ್‌ಗಳಲ್ಲಿ ಸ್ವೈಪಿಂಗ್ ಮಿಷಿನ್ ಮತ್ತು ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ; (ವಿವರಣೆ ನೀಡುವುದು)

(ಆ) ಸ್ವೈಪಿಂಗ್ ಮಿಷಿನ್ ಮತ್ತು ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರುವ ಬಗ್ಗೆ ಗ್ರಾಮೀಣಾಭಿವೃದ್ಧಿ ಇಲಾಖೆಯು ಯಾವುದಾದರೂ ಆದೇಶ ಹೊರಡಿಸಿದೆಯೇ? (ವಿವರಣೆ ನೀಡುವುದು)

## ರಾಜ್ಯದಲ್ಲಿ ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ಡಂಪಿಂಗ್ ಯಾರ್ಡ್ ನಿರ್ಮಿಸುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೦೪ (೧೪೫೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮ ಪಂಚಾಯತ್‌ಗಳಲ್ಲಿ ಡಂಪಿಂಗ್ ಯಾರ್ಡ್ ನಿರ್ಮಾಣ ಮಾಡಲು ಸ್ಥಳ ಮಂಜೂರು ಮಾಡುವ ವಿಚಾರ ಸರ್ಕಾರದ ಮುಂದೆ ಇದೆಯೇ;

(ಆ) ರಾಜ್ಯದಲ್ಲಿ ಒಟ್ಟು ಎಷ್ಟು ಗ್ರಾಮ ಪಂಚಾಯತ್‌ಗಳು ಇವೆ; ಡಂಪಿಂಗ್ ಯಾರ್ಡ್ ಹೊಂದಿರುವ ಗ್ರಾಮ ಪಂಚಾಯತ್‌ಗಳು ಎಷ್ಟು; ಡಂಪಿಂಗ್ ಯಾರ್ಡ್ ಹೊಂದದೆ ಇರುವ ಗ್ರಾಮ ಪಂಚಾಯತ್‌ಗಳು ಎಷ್ಟು; (ಜಿಲ್ಲಾವಾರು/ತಾಲ್ಲೂಕುವಾರು/ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು)

(ಇ) ಡಂಪಿಂಗ್ ಯಾರ್ಡ್ ನಿರ್ಮಾಣಕ್ಕಾಗಿ ಸ್ಥಳ ಮಂಜೂರು ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು;(ಸ್ಪಷ್ಟನೆ ನೀಡುವುದು)

(ಈ) ಈ ಕುರಿತು ಸರ್ಕಾರ ಏನು ಕ್ರಮ ಕೈಗೊಂಡಿದೆ; ಯಾವ ಕಾಲಮಿತಿಯಲ್ಲಿ ಗ್ರಾಮ ಪಂಚಾಯತ್‌ಗಳಿಗೆ ಸ್ಥಳ ಮಂಜೂರು ಮಾಡಿ ಡಂಪಿಂಗ್ ಯಾರ್ಡ್ ನಿರ್ಮಾಣ ಮಾಡಲು ಆದೇಶ ಹೊರಡಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)

## ನಮ್ಮ ರಸ್ತೆ ನಮ್ಮ ಗ್ರಾಮ ಯೋಜನೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೦೫ (೧೪೫೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಗೆ ೨೦೧೪–೧೫, ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ "ನಮ್ಮ ರಸ್ತೆ ನಮ್ಮ ಗ್ರಾಮ" ಯೋಜನೆಯಲ್ಲಿ ಬಿಡುಗಡೆಯಾದ ಅನುದಾನ ಎಷ್ಟು? (ಕ್ಷೇತ್ರವಾರು ವಿವರ ನೀಡುವುದು)

(ಆ) ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯಲ್ಲಿ ಬಾಕಿ ಉಳಿದಿರುವ ಕಾಮಗಾರಿಗಳು ಎಷ್ಟು; ಯಾವ ಯಾವ ಗ್ರಾಮಗಳಿಗೆ ರಸ್ತೆ ಸಂಪರ್ಕ ನೀಡಲಾಗಿದೆ? (ಗ್ರಾಮ ಪಂಚಾಯತ್‌ವಾರು ವಿವರ ನೀಡುವುದು)

## ಬಸವನಹಳ್ಳಿ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರ ಕೊರತೆ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೦೬ (೧೪೫೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ನಗರದ ಬಸವನಹಳ್ಳಿ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಚಿಕ್ಕಮಗಳೂರು ನಗರದ ಬಸವನಹಳ್ಳಿ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಯಾವ ಯಾವ ಹುದ್ದೆಗಳಿಗೆ ಉಪನ್ಯಾಸಕರ ಕೊರತೆ ಇದೆ; ಈ ಕುರಿತು ಸರ್ಕಾರದ ಕ್ರಮವೇನು;

(ಇ) ಚಿಕ್ಕಮಗಳೂರು ನಗರದ ಬಸವನಹಳ್ಳಿ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಹಾಸನ ಜಿಲ್ಲೆಯ ಅರಸೀಕೆರೆ ನಗರದ ಪದವಿ ಪೂರ್ವ ಕಾಲೇಜಿನಲ್ಲಿ ಇರುವ ಹೆಚ್ಚುವರಿ ಹುದ್ದೆಯ ಉಪನ್ಯಾಸಕರನ್ನು ವರ್ಗಾವಣೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಾದರೆ, ಸರ್ಕಾರ ಈ ಕುರಿತು ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು)

## ರಾಜ್ಯದಲ್ಲಿ ಇರುವ ಕೇಂದ್ರಿಯ ವಿದ್ಯಾನಿಲಯಗಳ ಸಂಖ್ಯೆ ಎಷ್ಟು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೦೭ (೧೪೮೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇರುವ ಕೇಂದ್ರಿಯ ವಿದ್ಯಾಲಯಗಳ ಸಂಖ್ಯೆ ಎಷ್ಟು;

(ಆ) ಕೇಂದ್ರಿಯ ವಿದ್ಯಾಲಯಕ್ಕೆ ರಾಜ್ಯ ಸರ್ಕಾರವು ಎಲ್ಲಾ ಮೂಲಭೂತ ಸೌಕರ್ಯಗಳನ್ನು ಮತ್ತು ನಿವೇಶನ ನೀಡುತ್ತಿದೆಯೇ; (ವಿವರ ಒದಗಿಸುವುದು)

(ಇ) ಕೇಂದ್ರಿಯ ವಿದ್ಯಾಲಯವು ರಾಜ್ಯದಲ್ಲಿದ್ದು, ಸದರಿ ಶಾಲೆಗಳಲ್ಲಿ ಲೋಕಸಭಾ ಸದಸ್ಯರಿಗೆ ವಿದ್ಯಾರ್ಥಿಗಳ ಸೇರ್ಪಡೆಗೆ ವಿವೇಚನಾ ಖೋಟಾ ನೀಡಿರುವಂತೆ; ಆದರೆ ರಾಜ್ಯದ ವಿಧಾನಸಭಾ ಸದಸ್ಯರು/ ವಿಧಾನ ಪರಿಷತ್ ಸದಸ್ಯರುಗಳಿಗೆ ವಿವೇಚನಾ ಖೋಟಾದಡಿಯಲ್ಲಿ

ವಿದ್ಯಾರ್ಥಿಗಳ ಸೇರ್ಪಡೆಗೊಳಿಸಲು ಅವಕಾಶವಿರುವುದಿಲ್ಲ, ಈ ತಾರತಮ್ಯ ನೀತಿಯಿಂದ ಶಾಸಕರ ಗೌರವಕ್ಕೆ ಚ್ಯುತಿ ಉಂಟಾಗುವುದರ ಬಗ್ಗೆ ಸರ್ಕಾರ ತೆಗೆದುಕೊಳ್ಳುವ ನಿಲವು ಏನು;

(ಈ) ಕೇಂದ್ರಿಯ ವಿದ್ಯಾಲಯಗಳ ಪಠ್ಯಕ್ರಮದಲ್ಲಿ ಕನ್ನಡ ಬೋಧಿಸಲು ಕ್ರಮ ಕೈಗೊಳ್ಳಲಾಗಿದೆಯೇ?

## ರಾಜ್ಯದಲ್ಲಿರುವ ವಿಶ್ವವಿದ್ಯಾನಿಲಯಗಳ ಸಂಖ್ಯೆ ಎಷ್ಟು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೦೮ (೧೪೮೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ವಿಶ್ವವಿದ್ಯಾನಿಲಯಗಳ ಸಂಖ್ಯೆ ಹಾಗೂ ಸದರಿ ವಿಶ್ವವಿದ್ಯಾನಿಲಯಗಳಲ್ಲಿ ಭರ್ತಿಯಾಗಿರುವ ಕುಲಪತಿಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು)

(ಆ) ಕುಲಪತಿಗಳ ಆಯ್ಕೆಗೆ ಕರ್ನಾಟಕ ರಾಜ್ಯದವರೇ ಆಗಿರಬೇಕೆಂಬ ನಿರ್ಬಂಧ ಇದೆಯೇ; ಪ್ರತಿಭೆ ಇರುವ ಬೇರೆ ರಾಜ್ಯದವರಿಗೆ ಕರ್ನಾಟಕದಲ್ಲಿ ಉಪಕುಲಪತಿಯಾಗಲು ಅವಕಾಶವಿಲ್ಲವೆ;

(ಇ) ಕುಲಪತಿ ಹುದ್ದೆಗೆ ಇರುವ ಮಾನದಂಡವೇನು? (ವಿವರ ಒದಗಿಸುವುದು)

## ೨೦೦೮ರ ನಂತರ ನೇಮಕಾತಿ ಹೊಂದಿರುವ ಶಿಕ್ಷಕರಿಗೆ ವಿಶೇಷ ಭತ್ಯೆ ನೀಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೧೭೦೯ (೧೫೦೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಹಾಗೂ ಅನುದಾನಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜಿನ ಬೋಧಕರಿಗೆ ಎಂದಿನಿಂದ ವಿಶೇಷ ಭತ್ಯೆಯನ್ನು (ಎಕ್ಸ್‌ಗ್ರೇಷಿಯಾ) ನೀಡಲಾಗುತ್ತಿದೆ; ಯಾವ ಪ್ರಮಾಣದಲ್ಲಿ ನೀಡಲಾಗುತ್ತಿದೆ; (ವಿವರ ನೀಡುವುದು)

(ಆ) ೨೦೦೮ನೇ ಸಾಲಿನ ನಂತರ ನೇಮಕಾತಿಗೊಂಡಿರುವ ಬೋಧಕರಿಗೆ ವಿಶೇಷ ಭತ್ಯೆ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸದರಿ ಬೋಧಕರಿಗೆ ವಿಶೇಷ ಭತ್ಯೆ ತಡೆ ಹಿಡಿಯಲು ಕಾರಣಗಳೇನು; (ವಿವರ ನೀಡುವುದು)

(ಇ) ೨೦೦೮ರ ನಂತರ ನೇಮಕಗೊಂಡಿರುವ ಬೋಧಕರಿಗೆ ವಿಶೇಷ ಭತ್ಯೆಯನ್ನು ಯಾವ ಕಾಲಮಿತಿಯಲ್ಲಿ ನೀಡಲಾಗುವುದು;

(ಈ) ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಿಗೆ ವಿಶೇಷ ಭತ್ಯೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇವರಿಗೆ ವಿಶೇಷ ಭತ್ಯೆ ನೀಡದಿರಲು ಕಾರಣಗಳೇನು; (ವಿವರ ನೀಡುವುದು)

(ಉ) ಸದರಿ ವಿಶೇಷ ಭತ್ಯೆ ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

## ಯು.ಜಿ.ಸಿ. ಬಾಕಿ ವೇತನ ನೀಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೧೭೧೦ (೧೫೦೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳ ಉಪನ್ಯಾಸಕರುಗಳಿಗೆ ಪರಿಷ್ಕೃತ ಯು.ಜಿ.ಸಿ ವೇತನ ಶ್ರೇಣಿಯನ್ನು ಎಂದಿನಿಂದ ಜಾರಿಗೊಳಿಸಲಾಗಿದೆ;

(ಆ) ಪರಿಷ್ಕೃತ ಯು.ಜಿ.ಸಿ ವೇತನ ಸಂಬಂಧ ಸದರಿ ಉಪನ್ಯಾಸಕರಿಗೆ ನೀಡಬೇಕಾಗಿರುವ ಬಾಕಿ ಮೊತ್ತವೆಷ್ಟು;

(ಇ) ಯಾವ ಅವಧಿಗೆ ಬಾಕಿ ಮೊತ್ತವನ್ನು ನೀಡಬೇಕಾಗಿದೆ; (ವಿವರ ನೀಡುವುದು)

(ಈ) ಪರಿಷ್ಕೃತ ಯು.ಜಿ.ಸಿ ವೇತನ ಸಂಬಂಧ ಬಾಕಿ ಮೊತ್ತ ನೀಡಬೇಕಾಗಿರುವ ಉಪನ್ಯಾಸಕರ ಸಂಖ್ಯೆ ಎಷ್ಟು;

(ಉ) ಬಾಕಿ ಮೊತ್ತ ನೀಡುವಲ್ಲಿ ವಿಳಂಬ ಉಂಟಾಗಿರಲು ಕಾರಣಗಳೇನು; ಯಾವ ಕಾಲಮಿತಿಯಲ್ಲಿ ಬಾಕಿ ಮೊತ್ತವನ್ನು ಪಾವತಿಸಲಾಗುವುದು?

## ಅನುದಾನಿತ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೧೭೧೧ (೧೫೦೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಉತ್ತರ ಜಿಲ್ಲೆ, ದಕ್ಷಿಣ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ರಾಮನಗರ ಜಿಲ್ಲೆಗಳಲ್ಲಿರುವ ಅನುದಾನಿತ ಫ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ಹೆಸರು, ವಿಳಾಸದೊಡನೆ ವಿವರ ನೀಡುವುದು)

(ಆ) ಸದರಿ ಶಾಲಾ ಕಾಲೇಜುಗಳಲ್ಲಿರುವ ಬೋಧಕ, ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; (ವಿಷಯವಾರು ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಶಾಲಾ ಕಾಲೇಜುಗಳಲ್ಲಿ ನಿವೃತ್ತಿ, ಮರಣ ಇತ್ಯಾದಿ ಕಾರಣಗಳಿಂದ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ಸದರಿ ಹುದ್ದೆಗಳು ಖಾಲಿ ಇರುವುದರಿಂದ ಶಾಲೆಗಳಲ್ಲಿ ಮಕ್ಕಳ ಶಿಕ್ಷಣಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಾದರೆ ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಅನುಮತಿ ನೀಡುವುದೇ/ಯಾವ ಕಾಲಮಿತಿಯಲ್ಲಿ ಅನುಮತಿ ನೀಡಲಾಗುವುದು?

## ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳ ಮಾಹಿತಿ ನೀಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ ) :–**

೧೭೧೨ (೧೫೦೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೨–೧೩ನೇ ಸಾಲಿನಿಂದ ಇದುವರೆವಿಗೆ ಅನುಮತಿ ನೀಡಿರುವ ಅನುದಾನ ರಹಿತ ಪದವಿ ಕಾಲೇಜುಗಳೆಷ್ಟು ; (ಹೆಸರು ವಿಳಾಸದೊಡನೆ ವಿವರ ನೀಡುವುದು)

(ಆ) ಹೊಸ ಕಾಲೇಜು ತೆರೆಯಲು ಸರ್ಕಾರದ ನಿಯಮಗಳೇನು; (ಆದೇಶದ ಪ್ರತಿಗಳನ್ನು ಒದಗಿಸುವುದು)

(ಇ) ಹೊಸ ಪದವಿ ಪೂರ್ವ ಕಾಲೇಜು ತೆರೆಯಲು ಸರ್ಕಾರದ ನಿಯಮಗಳನ್ನು ಮೀರಿ ಶಿಫಾರಸ್ಸು ಮಾಡದೆ ಇರುವ ಸಂಸ್ಥೆಗಳಿಗೆ ಅನುಮತಿ ನೀಡಲಾಗಿದೆಯೇ; ಹಾಗಿದ್ದರೆ, ಎಷ್ಟು ಕಾಲೇಜುಗಳಿಗೆ ಅನುಮತಿ ನೀಡಲಾಗಿದೆ ; (ವಿವರ ನೀಡುವುದು)

(ಈ) ಕನಿಷ್ಠ ಮೂಲಭೂತ ಸೌಲಭ್ಯಗಳನ್ನು ಹೊಂದಿರದ ಕಾಲೇಜುಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗುತ್ತದೆ ;

(ಉ) ನಿಯಮ ಮೀರಿ ಅನುಮತಿ ನೀಡಿರುವ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗುವುದೆ ? (ವಿವರ ನೀಡುವುದು)

## ಕಾಮಗಾರಿಗಳಿಗೆ ತಗಲುವ ವೆಚ್ಚ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೧೩ (೧೪೬೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧೀನದ ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಗಮ (ನಿ) (KRIDCL) ರಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವೃಂದವಾರು, ಖಾಯಂ ಮತ್ತು ತಾತ್ಕಾಲಿಕ ಅಧಿಕಾರಿ/ನೌಕರರ ಜಿಲ್ಲಾವಾರು ವಿವರಗಳನ್ನು ಒದಗಿಸುವುದು)

(ಆ) ಕಳೆದ ೨ ವರ್ಷಗಳ ಅವಧಿಯಲ್ಲಿ (KRIDCL) ವತಿಯಿಂದ ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಪೂರ್ಣಗೊಳಿಸಿದ ಮತ್ತು ಚಾಲ್ತಿಯಲ್ಲಿರುವ ಕಾಮಗಾರಿಗಳು ಎಷ್ಟು; (ಪ್ರತ್ಯೇಕ ಕಾಮಗಾರಿಯ ಸ್ಥಳ/ಕಾಮಗಾರಿಗೆ ತಗುಲಿದ ವೆಚ್ಚ ಉದ್ದಳತೆಯ ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ೨ ವರ್ಷಗಳ ಅವಧಿಯಲ್ಲಿ ನಿಗಮದ ವತಿಯಿಂದ ಕೈಗೊಳ್ಳಲಾದ/ಜಾರಿಯಲ್ಲಿರುವ ಕಾಮಗಾರಿಗಳೆಷ್ಟು ; (ಅಂದಾಜು ಪಟ್ಟಿಯ ಪ್ರತಿಗಳನ್ನು ಒದಗಿಸುವುದು)

(ಈ) ನಿಗಮದ ಕಾಮಗಾರಿಗಳ ಗುತ್ತಿಗೆದಾರರ ವಿವರಗಳೇನು ? (ಸಂಪೂರ್ಣ ವಿವರ ಒದಗಿಸುವುದು)

## ದೊಡ್ಡ ಪ್ರಮಾಣದ ಕೈಗಾರಿಕೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೧೪ (೧೪೫೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಯಾವುದೇ ದೊಡ್ಡ ಪ್ರಮಾಣದ ಕೈಗಾರಿಕೆಯಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ನ್ಯಾಷನಲ್ ಇನ್‌ಫ್ರಾಸ್ಟ್ರಕ್ಚರ್, ಮ್ಯಾನ್ಯುಫ್ಯಾಕ್ಚರ್ ಜೋನ್ ಪ್ರಾರಂಭಿಸಲು ಪ್ರಸ್ತಾವನೆ ಬಂದಿದೆಯೇ;

(ಇ) ಬೀದರ್‌ನಲ್ಲಿ ಈ ಜೋನ್ ಪ್ರಾರಂಭಿಸಲು ಸೂಕ್ತ ಸ್ಥಳವಿರುವುದರಿಂದ, ಈ ಪ್ರಸ್ತಾವನೆಗೆ ಕೇಂದ್ರದಿಂದ ಅನುಮೋದನೆ ಪಡೆಯಲು ಪ್ರಯತ್ನಿಸಲಾಗುವುದೇ ? (ಸ್ಪಷ್ಟ ಮಾಹಿತಿ ಒದಗಿಸುವುದು)

## ನಕಲಿ ಬಿಲ್ ತಯಾರಿಸಿ ಹಣ ದುರುಪಯೋಗ ಮಾಡಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೧೫ (೧೪೫೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪಂಚಾಯತ್ ಇಂಜಿನೀಯರಿಂಗ್ ವಿಭಾಗದಲ್ಲಿ ನಕಲಿ ಬಿಲ್ ತಯಾರಿಸಿ ಸರ್ಕಾರಿ ಹಣ ದುರುಪಯೋಗ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದದ್ದಲ್ಲಿ, ಅವುಗಳು ಯಾವುವು ; ಹಾಗೂ ಎಷ್ಟು ಮೊತ್ತದ ಹಣ ದುರುಪಯೋಗವಾಗಿದೆ, ಇಂತಹ ದುರುಪಯೋಗಪಡಿಸಿಕೊಂಡವರ, ವಿರುದ್ಧ ಸರ್ಕಾರ ಈವರೆಗೆ ಕೈಗೊಂಡಿರುವ ಕ್ರಮಗಳೇನು ? (ಜಿಲ್ಲಾವಾರು, ಯೋಜನೆಗಳವಾರು, ಸಂಪೂರ್ಣ ವಿವರ ನೀಡುವುದು)

## ಬೀದರ್‌ನಲ್ಲಿ ತಾಂತ್ರಿಕ ಮಹಾವಿದ್ಯಾಲಯ ಪ್ರಾರಂಭಿಸುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೧೬ (೧೪೬೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಆಯವ್ಯಯದಲ್ಲಿ ಬೀದರ್ ಜಿಲ್ಲೆಗೆ ತಾಂತ್ರಿಕ ಮಹಾವಿದ್ಯಾಲಯ ಘೋಷಣೆಯಾಗಿದ್ದು, ಈವರೆಗೆ ಇದನ್ನು ಪ್ರಾರಂಭಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ಈ ಮಹಾವಿದ್ಯಾಲಯವನ್ನು ಸ್ಥಾಪಿಸಲು ಸ್ಥಳ ಗುರುತಿಸಲಾಗಿದೆಯೇ; ಇದ್ದಲ್ಲಿ ಯಾವ ಸ್ಥಳ ಸೂಕ್ತವಾಗಿದೆ ಹಾಗೂ ಇದಕ್ಕಾಗಿ ಮೀಸಲಿಡಲು ಉದ್ದೇಶಿಸಿರುವ ಜಾಗ ಎಷ್ಟು ;

(ಇ) ಇದನ್ನು ಪ್ರಾರಂಭಿಸಲು ಹಮ್ಮಿಕೊಂಡಿರುವ ಕಾಲಮಿತಿ ಏನು; ಇದಕ್ಕೆ ಮೀಸಲಿಟ್ಟಿರುವ ಅನುದಾನ ಎಷ್ಟು ; ಬಿಡುಗಡೆಯಾಗಿರುವ ಅನುದಾನ ಎಷ್ಟು ?

## ಶತಮಾನ ಕಂಡ ಸರ್ಕಾರಿ ಕನ್ನಡ ಶಾಲೆಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೧೭ (೧೪೬೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ವ್ಯಾಪ್ತಿಯ ಜಿಲ್ಲೆಗಳಲ್ಲಿ ಶತಮಾನ ಕಂಡ ಸರ್ಕಾರಿ ಕನ್ನಡ ಶಾಲೆಗಳು ಎಷ್ಟು ; ಅವುಗಳು ಯಾವುವು ; (ವಿವರ ನೀಡುವುದು)

(ಆ) ಈ ಶಾಲೆಗಳಿಗೆ ವಿಶೇಷ ಅನುದಾನ ಹಾಗೂ ವಿಶೇಷ ಸೌಲಭ್ಯಗಳನ್ನು ನೀಡಲು ಸರ್ಕಾರ ನಿರ್ಧರಿಸಿದೆಯೇ;

(ಇ) ನಿರ್ಧರಿಸಿದ್ದಲ್ಲಿ, ಯಾವ ಯಾವ ಸೌಲಭ್ಯಗಳು ಹಾಗೂ ಎಷ್ಟು ಅನುದಾನ ನೀಡಲು ಯೋಜಿಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ರಾಜ್ಯದ ರಾಷ್ಟ್ರೀಯ ಹೆದ್ದಾರಿ ಸಂಚಾರದ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೧೮ (೧೪೦೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಭಾರಿ ವಾಹನಗಳು ನಿಯಮ ಉಲ್ಲಂಘಿಸಿ ಸಂಚರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಾಹನಗಳು ರಾಷ್ಟ್ರೀಯ ಹೆದ್ದಾರಿ ರಸ್ತೆಯಲ್ಲಿ ವೇಗದ ಮಿತಿಯಿಂದ ಪಥದಲ್ಲಿ ಸಂಚರಿಸಲು ನಿಯಮವನ್ನು ರೂಪಿಸಿದ್ದರೂ ಸಹ, ಬೇರೆ ಬೇರೆ ಪಥಗಳಲ್ಲಿ ಸಂಚರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ; ಬಂದಿದ್ದರೆ, ಇದನ್ನು ತಡೆಗಟ್ಟಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಇ) ರಾಷ್ಟ್ರೀಯ ಹೆದ್ದಾರಿಯಲ್ಲಿ ನಿಯಮ ಉಲ್ಲಂಘಿಸಿ ವಾಹನ ಸಂಚರಿಸುತ್ತಿರುವುದರಿಂದ, ಅಪಘಾತಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರ ನಿಯಮವನ್ನು ಪಾಲಿಸದೆ ಇರುವ ಭಾರಿ ವಾಹನಗಳಿಗೆ ದಂಡವನ್ನು ವಿಧಿಸಿ, ಇದನ್ನು ತಡೆಗಟ್ಟಲು ಸರಿಯಾದ ನಿಯಮವನ್ನು ಸರ್ಕಾರ ರೂಪಿಸಲು ಕ್ರಮ ಕೈಗೊಳ್ಳುವುದೇ ?

## ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಜಂಟಿ ನಿರ್ದೇಶಕರು, ಉಪ ನಿರ್ದೇಶಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಹುದ್ದೆಗಳ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೧೯ (೧೪೦೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಂಟಿ ನಿರ್ದೇಶಕರು, ಉಪ ನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಲಿ ಖಾಲಿ ಇರುವ ಹುದ್ದೆಗಳಿಗೆ ಬಡ್ತಿ ನೀಡಲು ವಿಳಂಬವಾಗಲು ಕಾರಣವೇನು ;

(ಇ) ಇದರಿಂದ ಆಡಳಿತದ ಮೇಲೆ ಪರಿಣಾಮ ಬೀರುವುದಿಲ್ಲವೇ? (ಸೂಕ್ತ ಮಾಹಿತಿ ಒದಗಿಸುವುದು)

## ಬೆಂಗಳೂರು ವಿಶ್ವವಿದ್ಯಾಲಯದ ಎಂ.ಎ., ಎಂ.ಕಾಂ., ಎಂ.ಎಸ್ಸಿ., ಫಲಿತಾಂಶದ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೨೦ (೧೪೦೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿಶ್ವವಿದ್ಯಾಲಯವು ಎಂ.ಎ., ಎಂ.ಕಾಂ., ಎಂ.ಎಸ್ಸಿ., ಮೊದಲಾದ ಸ್ನಾತಕೋತ್ತರ ಪದವಿಗಳ ಫಲಿತಾಂಶವನ್ನು ಪರೀಕ್ಷೆಗಳು ಮುಗಿದ ನಂತರ ಎಷ್ಟು ದಿನಗಳಿಗೆ ಪ್ರಕಟಿಸುತ್ತದೆ, ಫಲಿತಾಂಶ ಪ್ರಕಟವಾಗುವುದು ವಿಳಂಬವಾಗುತ್ತಿದೆ ಎಂದು ತಿಳಿದು ಬಂದಿದ್ದು, ಇದಕ್ಕೆ ಕಾರಣವೇನು ;

(ಆ) ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಯು.ಜಿ.ಸಿ. ನಿಯಮಾವಳಿ ಅನುಸಾರ ಅಧ್ಯಾಪಕರಿಗೆ ಕಾರ್ಯಭಾರ (ವರ್ಕಲೋಡ್) ಇದೆಯೇ; ಇಲ್ಲಿದಿದ್ದರೆ ಏನು ಕ್ರಮ ಕೈಗೊಳ್ಳಲಾಗಿದೆ ;

(ಇ) ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಎಷ್ಟು ಬೋಧಕ, ಬೋಧಕೇತರ ಹುದ್ದೆಗಳು ಖಾಲಿ ಇವೆ, ಖಾಯಂ ನೌಕರರನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಆಯವ್ಯಯದ ಅನುದಾನದ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೨೧ (೧೪೦೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕಳೆದ ೪ ವರ್ಷಗಳ ಆಯವ್ಯಯದಲ್ಲಿ ಹಂಚಿಕೆಯಾಗಿರುವ ಅನುದಾನ ಗುರಿ ತಲುಪಿದೆಯೇ;

(ಆ) ಯಾವ ಯಾವ ಯೋಜನೆಗಳಿಗೆ ಒಟ್ಟು ಎಷ್ಟು ಹಣ ಬಿಡುಗಡೆಯಾಗಿದೆ; (ಜಿಲ್ಲಾವಾರು ಬಿಡುಗಡೆಯಾದ ಅನುದಾನದ ಮಾಹಿತಿ ಒದಗಿಸುವುದು)

(ಇ) ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕಿಗೆ ವಿವಿಧ ಯೋಜನೆಯಡಿಯಲ್ಲಿ ಒಟ್ಟು ಎಷ್ಟು ಅನುದಾನ ಬಿಡುಗಡೆಯಾಗಿದೆ; (ಯೋಜನೆವಾರು ವಿವರ ಒದಗಿಸುವುದು)

(ಈ) ರಾಜ್ಯದಲ್ಲಿ ಬರದ ಪರಿಸ್ಥಿತಿಯಿಂದ ಕುಡಿಯುವ ನೀರಿಗೆ ತೀವ್ರ ಅಭಾವ ಉಂಟಾಗಿದ್ದು, ಇದನ್ನು ನಿವಾರಿಸಲು ಇಲಾಖೆಯಿಂದ ಯಾವ ಯಾವ ಕ್ರಮ ಕೈಗೊಳ್ಳಲಾಗಿದೆ ?

## ೨೦೦೬ ಕ್ಕಿಂತ ಮೊದಲು ನೇಮಕಗೊಂಡ ೨೦೦೮ ರಲ್ಲಿ ಅನುಮೋದನೆಗೊಂಡ ಅನುದಾನಿತ ವಿದ್ಯಾಲಯಗಳ ಬೋಧಕ ಮತ್ತು ಬೋಧಕೇತರ ನೌಕರರಿಗೆ ಪಿಂಚಣಿ ಸೌಲಭ್ಯ ನೀಡುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೭೨೨ (೧೫೧೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೦೬ರ ಪಿಂಚಣಿ ನೀತಿಯಲ್ಲಿ ಸರ್ಕಾರದ ಅನುದಾನಿತ ಶಾಲೆಗಳ ಹಾಗೂ ಪದವಿ ಪೂರ್ವ ಕಾಲೇಜುಗಳ ಬೋಧಕ ಮತ್ತು ಬೋಧಕೇತರ ನೌಕರರಿಗೆ ಪಿಂಚಣಿ ಒದಗಿಸುವ ಕುರಿತು ಯಾವ ರೀತಿಯ ನಿಯಮವಿದೆ ;

(ಆ) ಈ ರೀತಿ ಅನುದಾನಿತ ವಿದ್ಯಾಲಯಗಳ ನೌಕರರಲ್ಲಿ ಎಷ್ಟು ನೌಕರರಿಗೆ ಎಷ್ಟು ಪಿಂಚಣಿ ಸೌಲಭ್ಯ ಪಡೆಯಲು ಅವಕಾಶ ಕಲ್ಪಿಸಲಾಗಿದೆ ; (ವಿವರ ನೀಡುವುದು)

(ಇ) ೨೦೦೬ಕ್ಕಿಂತ ಮೊದಲು ನೇಮಕಗೊಂಡು ೨೦೦೮ ರಲ್ಲಿ ಅನುಮೋದನೆಯಾದ ಅನುದಾನಕ್ಕೊಳಪಡುವ ನೌಕರರ ಸಂಖ್ಯೆ

ಎಷ್ಟು ; ಈ ರೀತಿ ನೇಮಕಗೊಂಡ ನೌಕರರಿಗೆ ಪಿಂಚಣಿ ಸೌಲಭ್ಯ ಪಡೆಯಲು ಅವಕಾಶ ಕಲ್ಪಿಸಲಾಗಿದೆಯೇ; ಕಲ್ಪಿಸಲು ಯಾವುದಾದರೂ ಕಾನೂನಿನ ತೊಡಕು ಉಂಟಾಗಿದೆಯೇ ? (ವಿವರ ನೀಡುವುದು)

## ಸರ್ಕಾರಿ ಶಾಲೆಗಳಿಗೆ ೬ನೇ ತರಗತಿಯಿಂದ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ನೀಡಲು ಅನುಮತಿ ನೀಡುತ್ತಿರುವ ರೀತಿಯಲ್ಲಿಯೇ ಅಪೇಕ್ಷಿತ ಅನುದಾನಿತ ಖಾಸಗಿ ಶಾಲೆಗಳಿಗೂ ಅನುಮತಿ ನೀಡುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೭೨೩ (೧೫೮೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಶಾಲೆಗಳಿಗೆ, ೬ನೇ ತರಗತಿಯಿಂದ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ನೀಡಲು ಅನುಮತಿ ನೀಡುತ್ತಿರುವುದು ನಿಜವೆ, ನಿಜವಾಗಿದ್ದಲ್ಲಿ, ಯಾವಾಗಿನಿಂದ ನೀಡಲಾಗುತ್ತಿದೆ ;

(ಆ) ಈ ರೀತಿ ಅನುಮತಿ ನೀಡಲು ಕಾರಣವೇನು; ಈ ಕುರಿತು ನಿಯಮವಿದೆಯೇ; (ವಿವರ ನೀಡುವುದು)

(ಇ) ಅದೇ ರೀತಿ ಖಾಸಗಿ ಅನುದಾನಿತ ಶಾಲೆಗಳಿಗೂ ಅನುಮತಿ ನೀಡಲು ಸಾಧ್ಯವಿಲ್ಲವೆ ; ಬೆಂಗಳೂರು ನಗರ ಜಿಲ್ಲೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮತ್ತು ರಾಮನಗರ ಜಿಲ್ಲೆಯಲ್ಲಿನ ಅನುದಾನಿತ ಶಾಲೆಗಳು ೬ನೇ ತರಗತಿಯಿಂದ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ನಡೆಸಲು ಅನುಮತಿ ನೀಡುವಂತೆ ಕೇಳಿ ಅರ್ಜಿ ಸಲ್ಲಿಸಿವೆಯೇ; ಸಲ್ಲಿಸಿದ್ದಲ್ಲಿ, ಯಾವಾಗ ಮತ್ತು ಯಾವ ಶಾಲೆಗಳು ಎಂಬುದರ ಬಗ್ಗೆ ವಿವರ ನೀಡುವುದು;

(ಈ) ಸದರಿ ಜಿಲ್ಲೆಗಳಲ್ಲಿ ಅರ್ಜಿ ಸಲ್ಲಿಸಿರುವ ಯಾವ ಯಾವ ಅನುದಾನಿತ ಶಾಲೆಗಳಿಗೆ ಅನುಮತಿ ನೀಡಲಾಗಿದೆ ; ಯಾವ ಯಾವ ಅನುದಾನಿತ ಶಾಲೆಗಳಿಗೆ ಅನುಮತಿ ನೀಡಲಾಗಿಲ್ಲ ; (ವಿವರ ನೀಡುವುದು)

(ಉ) ಅನುಮತಿ ನೀಡದಿರಲು ಕಾರಣವೇನು ?

## ಸರ್ಕಾರಿ ಶಾಲೆಗಳ ಶಿಕ್ಷಕರು ಮತ್ತು ವಿದ್ಯಾರ್ಥಿಗಳಲ್ಲಿ ೧:೩೦ರ ಅನುಪಾತವಿರುವಂತೆ ಸರ್ಕಾರಿ ಅನುದಾನಿತ ಶಾಲೆಗಳಿಗೂ ೧:೩೦ ಅನುಪಾತವನ್ನು ಮಾನ್ಯ ಉಚ್ಚ ನ್ಯಾಯಾಲಯದ ತೀರ್ಪಿನ ಪ್ರಕಾರ ನೀಡುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೭೨೪ (೧೫೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಶಾಲೆಗಳಿಗೆ, ಶಿಕ್ಷಕರು ಮತ್ತು ವಿದ್ಯಾರ್ಥಿಗಳಲ್ಲಿ ೧:೩೦ ಅನುಪಾತದ ನಿಯಮವಿರುವುದು ನಿಜವೆ;

(ಆ) ಸರ್ಕಾರದ ಅನುದಾನಿತ ಶಾಲೆಗಳಲ್ಲಿಯು ಇದೇ ರೀತಿಯ ಅನುಪಾತದ ನಿಯಮವಿದೆಯೇ; ಇದ್ದಲ್ಲಿ, ವಿವರ ನೀಡುವುದು;

(ಇ) ಅನುದಾನಿತ ಶಾಲೆಗಳಿಗೆ ೧:೪೦ ಅನುಪಾತದ ನಿಯಮವಿರುವುದು ನಿಜವೆ; ಹಾಗಿದ್ದಲ್ಲಿ, ಸರ್ಕಾರ ಶಾಲೆಗಳ ಮಕ್ಕಳಿಗೂ ಅನುದಾನಿತ ಶಾಲೆಗಳ ಮಕ್ಕಳಿಗೂ ಈ ರೀತಿಯ ತಾರತಮ್ಯ ಮಾಡಲು ಕಾರಣವೇನು;

(ಈ) Right to Education Act (RTE) ನಲ್ಲಿ ಈ ಸಂಬಂಧ ಯಾವ ರೀತಿಯ ನಿಯಮಗಳಿವೆ;

(ಉ) ಈ ಸಂಬಂಧ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ Writ Petition No. 32598/32830/2011 (S-RES) ನ ತೀರ್ಪಿನ ಯಥಾವತ್ ವಿವರ ನೀಡುವುದು;

(ಊ) ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಅನುದಾನಿತ ಶಾಲೆಗಳಿಗೂ ೧:೩೦ ಅನುಪಾತವನ್ನು ಆದೇಶಿಸಿ ಕಡ್ಡಾಯಗೊಳಿಸಲು ಸರ್ಕಾರ ಮುಂದಾಗುವುದೆಯೇ; ಇಲ್ಲವಾದಲ್ಲಿ, ಕಾರಣವೇನು?

## ಬೆಂಗಳೂರು ಸೆಂಟ್ರಲ್ ಹಾಗೂ ಬೆಂಗಳೂರು ಉತ್ತರ ವಿಶ್ವವಿದ್ಯಾಲಯಗಳಿಗೆ ಮೂಲಭೂತ ಸೌಕರ್ಯಗಳಿಗೆ ಹಣ ಬಿಡುಗಡೆ ವಿಳಂಬವಾಗಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೭೨೫ (೧೫೧೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಸೆಂಟ್ರಲ್ ಹಾಗೂ ಬೆಂಗಳೂರು ಉತ್ತರ ವಿಶ್ವವಿದ್ಯಾಲಯಗಳನ್ನು ಸರ್ಕಾರವು ೨೦೧೭–೧೮ನೇ ಸಾಲಿನಿಂದಲೇ ಪ್ರಾರಂಭಿಸಲು ಹೊರಟಿರುವುದು ನಿಜವೆ;

(ಆ) ಇದುವರೆವಿಗೂ ಸದರಿ ನೂತನ ವಿಶ್ವವಿದ್ಯಾಲಯಗಳನ್ನು ತೆರೆಯಲು ಯಾವ ರೀತಿಯ ಸಿದ್ದತೆಗಳನ್ನು ಮಾಡಿಕೊಳ್ಳಲಾಗಿದೆ; ಯಾವ ಯಾವ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ ; (ವಿವರ ನೀಡುವುದು)

(ಇ) ಸದರಿ ವಿಶ್ವವಿದ್ಯಾಲಯಗಳ ಅನುಷ್ಠಾನಕ್ಕೆ ಈಗಾಗಲೇ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ವಿವರ ನೀಡುವುದು) ಇನ್ನೂ ಎಷ್ಟು ಹಣದ ಅಗತ್ಯವಿದೆ; ಬಾಕಿ ಹಣವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ?

# ರಾಜ್ಯ ಸರ್ಕಾರ ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಪ್ರಾಂಶುಪಾಲರ ಹಾಗೂ ಪ್ರೌಢ ಶಾಲಾ ಶಿಕ್ಷಕರ ವೇತನ ತಾರತಮ್ಯ ಸರಿಪಡಿಸಲು ೨ನೇ ವೇತನ ಬಡ್ತಿ ನೀಡುವಲ್ಲಿ ವಿಳಂಬವಾಗಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೭೨೬ (೧೫೦೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ಪದವಿ ಪೂರ್ವ ಕಾಲೇಜು ಉಪನ್ಯಾಸಕರ ವೇತನ ತಾರತಮ್ಯ ನಿವಾರಣೆ ಕುರಿತಂತೆ ಜಿ. ಕುಮಾರ್ ನಾಯಕ್ ರವರ ವರದಿಯಲ್ಲಿ ಉಪನ್ಯಾಸಕರ, ಪ್ರಾಂಶುಪಾಲರ ಹಾಗೂ ಪ್ರೌಢ ಶಾಲಾ ಶಿಕ್ಷಕರ ಮೂಲ ವೇತನ ಎಷ್ಟಿರಬೇಕೆಂದು ತಿಳಿಸಲಾಗಿದೆ; ಪ್ರಸ್ತುತ ಈಗಿರುವ ಮೂಲ ವೇತನವೆಷ್ಟು ;

(ಆ) ಸದರಿ ವರದಿಯ ಅನುಷ್ಠಾನಕ್ಕೆ ಬದಲು ಅದಕ್ಕೆ ಪರ್ಯಾಯವಾಗಿ ಕನಿಷ್ಠ ೨ ವೇತನ ಬಡ್ತಿ ನೀಡುವ ನಿಲುವಿಗೆ ಸರ್ಕಾರ ಈ ಹಿಂದೆ ಬಂದಿದ್ದು ನಿಜವೆ;

(ಇ) ಈ ಸಂಬಂಧ ೨ನೇ ವೇತನ ಬಡ್ತಿಯನ್ನು ಡಿಸೆಂಬರ್ ೨೦೧೬ ಅಥವಾ ಜನವರಿ ೨೦೧೭ರೊಳಗೆ ನೀಡುವುದಾಗಿ ಸರ್ಕಾರ ಭರವಸೆ ನೀಡಿದ್ದು, ಈವರೆವಿಗೂ ನೀಡಿಲ್ಲದಿರುವುದಕ್ಕೆ ಕಾರಣಗಳೇನು? (ವಿವರ ನೀಡುವುದು)

## ಆರ್.ಟಿ.ಇ. ಸೀಟುಗಳ ಹಂಚಿಕೆ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೨೭ (೧೫೨೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಆರ್.ಟಿ.ಇ. ಸೀಟು ಹಂಚಿಕೆ ಪ್ರಕ್ರಿಯೆಯು ಒಂದಲ್ಲಾ ಒಂದು ರೀತಿ ಕಗ್ಗಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಒಂದೊಂದು ಬಾರಿ ಒಂದೊಂದು ಅರ್ಜಿ ನಮೂನೆ, ದಾಖಲೆಗಳನ್ನು ಹೊಸದಾಗಿ ಕೇಳುತ್ತಿರುವುದರಿಂದ, ಅರ್ಜಿ ಸಲ್ಲಿಕೆಗೆ ಪೋಷಕರು ನಿತ್ಯ ಸೈಬರ್ ಸೆಂಟರ್‌ಗಳತ್ತ ಪರದಾಡುವಂತಾಗಿದ್ದು, ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸುವ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು ; (ವಿವರ ನೀಡುವುದು)

(ಇ) ಕಳೆದ ಬಾರಿ ಆರ್.ಟಿ.ಇ. ಸೀಟುಗಳನ್ನು ನಿರಾಕರಿಸಿದ ಶಾಲೆಗಳ ಮೇಲೆ ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ; ಅಲ್ಲದೆ ಲಾಟರಿ ಮೂಲಕ, ದಾಖಲಾತಿ ವೇಳೆ ಆರ್.ಟಿ.ಇ. ಮಕ್ಕಳನ್ನು ಶಾಲೆಗಳಲ್ಲಿ ನಡೆಸಿಕೊಳ್ಳುವ ರೀತಿ ಅಥವಾ ಉಳಿದಿರುವ ಸೀಟುಗಳ ಹಂಚಿಕೆ ಬಗ್ಗೆ ಪ್ರತಿ ವರ್ಷವು ಸಮಸ್ಯೆಗಳು ಉಂಟಾಗುತ್ತಿದ್ದು, ಇದಕ್ಕೆಲ್ಲಾ ಶಾಶ್ವತ ಪರಿಹಾರವನ್ನು ಕಂಡುಕೊಳ್ಳುವ ಕ್ರಮವೇನು ; (ಮಾಹಿತಿ ನೀಡುವುದು)

(ಈ) ಆರ್.ಟಿ.ಇ. ಸೀಟುಗಳನ್ನು ನಿರಾಕರಿಸಿ ನ್ಯಾಯಾಲಯದಿಂದ ತಡೆಯಾಜ್ಞೆ ತಂದ ಶಾಲೆಗಳಾವುವು; ಹಾಗೂ ಈ ತಡೆಯಾಜ್ಞೆಗಳನ್ನು ತೆರವುಗೊಳಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ?

## ಬೆಂಗಳೂರು ವಿ.ವಿ.ಯಲ್ಲಿನ ಪದವಿ ಕೋರ್ಸ್‌ಗಳ ಮೌಲ್ಯಮಾಪನದ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೨೮ (೧೫೨೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿಶ್ವವಿದ್ಯಾಲಯ ಪದವಿ ಕೋರ್ಸ್‌ಗಳ ಮೌಲ್ಯಮಾಪನ ಕಾರ್ಯದಲ್ಲಿ ಮೌಲ್ಯಮಾಪಕರು ಕನಿಷ್ಠ ಬೋಧನಾ ಅವಧಿಗೂ ಮುನ್ನವೆ ಮೌಲ್ಯಮಾಪನದಲ್ಲಿ ಭಾಗಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಬಾರದಿದ್ದಲ್ಲಿ, ಮೌಲ್ಯಮಾಪಕರನ್ನು ಆಯ್ಕೆ ಮಾಡುವ ಪಟ್ಟಿಯನ್ನು ಪರಿಶೀಲಿಸಲಾಗಿದೆಯೇ; (ಪೂರ್ಣ ವಿವರ ನೀಡುವುದು)

(ಇ) ಮೌಲ್ಯಮಾಪನ ಕಾರ್ಯಕ್ಕೆ ನಿಯೋಜನೆಗೊಂಡ ಮೌಲ್ಯಮಾಪಕರು ಗೈರು ಹಾಜರಾದಲ್ಲಿ, ಕೈಗೊಳ್ಳುವ ಕ್ರಮವೇನು; ಕಳೆದ ೫ ವರ್ಷಗಳಲ್ಲಿ ಗೈರುಹಾಜರಾದ ಮೇಲೆ ಮತ್ತು ಸಂಸ್ಥೆ/ಮುಖ್ಯಸ್ಥರ ಮೇಲೆ ತೆಗೆದುಕೊಂಡ ಕ್ರಮಗಳೇನು ? (ಪೂರ್ಣ ಮಾಹಿತಿ ನೀಡುವುದು)

## ಹೂಡಿಕೆದಾರರ ಸಮಾವೇಶ ಮತ್ತು ಬಂಡವಾಳ ಹೂಡಿಕೆ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೨೯ (೧೫೨೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ನಾಲ್ಕು ವರ್ಷಗಳಲ್ಲಿ ಹಮ್ಮಿಕೊಂಡ ಉದ್ಯಮ ಸ್ನೇಹಿ ಯೋಜನೆಯು ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶಗಳು ಎಷ್ಟು ; (ಮಾಹಿತಿ ನೀಡುವುದು)

(ಆ) ಸದರಿ ಸಮಾವೇಶಗಳಲ್ಲಿ ಆದಂತಹ ಒಪ್ಪಂದಗಳು ಯಾವುವು; (ವಿವರಗಳನ್ನು ಒದಗಿಸುವುದು)

(ಇ) ಬಂಡವಾಳ ಹೂಡಿಕೆ ಮತ್ತು ಉದ್ಯೋಗ ಸೃಷ್ಠಿ ಬಗ್ಗೆ ಸರ್ಕಾರದ ನಿರ್ಧಾರಗಳನ್ನು ಸಮ್ಮತಿಸಿದ ಸಂಸ್ಥೆ/ಕಂಪನಿಗಳಾವುವು ಹಾಗೂ ಹೂಡಿಕೆ ಮಾಡುವ ಬಂಡವಾಳವೆಷ್ಟು;

(ಈ) ಇಂಜಿನಿಯರಿಂಗ್, ಔಷಧ, ಕೃಷಿ, ಆಹಾರ ಸಂಸ್ಕರಣೆ, ತಂತ್ರಜ್ಞಾನ, ಅನಿಮೇಷನ್, ಶಿಕ್ಷಣ ಮತ್ತು ಆರೋಗ್ಯ ಮುಂತಾದ ಕ್ಷೇತ್ರಗಳಲ್ಲಿ ಹೂಡಿಕೆ ಮಾಡುವ ಉದ್ಯಮಿಗಳನ್ನು ಸೆಳೆಯುವ ಬಗ್ಗೆ ಸರ್ಕಾರ ತೆಗೆದುಕೊಳ್ಳಲಿರುವ ನಿರ್ಧಾರಗಳೇನು ? (ವಿವರ ನೀಡುವುದು)

## ೧೯೯೪–೯೫ರ ಅವಧಿಯವರೆಗೆ ಅನುದಾನಕ್ಕೊಳಪಟ್ಟಿರುವ ಪದವಿ ಪೂರ್ವ ಕಾಲೇಜಿನ ದೈಹಿಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಿರುವ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ ) :–**

೧೭೩೦ (೧೪೮೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೯೪–೯೫ನೇ ಅವಧಿಯವರೆಗೆ ಕರ್ನಾಟಕ ರಾಜ್ಯದಲ್ಲಿ ಅನುದಾನಕ್ಕೆ ಒಳಪಟ್ಟಿರುವ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರ ಹುದ್ದೆಯನ್ನು ಭರ್ತಿ ಮಾಡಲಾಗಿದೆಯೇ; ಭರ್ತಿ ಮಾಡದೇ ಇದ್ದಲ್ಲಿ, ಯಾವ ಕಾರಣಕ್ಕೆ ತಡೆಹಿಡಿಯಲಾಗಿದೆ;

(ಆ) ರಾಜ್ಯದಲ್ಲಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಇಲ್ಲಿಯವರೆಗೆ ಎಷ್ಟು ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳು ಖಾಲಿ ಇರುತ್ತವೆ;

(ಇ) ಸರ್ಕಾರದ ಸುತ್ತೋಲೆಯನ್ವಯ ದೈಹಿಕ ಶಿಕ್ಷಣ ಶಿಕ್ಷಕರ ಖಾಲಿ ಇರುವ ಹುದ್ದೆಗಳನ್ನು (ವೇತನಾನುದಾನಕ್ಕೆ) ಒಳಪಡಿಸಲು ಸರ್ಕಾರ ಕಾಲಮಿತಿಯನ್ನು ನಿಗಧಿಪಡಿಸಿದೆಯೇ;

(ಈ) ಅನುದಾನಕ್ಕೆ ಒಳಪಟ್ಟಿರುವ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳ ಭರ್ತಿಗೆ ಸರ್ಕಾರವು ನಿಗಧಿಪಡಿಸಿರುವ ಕನಿಷ್ಠ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಸದರಿ ಸಂಖ್ಯೆಯು ಇತರೆ ರಾಜ್ಯಗಳ ಸಂಖ್ಯೆಗೆ ಅನುಗುಣವಾಗಿದೆಯೇ;

(ಉ) ಶಿಕ್ಷಣ ಇಲಾಖೆಯು ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಕನಿಷ್ಠ ವಿದ್ಯಾರ್ಥಿಗಳ ಸಂಖ್ಯೆ ೧೦೦ಕ್ಕೆ ನಿಗಧಿಪಡಿಸಿ ಸುತ್ತೋಲೆ ಹೊರಡಿಸಿದಾಗ ಅನುಮೋದನೆ ಕೋರಿ ಎಷ್ಟು ಕಾಲೇಜುಗಳು ಪ್ರಸ್ತಾವನೆಯನ್ನು ಸಲ್ಲಿಸಿದ್ದವು ; (ವಿವರ ನೀಡುವುದು)

(ಊ) ಪ್ರಸ್ತಾವನೆಯನ್ನು ಸಲ್ಲಿಸಿದ್ದ ಎಲ್ಲಾ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿಗೆ ಅನುಮೋದನೆ ನೀಡಲಾಗಿದೆಯೇ? ನೀಡದೇ ಇದ್ದಲ್ಲಿ ಯಾವ ಕಾರಣಕ್ಕೆ ತಡೆ ಹಿಡಿಯಲಾಗಿದೆ ?

## ಮೈಸೂರಿನಲ್ಲಿ ಆಯುಕ್ತಾಲಯವನ್ನು ಆರಂಭಿಸುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೧೭೩೧ (೧೪೧೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ವಿಭಾಗಕ್ಕೆ ಶೈಕ್ಷಣಿಕ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ಮೈಸೂರಿನಲ್ಲಿ ಶಿಕ್ಷಣ ಇಲಾಖೆಯ ಆಯುಕ್ತಾಲಯದ ಕಛೇರಿಯನ್ನು ಪ್ರಾರಂಭಿಸಲು ಉದ್ದೇಶಿಸಿದೆಯೇ;

(ಆ) ಹಾಗೆಯೇ ಹುಣಸೂರು ಕಂದಾಯ ತಾಲ್ಲೂಕನ್ನು ಶೈಕ್ಷಣಿಕ ಜಿಲ್ಲೆಯನ್ನಾಗಿ ಘೋಷಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ಇದ್ದಲ್ಲಿ, ಆಯುಕ್ತಾಲಯವನ್ನು ಮತ್ತು ಶೈಕ್ಷಣಿಕ ಜಿಲ್ಲಾ ಘೋಷಣೆಯನ್ನು ಯಾವಾಗ ಮಾಡಲಾಗುವುದು ?

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೧೭೩೨ (೧೪೧೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಸರ್ಕಾರಿ ಪ್ರಥಮ ದರ್ಜೆ (ಪದವಿ) ಕಾಲೇಜುಗಳಲ್ಲಿ ಖಾಲಿ ಇರುವ ಸಹ ಪ್ರಾಧ್ಯಾಪಕರ ಹುದ್ದೆಗಳೆಷ್ಟು ; (ವಿಷಯವಾರು ವಿವರ ನೀಡುವುದು)

(ಆ) ಸಹ ಪ್ರಾಧ್ಯಾಪಕರ ಹುದ್ದೆಗಳಿಗೆ ನೇಮಕಾತಿ ಹೊಂದಲು ನಿಗಧಿಪಡಿಸಿರುವ ವಿದ್ಯಾರ್ಹತೆ ಏನು;

(ಇ) ೨೦೦೯–ರ ಮೊದಲು ಎಂ.ಫಿಲ್ ಪದವಿ ಪಡೆದವರು ಸಹ ಪ್ರಾಧ್ಯಾಪಕರ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಿರುವರೆ; ಇದ್ದಲ್ಲಿ, ಈ ಬಗ್ಗೆ ಯು.ಜಿ.ಸಿ. ಹೊರಡಿಸಿದ ಆದೇಶದ ಪ್ರತಿ ನೀಡುವುದು;

(ಈ) ಈ ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುತ್ತದೆ?

## ಖಾಸಗಿ ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳ ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೧೭೩೩ (೧೪೯೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅನುದಾನಕ್ಕೆ ಒಳಪಡಿಸಲು ಅರ್ಹತೆಯುಳ್ಳ ಪಾಲಿಟೆಕ್ನಿಕ್ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಅರ್ಹವಿರುವ ಕಾಲೇಜುಗಳನ್ನು ೨೦೧೩ರಲ್ಲಿ ಅನುದಾನಕ್ಕೆ ಒಳಪಡಿಸಲು ಸರ್ಕಾರಿ ಆದೇಶವನ್ನು ಹೊರಡಿಸಲಾಗಿದೆಯೇ; (ಅದರ ಪ್ರತಿ ನೀಡುವುದು)

(ಇ) ಆದರೆ ಇದು ಇನ್ನೂ ಅನುಷ್ಠಾನಕ್ಕೆ ಬಾರದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಪ್ರಸ್ತಾವದ ಕಡತ ಯಾವ ಹಂತದಲ್ಲಿದೆ, ಇನ್ನೂ ವಿಲೇವಾರಿ ಆಗದಿರಲು ಕಾರಣವೇನು; ಯಾವಾಗ ವಿಲೇವಾರಿ ಮಾಡಲಾಗುವುದು;

(ಉ) ಸದರಿ ಆದೇಶದ ಪ್ರಕಾರ ಆ ಕಾಲೇಜುಗಳಿಗೆ ಯಾವಾಗ ಅನುದಾನವನ್ನು ನೀಡಲಾಗುವುದು; ಈ ನಿಟ್ಟಿನಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ?

## ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್‌ಗಳಲ್ಲಿನ ಹೊರಗುತ್ತಿಗೆ ನೌಕರರಿಗೆ ಸಮಾನ ವೇತನ ನೀಡುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೩೪ (೧೪೭೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್‌ಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಆ) ಅವರುಗಳಿಗೆ ಪ್ರಸ್ತುತ ನೀಡಲಾಗುತ್ತಿರುವ ವೇತನ ಎಷ್ಟು; ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಕಾರ್ಮಿಕ ಇಲಾಖೆಯಿಂದ ದಿನಾಂಕ ೦೪-೦೮-೨೦೧೬ ರಂದು ಹೊರಡಿಸಲಾದ ಅಧಿಸೂಚನೆ ಪ್ರಕಾರ ವೇತನ ನೀಡಲಾಗುತ್ತಿದೆಯೇ;

(ಇ) ಕೊಡಗು ಜಿಲ್ಲೆಯ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಎಷ್ಟು ನೌಕರರುಗಳು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ; ನೌಕರರಿಗೆ ನೀಡುತ್ತಿರುವ ವೇತನ ಎಷ್ಟು? (ಹುದ್ದೆವಾರು ವಿವರ ನೀಡುವುದು)

## ರಾಜ್ಯದ RTO ಕಛೇರಿಗಳಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೩೫ (೧೪೭೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಜಿಲ್ಲಾ ಕೇಂದ್ರಗಳಲ್ಲಿರುವ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಯಲ್ಲಿ ಮಂಜೂರಾದ, ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿಯಿರುವ ಹುದ್ದೆಗಳೆಷ್ಟು ; (ಅವುಗಳ ಮಾಹಿತಿ ನೀಡುವುದು; ಕೊಡಗು ಜಿಲ್ಲೆಯ ಬಗ್ಗೆ ಪ್ರತ್ಯೇಕ ಹುದ್ದೆವಾರು ವಿವರ ನೀಡುವುದು)

(ಆ) ಖಾಲಿಯಿರುವ ಹುದ್ದೆಗಳನ್ನು ತುಂಬಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಖಾಲಿಯಿರುವ ಹುದ್ದೆಗಳಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರ ನಿವಾರಣೆಗೆ ಸರ್ಕಾರದ ಕ್ರಮಗಳೇನು ?

## ಗ್ರಾಮ ಪಂಚಾಯತ್ ವ್ಯಾಪ್ತಿಯ ಬತ್ತಿದ ತೆರೆದ ಬಾವಿಗಳ ಡೀಪನಿಂಗ್ ಕಾರ್ಯ ಮಾಡುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೩೬ (೧೪೭೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಗ್ರಾಮ ಪಂಚಾಯತ್‌ಗಳಿಗೆ ಕಳೆದ ಮೂರು ವರ್ಷಗಳಲ್ಲಿ ಕುಡಿಯುವ ನೀರು ಕಲ್ಪಿಸಲು ಬಿಡುಗಡೆಯಾದ ಅನುದಾನವೆಷ್ಟು; (ಜಿಲ್ಲಾವಾರು ವಿವರ ನೀಡುವುದು) ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು;

(ಆ) ಕೊಡಗು ಜಿಲ್ಲೆಯಲ್ಲಿ ತೆರೆದ ಬಾವಿ ಹಾಗೂ ಪ್ರಸ್ತುತ ಇರುವ ತೆರೆದ ಬಾವಿಗಳ ಡೀಪನಿಂಗ್ (ಆಳಮಾಡಲು) ಕಾರ್ಯಕ್ಕೆ ಅನುದಾನ ಬಿಡುಗಡೆ ಮಾಡಲಾಗಿದೆಯೇ;

(ಇ) ಕೊಡಗು ಜಿಲ್ಲೆಯಂತಹ ಗುಡ್ಡಗಾಡು ಪ್ರದೇಶದಲ್ಲಿರುವ ಒಂಟಿ ಮನೆಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಸರ್ಕಾರ ಯಾವ ಮಾರ್ಗಸೂಚಿಗಳನ್ನು ಅನುಸರಿಸಿದೆ; ಇಲ್ಲಿನ ಬತ್ತಿದ ತೆರೆದ ಬಾವಿಗಳಿಗೆ ಡೀಪನಿಂಗ್ (ಆಳಮಾಡಲು) ಕೈಗೊಂಡ ಕ್ರಮಗಳೇನು; ಡೀಪನಿಂಗ್ ಕಾರ್ಯ ಮಾಡಿದ ಗ್ರಾಮದ ಬಾವಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

# ವಸತಿ ಯೋಜನೆಗಳಲ್ಲಿ ಬಿಡುಗಡೆಯಾದ ಅನುದಾನದಲ್ಲಿನ ಆದೇಶ ಬದಲಾವಣೆಯ ಬಗ್ಗೆ

ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೭೩೭ (೧೪೭೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ವಸತಿ ಯೋಜನೆಗಳಡಿಯಲ್ಲಿ ಗ್ರಾಮ ಪಂಚಾಯತ್‌ಗಳಿಗೆ ಮನೆಗಳ ನಿರ್ಮಾಣಕ್ಕೆ ಬಿಡುಗಡೆ ಮಾಡಲಾದ ಅನುದಾನವೆಷ್ಟು ; ಪ್ರತಿ ಮನೆಗಳಿಗೆ ನೀಡುವ ಅನುದಾನ ಎಷ್ಟು; (ವಿವರ ನೀಡುವುದು) ವರ್ಗದವರಿಗೆ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ; (ಗ್ರಾಮ ಪಂಚಾಯತಿವಾರು ಮಾಹಿತಿ ನೀಡುವುದು)

(ಆ) ಕೊಡಗು ಜಿಲ್ಲೆಯಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ವರ್ಗ ಮತ್ತು ಸಾಮಾನ್ಯ ವರ್ಗದವರಿಗೆ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; (ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು)

(ಇ) ಕೆಲವು ಗ್ರಾಮ ಪಂಚಾಯತ್‌ಗಳಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ವರ್ಗದವರು ಕಡಿಮೆಯಿದ್ದು, ಸಾಮಾನ್ಯ ವರ್ಗದವರು ಹೆಚ್ಚಾಗಿದ್ದಲ್ಲಿ, ಅವರಿಗೆ ಮನೆ ನಿರ್ಮಾಣಕ್ಕೆ ಹೆಚ್ಚುವರಿ ಬೇಡಿಕೆ ಸರ್ಕಾರಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಈ) ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ವರ್ಗದವರಿಗೆ ಮನೆ ನಿರ್ಮಾಣಕ್ಕೆ ಬಿಡುಗಡೆಯಾದ ಅನುದಾನದಲ್ಲಿ ಅನುದಾನ ಉಳಿಕೆಯಾದಲ್ಲಿ, ಅದನ್ನು ಸಾಮಾನ್ಯ ವರ್ಗದವರಿಗೆ ಮನೆ ನಿರ್ಮಿಸಲು ಅನುಮತಿ ನೀಡಲು ಸರ್ಕಾರದ ನಿಲುವೇನು ? (ಆದೇಶ ನೀಡುವುದು)

## ಹಾವೇರಿ ಜಿಲ್ಲೆಯಲ್ಲಿ ಕಲ್ಲು ಕ್ವಾರಿ ನಡೆಸಲು ಅನುಮತಿ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೩೮ (೧೪೦೬) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿ ಕಲ್ಲು ಕ್ವಾರಿ ನಡೆಸಲು ಅನುಮತಿ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಅವು ಯಾವುವು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಕ್ವಾರಿ ನಡೆಸಲು ಅನುಮತಿ ನೀಡುವ ಎನ್‌ಕಂಬರೆನ್ಸ್ ಸರ್ಟಿಫಿಕೇಟ್ (ಇಸಿ) ನೀಡುವ ಅಧಿಕಾರವನ್ನು ಸರ್ಕಾರ ಯಾರಿಗೆ ನೀಡಿದೆ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಎನ್‌ಕಂಬರೆನ್ಸ್ ಸರ್ಟಿಫಿಕೇಟ್ (ಇಸಿ) ಪಡೆದ ಕ್ವಾರಿ ಮಾಲೀಕರು/ ಗುತ್ತಿಗೆದಾರರು ಅವಧಿ ಮುಗಿದ ನಂತರ ಪಡೆಯಬೇಕಾದ (ಎನ್.ಓ.ಸಿ) ನಿರಾಕ್ಷೇಪಣಾ ಪತ್ರ ಪಡೆಯಲು ಬಹಳಷ್ಟು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ನೀಡಲಾದ ಪರಿಹಾರವೇನು ;

(ಈ) ಅನುಮತಿ ಪಡೆದಾಗಿನಿಂದ ಕ್ವಾರಿ ಮಾಡುತ್ತಿರುವ ಗುತ್ತಿಗೆದಾರರು ಗುತ್ತಿಗೆ ಅವಧಿ ಮುಗಿದ ನಂತರ ನವೀಕರಣ ಮಾಡಲು ಸರ್ಕಾರ ಜನರಿಗೆ ಸಹಾಯವಾಗುವಂತಹ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತದೆಯೇ ?

# ಹಾವೇರಿ ಜಿಲ್ಲೆಯ ನಿರ್ಮಿತಿ ಕೇಂದ್ರದ ಯೋಜನಾ ವ್ಯವಸ್ಥಾಪಕರ ಹಾಗೂ ಇತರರ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೩೯ (೧೪೦೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಿರ್ಮಿತಿ ಕೇಂದ್ರ ಯೋಜನಾ ವ್ಯವಸ್ಥಾಪಕರಿಗೆ ಚೆಕ್‌ಗಳಿಗೆ ಸಹಿ ಮಾಡುವ ಅಧಿಕಾರವಿದೆಯೇ ; ಇದ್ದರೆ ಎಷ್ಟು ಮೊತ್ತದವರೆಗೆ ಸಹಿ ಮಾಡುವ ಅಧಿಕಾರವಿರುತ್ತದೆ ; ಈ ಬಗ್ಗೆ ಸರ್ಕಾರದ ಆದೇಶ ನಿಯಮಗಳ ಪ್ರತಿಯೊಂದಿಗೆ ವಿವರ ಒದಗಿಸುವುದು ;

(ಆ) ಹಾವೇರಿ ಜಿಲ್ಲೆಯ ನಿರ್ಮಿತಿ ಕೇಂದ್ರದ ೨೦೦೯ ರಿಂದ ಫೆಬ್ರವರಿ–೨೮ ೨೦೧೭ ರವರೆಗೆ ವ್ಯವಸ್ಥಾಪಕರು ಇಲ್ಲಿಯವರೆಗೆ ಯಾವ ದಿನಾಂಕದಿಂದ ಯಾವ ದಿನಾಂಕದವರೆಗೆ ಎಷ್ಟೆಷ್ಟು ಮೊತ್ತದ ಚೆಕ್‌ಗಳಿಗೆ ಸಹಿ ಮಾಡಿರುತ್ತಾರೆ ; ಯಾರ ಹೆಸರಿಗೆ ಚೆಕ್ ತೆಗೆದಿರುತ್ತಾರೆ ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ೨೦೧೦ ರಿಂದ ಫೆಬ್ರವರಿ–೨೮ ೨೦೧೭ರವರೆಗೆ ನಿರ್ಮಿತಿ ಕೇಂದ್ರದ ಸಿಬ್ಬಂದಿ/ಯೋಜನಾ ವ್ಯವಸ್ಥಾಪಕರಿಗೆಂದು ಖರೀದಿಸಿದ ವಾಹನಗಳೆಷ್ಟು ; ಇವು ಯಾವ ಯಾವ ವಾಹನಗಳು ; (ವಾಹನ ಸಂಖ್ಯೆ ಮತ್ತು ಲಾಗ್ ಬುಕ್ ಪ್ರತಿ ಮಾಹಿತಿ ನೀಡುವುದು)

(ಈ) ಜೂನ್–೨೦೧೬ ರಿಂದ ಸ್ಕಾರ್ಪಿಯೋ ವಾಹನ ಬಳಕೆಯ ಪೂರ್ಣ ವಿವರ ಮತ್ತು ಲಾಗ್ ಬುಕ್ ವಾಹನ ಚಾಲಕರ ವಿವರ ನೀಡುವುದು;

(ಉ) ಜೂನ್ ೨೦೧೩ ಶಿಗ್ಗಾಂವ್ ತಾಲ್ಲೂಕಿನಲ್ಲಿ ಹಾಗೂ ಸವಣೂರು ತಾಲ್ಲೂಕಿನಲ್ಲಿ ಯೋಜನಾ ವ್ಯವಸ್ಥಾಪಕರು/ಅಭಿಯಂತರರು ನಿರ್ವಹಿಸಿದ ಕುಡಿಯುವ ನೀರಿನ ಕಾಮಗಾರಿಗಳಾವುವು ; ಯೋಜನಾ ವ್ಯವಸ್ಥಾಪಕರು ಎಷ್ಟು ಬಾರಿ ವೀಕ್ಷಣೆ ಮಾಡಿರುವ ಕಾಮಗಾರಿಗಳಾವುವು ; ಮಾಡದೇ ಇರುವ ಕಾಮಗಾರಿಗಳಾವುವು?

## ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ನಿವೃತ್ತಿ ಸ್ವಯಂ ನಿವೃತ್ತಿ ಹಾಗೂ ಇತರೆ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೪೦ (೧೪೦೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಮರಣ, ಸ್ವಯಂ ನಿವೃತ್ತಿ, ನಿವೃತ್ತಿಯಿಂದ ತೆರವಾಗಿರುವ ಹುದ್ದೆಗಳ ಭರ್ತಿಗೆ ಸರ್ಕಾರ ಕ್ರಮ ಕೈಗೊಂಡಿದೆಯೇ;

(ಆ) ಕ್ರಮ ಕೈಗೊಂಡಿದ್ದರೆ, ಯಾವ ವರ್ಷದಿಂದ ಯಾವ ವರ್ಷದೊಳಗಿನ ತೆರವಾಗಿರುವ ಹುದ್ದೆಗಳಿಗೆ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗುವುದು ? (ಸದರಿ ಪ್ರಸ್ತಾವನೆಗಳ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು ಶಾಲಾ, ಕಾಲೇಜುವಾರು ಪ್ರಸ್ತಾವನೆಯ ಸಂಖ್ಯೆಯನ್ನು ಒದಗಿಸುವುದು)

## ಹಾವೇರಿ ಜಿಲ್ಲೆಯಲ್ಲಿರುವ ಓವರ್‌ಹೆಡ್ ನೀರಿನ ಟ್ಯಾಂಕ್‌ಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೪೧ (೧೪೦೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿರುವ ಓವರ್‌ಹೆಡ್ ಟ್ಯಾಂಕುಗಳು ಎಷ್ಟು; ಇವುಗಳನ್ನು ಎಷ್ಟು ವರ್ಷಗಳ ಹಿಂದೆ ನಿರ್ಮಾಣ ಮಾಡಲಾಗಿರುತ್ತದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಓವರ್‌ಹೆಡ್ ಟ್ಯಾಂಕುಗಳನ್ನು ನಿಯಮದ ಪ್ರಕಾರ ಎಷ್ಟು ವರ್ಷ ಬಳಕೆ; (ಉಪಯೋಗ) ಮಾಡಬಹುದು)

(ಇ) ಇದರಲ್ಲಿ ಬಹಳಷ್ಟು ಟ್ಯಾಂಕುಗಳು ಶಿಥಿಲಗೊಂಡು ಬೀಳುವ ಹಂತದಲ್ಲಿರುವ ಓವರ್‌ಹೆಡ್ ಟ್ಯಾಂಕುಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಇವುಗಳನ್ನು ನೆಲಸಮಗೊಳಿಸಲು ಏನಾದರೂ ಕ್ರಮ ತೆಗೆದುಕೊಳ್ಳಲಾಗಿರುತ್ತದೆಯೇ ; ಹಾಗಿದ್ದರೆ ಇದಕ್ಕೆ ತಗಲುವ ವೆಚ್ಚವನ್ನು ಯಾರು ಭರಿಸುತ್ತಾರೆ ?

## ಹಾವೇರಿ ಜಿಲ್ಲಾ ನಿರ್ಮಿತಿ ಕೇಂದ್ರ ಹಾಗೂ ಸಿಬ್ಬಂದಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೪೨ (೧೪೦೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲಾ ನಿರ್ಮಿತಿ ಕೇಂದ್ರದಲ್ಲಿ ಎಷ್ಟು ಮಂದಿ ಸಿಬ್ಬಂದಿ/ ಅಧಿಕಾರಿಗಳು ಕರ್ತವ್ಯನಿರ್ವಹಿಸುತ್ತಿದ್ದಾರೆ ; ಖಾಯಂ ಸರ್ಕಾರಿ ನೌಕರರು ಮತ್ತು ಹೊರ ಗುತ್ತಿಗೆ ನೌಕರರು ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ನೌಕರರು ಯಾವ ಯಾವ ಹುದ್ದೆಯಲ್ಲಿ ಎಷ್ಟು ವರ್ಷಗಳಿಂದ ಕೆಲಸ ನಿರ್ವಹಿಸುತ್ತಿದ್ದಾರೆ ; ಅವರ ವಿದ್ಯಾರ್ಹತೆಗಳೇನು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ೨೦೧೧ ರಿಂದ ೨೦೧೬ ರವರೆಗೆ ಹಾವೇರಿ ನಿರ್ಮಿತಿ ಕೇಂದ್ರದಿಂದ ಕೈಗೊಂಡ ಹೊಸ ಮತ್ತು ನಿರ್ವಹಣಾ ಕಾಮಗಾರಿಗಳು ಯಾವುವು ; ತಗುಲಿದ ಮೊತ್ತ ಎಷ್ಟು ; ೩ನೇ ಹಂತದ ಛಾಯಾ ಚಿತ್ರ ತಪಾಸಣಾ ವರದಿಯ ಪ್ರತಿ ನೀಡುವುದು) (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ೨೦೦೮ ರಿಂದ ೨೦೧೬ ರವರೆಗೆ ನಿರ್ಮಿತಿ ಕೇಂದ್ರದ ಆಡಿಟ್ ವರದಿ ನೀಡುವುದು)

(ಉ) ಹಾವೇರಿ ಜಿಲ್ಲೆ, ರಾಣೆಬೆನ್ನೂರು ತಾಲ್ಲೂಕು ಮಾಕನೂರು ಗ್ರಾಮದ ಆಶ್ರಮ ಶಾಲೆ ನಿರ್ಮಾಣದ ಕಾಮಗಾರಿ ಯಾವಾಗ ಆರಂಭವಾಯಿತು ; (ದಿನಾಂಕ ಅಂದಾಜು ಮೊತ್ತ, ಬಿಲ್ಲುಗಳ ವಿವರ, ಛಾಯಾಚಿತ್ರ ಹಾಗೂ Third Party inspection Report ಗಳನ್ನು ಒದಗಿಸುವುದು)

(ಊ) ಸದರಿ ಆಶ್ರಮ ಶಾಲೆ ಪ್ರಾರಂಭವಾದ ನಂತರದಿಂದ ಇಲ್ಲಿಯವರೆಗೆ ದುರಸ್ಥಿ/ನಿರ್ವಹಣೆಗೆ ಖರ್ಚು ಮಾಡಿದ ಅನುದಾನ ಎಷ್ಟು ; ಕಾಮಗಾರಿಯ ಸಂಪೂರ್ಣ ಮಾಹಿತಿ ಹಾಗೂ ದಾಖಲೆ ಒದಗಿಸುವುದು ; ಇದನ್ನು ಯಾವ ಏಜೆನ್ಸಿಯವರು ಮಾಡಿದ್ದಾರೆ? (ವಿವರ ನೀಡುವುದು)

## ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ವೆಚ್ಚದ ವಿವರ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೪೩ (೧೪೪೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ;

(ಆ) ೨೦೧೬–೧೭ನೇ ಸಾಲಿನಲ್ಲಿ ಸರ್ಕಾರಿ ಪ್ರೌಢ ಶಾಲೆಗಳಲ್ಲಿನ ಎಲ್ಲಾ ವಿದ್ಯಾರ್ಥಿಗಳಿಗೆ ಡಿಜಿಟಲ್ ಸಾಕ್ಷರತೆಯನ್ನು ಒದಗಿಸಲು ಪ್ರೌಢ ಶಾಲಾ ಶಿಕ್ಷಕರ ಮೂಲಕ ಸಮಗ್ರವಾದ ಇ– ವಿಷಯಾಧಾರಿತ 'ಐಟಿ @ ಸ್ಕೂಲ್ ಇನ್ ಕರ್ನಾಟಕ ' ಎಂಬ ಕಾರ್ಯಕ್ರಮವನ್ನು ಪ್ರಾರಂಭಿಸಲಾಗಿದೆಯೇ ;

(ಇ) ಪ್ರಾರಂಭಿಸಿದ್ದರೆ, ರಾಜ್ಯದ ಒಟ್ಟು ಶಾಲೆಗಳ ಪೈಕಿ ಎಷ್ಟು ಶಾಲೆಗಳಿಗೆ ಡಿಜಿಟಲ್ ಸಾಕ್ಷರತೆಯನ್ನು ಒದಗಿಸಲಾಗಿದೆ ; ಇದರ ಅನುಕೂಲತೆ ಪಡೆದ ವಿದ್ಯಾರ್ಥಿಗಳು ಎಷ್ಟು ;

(ಈ) ಯೋಗ ಶಿಕ್ಷಣವನ್ನು ಎಷ್ಟು ಶಾಲೆಗಳಲ್ಲಿ ಪ್ರೋತ್ಸಾಹಿಸಲಾಗಿದೆ?

## ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣದ ಗುಣಮಟ್ಟದ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೪೪ (೧೪೪೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣದ ಗುಣಮಟ್ಟವನ್ನು ಉತ್ತಮಪಡಿಸಲು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ; ಯಾವ ಯಾವ ವಿಧಾನಗಳನ್ನು ರೂಪಿಸಲಾಗಿದೆ;

(ಆ) ಸರ್ಕಾರಿ ಶಾಲೆಗಳಲ್ಲಿ ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ರಜೆಯಲ್ಲಿ ಪೂರಕ ಬೋಧನೆಯ ವ್ಯವಸ್ಥೆಯನ್ನು ಮಾಡಲಾಗಿದೆಯೇ ;

(ಇ) ಬೋಧನೆಯ ವ್ಯವಸ್ಥೆ ಮಾಡಿದ್ದಲ್ಲಿ, ಜಿಲ್ಲಾವಾರು ಎಷ್ಟು ಶಾಲೆಗಳಲ್ಲಿ ವ್ಯವಸ್ಥೆ ಮಾಡಲಾಗಿದೆ ; ಇದರ ಪರಿಣಾಮ ಹೇಗಿದೆ ;

(ಈ) ಮಧ್ಯಾಹ್ನದ ಬಿಸಿಯೂಟ ಯೋಜನೆಯಡಿಯಲ್ಲಿ ಅಡಿಗೆಯವರ ಗೌರವಧನವನ್ನು ಹೆಚ್ಚಿಸಲಾಗಿದೆಯೇ ; ಹೆಚ್ಚಿಸಿದ್ದರೆ, ಎಷ್ಟು ಹೆಚ್ಚಿಸಲಾಗಿದೆ ; ಪ್ರಸ್ತುತ ಗೌರವಧನ ಎಷ್ಟು ?

## ಕೈಗಾರಿಕೆ ನೀತಿಗಳ ಬದಲಾವಣೆ ಮತ್ತು ಭೂಮಿ ಹಂಚಿಕೆ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೪೫ (೧೪೪೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಕೈಗಾರಿಕೆಗಳ ನೀತಿಯಲ್ಲಿ ಬದಲಾವಣೆ ಮಾಡಲಾಗಿದೆಯೇ ; ಇದಕ್ಕೆ ಕಾರಣಗಳೇನು ; ಈ ನಿಟ್ಟಿನಲ್ಲಿ ಕೈಗಾರಿಕಾ ಉದ್ದೇಶಕ್ಕೆ ಬಳಕೆ ಮಾಡುವ ಭೂಮಿಯ ಹಂಚಿಕೆ ನಿಯಮಗಳನ್ನು ಪರಿಷ್ಕರಿಸುವುದು ನಿಜವೇ ;

(ಆ) ಈ ಪರಿಷ್ಕೃತ ಭೂಮಿ ಹಂಚಿಕೆ ನಿಯಮ ಯಾವಾಗಿನಿಂದ ಜಾರಿಗೆ ಬರುತ್ತದೆ ;

(ಇ) ಹಾಲಿ ಇದ್ದ ಭೂಮಿ ಹಂಚಿಕೆ ನಿಯಮಗಳೇನು ; ಈಗ ಇದನ್ನು ಗುತ್ತಿಗೆ/ಲೀಸ್ ಬದಲಿಗೆ ಮಾರಾಟಕ್ಕೆ ಮುಂದಾಗಿದೆಯೇ;

(ಈ) ಇದರಿಂದ ಕೈಗಾರಿಕಾ ಕ್ಷೇತ್ರವನ್ನು ಪ್ರೋತ್ಸಾಹಿಸಿದಂತಾಗುವುದೆಂದು ಸರ್ಕಾರ ಭಾವಿಸುವುದೇ ;

(ಉ) ಸದರಿ ಯೋಜನೆಯ ಲಾಭ ಪಡೆಯಲು ಕೈಗಾರಿಕೋದ್ಯಮಿಗಳು ಮುಂದೆ ಬಂದಿರುವರೇ ; ಈ ನಿಯಮ ಯಾರಿಗೆ ಯಾವ ಪ್ರಮಾಣ ಕೈಗಾರಿಕೆ ಸ್ಥಾಪನೆಗಳಿಗೆ ಅನ್ವಯವಾಗುತ್ತದೆ ? (ವಿವರಗಳನ್ನು ಒದಗಿಸುವುದು)

## ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳುವ ಕುರಿತು

**ಶ್ರೀ ಎಸ್.ವ್ಹಿ ಸಂಕನೂರ (ಪದವೀಧರರ ಕ್ಷೇತ್ರ) :–**

೧೭೪೬ (೧೬೧೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಒಟ್ಟು ಸಂಖ್ಯೆ ಎಷ್ಟು; ಇವುಗಳಲ್ಲಿ ಎಷ್ಟು ಜನ ದೈಹಿಕ ಶಿಕ್ಷಕರು/ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿರುತ್ತಾರೆ ;

(ಆ) ರಾಜ್ಯದ ಪದವಿ ಪೂರ್ವ ಕಾಲೇಜುಗಳಿಗಾಗಿ, ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ತುಂಬಿಕೊಳ್ಳುವ ಕುರಿತು ಸರ್ಕಾರ ಯಾವುದಾದರೂ ನಿರ್ಣಯವನ್ನು ಕೈಗೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಮತ್ತು ಯಾವಾಗ ಭರ್ತಿ ಮಾಡಲಾಗುವುದು ; ಮತ್ತು ಈ ಹುದ್ದೆಗಳಿಗೆ ನಿಗಧಿಪಡಿಸಿದ ವಿದ್ಯಾರ್ಹತೆ ಮತ್ತು ವೇತನ ಶ್ರೇಣಿ ಏನು ;

(ಇ) ಈಗಾಗಲೇ ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಪ್ರೌಢ ಶಾಲಾ ದೈಹಿಕ ಶಿಕ್ಷಕರನ್ನು ಪದವಿ ಪೂರ್ವ ಕಾಲೇಜುಗಳ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗೆ ಪದೋನ್ನತಿ ನೀಡುವ ಬಗ್ಗೆ ಸರ್ಕಾರ ಯಾವುದಾದರೂ ನಿರ್ಣಯ ಕೈಗೊಂಡಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು?

## ಗದಗ ಜಿಲ್ಲೆಯ ನರೇಗಲ್ ಪಟ್ಟಣ ಪಂಚಾಯಿತಿ ವತಿಯಿಂದ ರೂಪಿಸಲಾದ ರಾಜೀವ್ ಗಾಂಧಿ ವಸತಿ ಯೋಜನೆ ಕುರಿತು

**ಶ್ರೀ ಎಸ್.ವ್ಹಿ ಸಂಕನೂರ (ಪದವೀಧರರ ಕ್ಷೇತ್ರ) :–**

೧೭೪೭ (೧೬೧೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗದಗ ಜಿಲ್ಲೆಯ ನರೇಗಲ್ ಪಟ್ಟಣ ಪಂಚಾಯ್ತಿ ವತಿಯಿಂದ ರಾಜೀವ್ ಗಾಂಧಿ ವಸತಿ ಯೋಜನೆಯಡಿ ದ್ಯಾಂಪೂರ ರೋಡಿನಲ್ಲಿ ಬಡವರಿಗಾಗಿ ಮನೆ ವಿತರಿಸಲು ೪೨ ಎಕರೆ ಭೂಮಿಯನ್ನು ಖರೀದಿಸಲಾಗಿತ್ತೇ ;

(ಆ) ಈ ವಸತಿ ಯೋಜನೆಗಾಗಿ ಸರ್ಕಾರದಿಂದ ಎಷ್ಟು ಹಣವನ್ನು ನಿಗಧಿಪಡಿಸಲಾಗಿತ್ತು ;

(ಇ) ಈ ಯೋಜನೆಯಡಿ ಸದ್ಯ ಎಷ್ಟು ಮನೆಗಳನ್ನು ಕಟ್ಟಲಾಗಿದೆ ಮತ್ತು ಇನ್ನೂ ಎಷ್ಟು ಮನೆಗಳನ್ನು ಕಟ್ಟುವ ಯೋಜನೆ ಇದೆ ;

(ಈ) ಇಲ್ಲಿಯವರೆಗೆ ಈ ಯೋಜನೆಗೆ ಜಾಗ ಮತ್ತು ಮನೆ ಕಟ್ಟಲು ಖರ್ಚು ಮಾಡಿದ ಹಣ ಎಷ್ಟು ; (ವಿವರ ನೀಡುವುದು)

(ಉ) ಮನೆ ಹಂಚಿಕೆ ಮಾಡಲು ಫಲಾನುಭವಿಗಳನ್ನು ಗುರುತಿಸಲಾಗಿದೆಯೇ ; (ವಿವರ ನೀಡುವುದು)

(ಊ) ಈಗಾಗಲೇ ಕಟ್ಟಲಾಗಿರುವ, ಮನೆಗಳಿಗೆ ಅವಶ್ಯವಿರುವ ರಸ್ತೆ, ನೀರು ಹಾಗೂ ವಿದ್ಯತ್ ಪೂರೈಸಲಾಗಿದೆಯೇ ?

## ನರೇಗಲ್ ಬಸ್ ನಿಲ್ದಾಣದಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ

**ಶ್ರೀ ಎಸ್.ವ್ಹಿ ಸಂಕನೂರ (ಪದವೀಧರರ ಕ್ಷೇತ್ರ) :–**

೧೭೪೪೮ (೧೬೩೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನರೇಗಲ್ ಬಸ್ ನಿಲ್ದಾಣದಲ್ಲಿ ಕುಡಿಯುವ ನೀರು, ಶೌಚಾಲಯ ಮತ್ತು ಸ್ವಚ್ಛತೆ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಹಿಂದೆ ನೀರಿನ ಪೂರೈಕೆಗಾಗಿ ಕೊರೆಯಲಾಗಿದ್ದ ಬೋರ್‌ವೆಲ್ ಕೆಟ್ಟು ಹೋಗಿದ್ದು, ಅದನ್ನು ಅಧಿಕಾರಿಗಳು ದುರಸ್ಥಿ ಮಾಡದೆ ಇರುವುದು ನಿಜವೆ; ಹಾಗಿದ್ದಲ್ಲಿ, ಈ ಕುರಿತು ಕೈಗೊಂಡಿರುವ ಕ್ರಮವೇನು ;

(ಇ) ನೂತನವಾಗಿ ನಿರ್ಮಿಸಿದ ಮಹಿಳಾ ಶೌಚಾಲಯ ಕಾಮಗಾರಿ ಪೂರ್ಣಗೊಂಡಿದ್ದು, ಐದು ತಿಂಗಳುಗಳು ಕಳೆದಿದ್ದರೂ ಸದರಿ ಶೌಚಾಲಯಗಳು ಆಗಿಲ್ಲದಿರುವುದಕ್ಕೆ ಕಾರಣಗಳೇನು ;

(ಈ) ಬಸ್ ನಿಲ್ದಾಣದಲ್ಲಿ ಸಾರ್ವಜನಿಕರ ದ್ವಿಚಕ್ರ ವಾಹನ ಮತ್ತು ಖಾಸಗಿ ವಾಹನಗಳನ್ನು ನಿಲ್ಲಿಸಲು ಪಾರ್ಕಿಂಗ್ ವ್ಯವಸ್ಥೆ ಇಲ್ಲದಿರುವುದು ನಿಜವೇ ; ಹಾಗಿದ್ದಲ್ಲಿ, ಇದನ್ನು ಸರಿಪಡಿಸಲು ಕೈಗೊಳ್ಳಲಾಗುವ ಕ್ರಮಗಳೇನು ?

## ಖಾಸಗಿ ಅನುದಾನಿತ ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನಿಧನ ಹಾಗೂ ನಿವೃತ್ತಿಯಿಂದ ಖಾಲಿ ಇರುವ ಒಂದು ಎಸ್.ಡಿ.ಸಿ ಮತ್ತು ಒಂದು ಅಟೆಂಡರ್ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು

**ಶ್ರೀ ಎಸ್.ವ್ಹಿ ಸಂಕನೂರ (ಪದವೀಧರರ ಕ್ಷೇತ್ರ) :–**

೧೭೪೯ (೧೬೧೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಖಾಸಗಿ ಅನುದಾನಿತ ಪ್ರೌಢ ಶಾಲಾ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರತಿ ಸಂಸ್ಥೆಗೆ ಒಂದು ಎಸ್.ಡಿ.ಸಿ ಮತ್ತು ಒಂದು ಅಟೆಂಡರ್/ಸಿಪಾಯಿ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡಲು ಈ ಹಿಂದೆ ನಿಯಮಾವಳಿಗಳನ್ನು ರೂಪಿಸಲಾಗಿತ್ತು. ಈ ನಿಯಮದಡಿ ಇಂದು ವಿವಿಧ ಸಂಸ್ಥೆಗಳಲ್ಲಿ ನಿಧನ ಹಾಗೂ ನಿವೃತ್ತಿಯಿಂದ ಖಾಲಿಯಾದ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡಲಾಗುತ್ತಿದೆಯೇ ;

(ಆ) ಒಂದು ವೇಳೆ ಪ್ರತಿ ಸಂಸ್ಥೆಗೆ ಒಂದು ಎಸ್.ಡಿ.ಸಿ. ಹಾಗೂ ಒಂದು ಅಟೆಂಡರ್ / ಸಿಪಾಯಿ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡುವುದನ್ನು ನಿಲ್ಲಿಸಲಾಗಿದೆಯೇ ; ಈ ಕುರಿತು ಇಲಾಖೆ ಯಾವಾಗ ಈ ಆದೇಶವನ್ನು ಹೊರಡಿಸಿದೆ. ಮತ್ತು ಯಾವ ಕಾರಣಕ್ಕಾಗಿ ಈ ರೀತಿಯ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಆದರ್ಶ ಗ್ರಾಮ ಯೋಜನೆ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೦ (೧೪೪೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮುಖ್ಯಮಂತ್ರಿ "ಆದರ್ಶಗ್ರಾಮ" ಯೋಜನೆ ಅನುಷ್ಠಾನಗೊಳಿಸಲು ಸರ್ಕಾರ ಯೋಚಿಸಿದೆಯೇ ; ಇವರ ಮೂಲ ಉದ್ದೇಶವೇನು ;

(ಆ) ರಾಜ್ಯದಲ್ಲಿ ಈ ಯೋಜನೆಗೆ ಎಷ್ಟು ಗ್ರಾಮಗಳನ್ನು ಗುರುತಿಸಲಾಗಿದೆ; ಅವು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಯೋಜನೆಯು ಪ್ರತಿ ಗ್ರಾಮಕ್ಕೆ ಲಭ್ಯವಾಗುತ್ತಿದೆಯೇ ; ಮತ್ತು ಯಾವ ಯಾವ ಯೋಜನೆಗೆ ಬಳಸಲಾಗುತ್ತಿದೆ ? (ವಿವರ ನೀಡುವುದು)

## ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿನ ವಿದ್ಯಾರ್ಥಿಗಳ ಕಡ್ಡಾಯ ಹಾಜರಾತಿ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೧ (೧೫೨೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಡ್ಡಾಯ ಹಾಜರಾತಿ ಬಗ್ಗ ಪದವಿ ಪೂರ್ವ ಶಿಕ್ಷಣ ಇಲಾಖೆಯ ಮಾನದಂಡವೇನು ;

(ಆ) ಈ ವರ್ಷ ಕನಿಷ್ಠ ಹಾಜರಾತಿಯ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ವಿದ್ಯಾರ್ಥಿಗಳ ಕಡ್ಡಾಯ ಹಾಜರಾತಿ ಬಗ್ಗೆ ಪದವಿ ಪೂರ್ವ ಶಿಕ್ಷಣ ಇಲಾಖೆ ಎಷ್ಟು ಪಾಲಕರಿಗೆ ಮಾಹಿತಿ ನೀಡಿದೆ ;

(ಈ) ವರ್ಷವಿಡೀ ತರಗತಿಗೆ ಗೈರು ಹಾಜರಾಗಿ ಕನಿಷ್ಠ ಹಾಜರಾತಿ ತಡೆಯಲು ಸರ್ಕಾರ ಕೈಗೊಂಡ ಮುನ್ನೆಚ್ಚರಿಕೆ ಕ್ರಮಗಳೇನು ?

## ಬೆಂಗಳೂರು ನಗರದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೨ (೧೫೩೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿರುವ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; (ವಾರ್ಡ್‌ಗಳವಾರು ವಿವರ ನೀಡುವುದು)

(ಆ) ಸ್ವಂತ ಕಟ್ಟಡವಿರುವ ಮತ್ತು ಸ್ವಂತ ಕಟ್ಟಡವಿಲ್ಲದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ;

(ಇ) ಅನೇಕ ವರ್ಷಗಳಿಂದ ದುರಸ್ಥಿಯಾಗದೆ ಸಂಪೂರ್ಣವಾಗಿ ಹಾಳಾಗಿರುವ ಸರ್ಕಾರಿ ಶಾಲೆಗಳ ಕಟ್ಟಡಗಳಾವುವು; ಸದರಿ ಕಟ್ಟಡಗಳನ್ನು ದುರಸ್ಥಿ ಮಾಡದಿರಲು ಕಾರಣಗಳೇನು ; ಮತ್ತು ಯಾವಾಗ ದುರಸ್ಥಿಗೊಳಿಸಲಾಗುವುದು ?

## ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ನಡೆದ ಅವ್ಯವಹಾರಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೩ (೧೫೩೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ೧೭ ವಿಶ್ವವಿದ್ಯಾನಿಲಯಗಳಲ್ಲಿ ಕೇಳಿ ಬಂದ ನೂರಾರು ಕೋಟಿ ರೂಪಾಯಿ ಅವ್ಯವಹಾರ ಆರೋಪ ನಿಜವೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರದಿಂದ ಕೈಗೊಂಡಿರುವ ಕ್ರಮವೇನು ;

(ಆ) ಕರ್ನಾಟಕ ಪಾರದರ್ಶಕತೆ ಅಧಿನಿಯಮದ ಮಾನದಂಡಗಳೇನು;

(ಇ) ಈ ಅವ್ಯವಹಾರವನ್ನು ಪತ್ತೆ ಹಚ್ಚಲು ತನಿಖಾ ಸಮಿತಿ ರಚಿಸಲಾಗಿದೆಯೇ ; ರಚಿಸಿದ್ದರೆ, ಈ ಸಮಿತಿಯಲ್ಲಿ ಯಾರ್‍ಯಾರು ಸದಸ್ಯರಿರುತ್ತಾರೆ ; (ವಿವರ ನೀಡುವುದು)

(ಈ) ಯಾವ ಯಾವ ವಿಶ್ವವಿದ್ಯಾನಿಯಲಗಳಲ್ಲಿ ಎಷ್ಟೆಷ್ಟು ಮೊತ್ತದ ಅವ್ಯವಹಾರ ನಡೆದಿರುವುದು ಕಂಡು ಬಂದಿದೆ ; (ವಿಶ್ವವಿದ್ಯಾನಿಲಯಗಳವಾರು ವಿವರ ನೀಡುವುದು)

(ಉ) ವಿಶ್ವವಿದ್ಯಾನಿಲಯಗಳಲ್ಲಿ ಇಂತಹ ಅವ್ಯವಹಾರಗಳನ್ನು ತಡೆದು ಪಾರದರ್ಶಕತೆಯಿಂದ ಆಡಳಿತ ನಡೆಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ದೈಹಿಕ ಶಿಕ್ಷಕರ ಖಾಲಿ ಹುದ್ದೆ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೪ (೧೪೪೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ; (ಪ್ರಾಥಮಿಕ ಶಾಲೆ, ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಶಾಲೆಗಳ ವಿವರ ನೀಡುವುದು)

(ಆ) ದೈಹಿಕ ಶಿಕ್ಷಕರ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಖಾಲಿ ಹುದ್ದೆಗಳನ್ನು ಅನೇಕ ವರ್ಷಗಳಿಂದ ತುಂಬದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಮಕ್ಕಳ ಶಾಲಾ ಚೀಲ ಕಾಯ್ದೆ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೧೭೫೫ (೧೪೩೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಕ್ಕಳ ಅತಿಯಾದ ಭಾರದ ಶಾಲಾ ಚೀಲಗಳನ್ನು ಹೊರುತ್ತಿರುವ ಬಗ್ಗೆ ಇತ್ತೀಚೆಗೆ ಭಾರತೀಯ ವಾಣಿಜ್ಯೋದ್ಯಮ ಮಹಾ ಸಂಘ (ಅಸೋಚಾಂ) ಆರೋಗ್ಯ ಸಮಿತಿ ಸಮೀಕ್ಷೆ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಆರೋಗ್ಯ ಸಮಿತಿಯ ಸಮೀಕ್ಷೆಯ ಮುಖ್ಯಾಂಶಗಳೇನು ;

(ಇ) ಶಾಲಾ ಮಕ್ಕಳ ಭಾರದ ಶಾಲಾ ಚೀಲಗಳನ್ನು ಹೊರುವ ಬಗ್ಗೆ ೨೦೦೬ರ ಮಕ್ಕಳ /ಶಾಲಾ ಚೀಲ ಕಾಯ್ದೆಯಲ್ಲಿರುವ

ಅಂಶಗಳೇನು; ಸದರಿ ಕಾಯ್ದೆಯನ್ನು ರಾಜ್ಯದಲ್ಲಿ ಕಟ್ಟುನಿಟ್ಟಾಗಿ ಆಚರಣೆಗೆ ತರಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು;

(ಈ) ಮಕ್ಕಳ ಭಾರದ ಶಾಲಾ ಚೀಲಗಳನ್ನು ಹೊರದಂತಾಗಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಅನುದಾನಿತ ಪದವಿ ಕಾಲೇಜುಗಳಲ್ಲಿನ ಹಾಲಿ ಹಾಗೂ ಖಾಲಿ ಹುದ್ದೆಗಳ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೧೭೫೬ (೧೪೨೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅನುದಾನಿತ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿರುವ ಅನುದಾನಿತ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ; ಅವು ಯಾವುವು ; (ವಿಳಾಸ ಸಹಿತ ವಿವರ ನೀಡುವುದು)

(ಆ) ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಅನುದಾನಿತ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಇಂದಿನವರೆಗಿನ ಪ್ರತ್ರಿಯೊಂದು ಕಾಲೇಜುವಾರು ವಿವರ ನೀಡುವುದು;

(ಇ) ಇವುಗಳಲ್ಲಿ ಪದವಿ ಪೂರ್ವ ಕಾಲೇಜುಗಳೊಂದಿಗೆ ಸಂಯುಕ್ತವಾಗಿದ್ದು ವಿಭಜನೆಗೊಂಡ ಕಾಲೇಜುಗಳ ಸಂಖ್ಯೆ ಎಷ್ಟು; ಅವು ಯಾವುವು ;

(ಈ) ಸದರಿ ಕಾಲೇಜುಗಳಲ್ಲಿ ಅನುದಾನಕ್ಕೆ ಒಳಪಟ್ಟ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು ? (ವಿವರ ನೀಡುವುದು)

## ಶಾಲಾ ಕಟ್ಟಡಗಳ ದುಸ್ಥಿತಿ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೧೭೫೭ (೧೪೩೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ ಶಾಲಾ ಕಟ್ಟಡಗಳ ಸ್ಥಿತಿ ಶೋಚನೀಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ದುರಸ್ಥಿಯಲ್ಲಿರುವ ಶಾಲಾ ಕಟ್ಟಡಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನಿಡುವುದು)

(ಆ) ಸರ್ಕಾರಿ ಶಾಲಾ ಕಟ್ಟಡಗಳು ಯಾವ್ಯಾವ ರೀತಿಯ ಸಮಸ್ಯೆಗಳನ್ನು ಎದುರಿಸುತ್ತಿವೆ ; ಅವುಗಳ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೆನು ;

(ಇ) ಈ ಸಮಸ್ಯೆಗಳಿಂದಾಗಿ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ನಿಜವೇ ?

## ಸೊರಬ ತಾಲ್ಲೂಕಿನ ಗ್ರಾಮದ ಡಾಂಬರೀಕರಣ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೧೭೫೮ (೧೪೩೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆ ಸೊರಬ ತಾಲ್ಲೂಕು ತುಡನೂರು ಗ್ರಾಮದಿಂದ ಬೆಟ್ಟದಕೂರ್ಲಿ ಗ್ರಾಮದ ಮಾರ್ಗವಾಗಿ ಗುಡ್ಡೆಕೊಪ್ಪ ಗ್ರಾಮದವರೆಗೆ ಡಾಂಬರೀಕರಣ ಆಗದೇ ಇರುವುದರಿಂದ ಅಲ್ಲಿನ ನಿವಾಸಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸದರಿ ರಸ್ತೆ ಡಾಂಬರೀಕರಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಇದಕ್ಕಾಗಿ ಮಂಜೂರಾಗಿರುವ ಮೊತ್ತ ಎಷ್ಟು ; ಕಾಮಗಾರಿ ಯಾವಾಗ ಆರಂಭಗೊಳ್ಳಲಿದೆ ; ಯಾವಾಗ ಪೂರ್ಣಗೊಳ್ಳಲಿದೆ? (ವಿವರ ನೀಡುವುದು)

## ಗಡಿ ಪ್ರದೇಶದ ತಾಲ್ಲೂಕುಗಳು ಮತ್ತು ಶಾಲಾ-ಕಾಲೇಜುಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :-**

೧೭೫ (೧೪೮೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಗಡಿ ಪ್ರದೇಶದ ತಾಲ್ಲೂಕುಗಳು ಯಾವುವು ;

(ಆ) ಯಾವ ಯಾವ ಗಡಿ ಪ್ರದೇಶದ ತಾಲ್ಲೂಕುಗಳಲ್ಲಿ ಎಷ್ಟೆಷ್ಟು ಸರ್ಕಾರಿ ಮತ್ತು ಖಾಸಗಿ ಕನ್ನಡ ಮಾಧ್ಯಮದ ಪ್ರಾಥಮಿಕ ಮಾಧ್ಯಮಿಕ, ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ ;

(ಇ) ಆ ಶಾಲೆ ಮತ್ತು ಕಾಲೇಜುಗಳಲ್ಲಿ ಎಷ್ಟೆಷ್ಟು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ ; (ಶಾಲಾವಾರು ಮತ್ತು ಕಾಲೇಜುವಾರು ಮಾಹಿತಿ ನೀಡುವುದು)

(ಈ) ವಿದ್ಯಾರ್ಥಿಗಳ ಅನುಪಾತಕ್ಕೆ ಅನುಗುಣವಾಗಿ ಎಷ್ಟು ಬೋಧಕ/ ಬೋಧಕೇತರ ಸಿಬ್ಬಂದಿ ಇರಬೇಕು ; ಅದರಂತೆ ಗಡಿ ಪ್ರದೇಶದ

ಶಾಲಾ ಕಾಲೇಜುಗಳಲ್ಲಿ ಬೋಧಕ/ಬೋಧಕೇತರ ಸಿಬ್ಬಂದಿ ಇದ್ದಾರೆಯೇ ; ಇಲ್ಲದಿದ್ದರೆ, ಸರ್ಕಾರ ಈ ನಿಟ್ಟಿನಲ್ಲಿ ಯಾವ ಕ್ರಮ ಕೈಗೊಂಡಿದೆ ;

(ಉ) ಈ ಶಾಲೆ–ಕಾಲೇಜುಗಳಿಗೆ ಮೂಲಭೂತ ಸೌಲಭ್ಯ ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಅಕ್ರಮ ಮರಳು ಗಣಿಗಾರಿಕೆಯನ್ನು ತಡೆಗಟ್ಟುವ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬೦ (೧೪೧೮) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಕ್ರಮ ಮರಳು ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಅಕ್ರಮ ಮರಳು ಗಣಿಗಾರಿಕೆ ತಡೆಗಟ್ಟಲು ತೆಗೆದುಕೊಂಡ ಕ್ರಮಗಳೇನು ;

(ಇ) ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಅಕ್ರಮ ಮರಳು ಗಣಿಗಾರಿಕೆ ಪ್ರಕರಣಗಳು ದಾಖಲಾಗಿವೆ;

(ಈ) ಹಾಗಿದ್ದಲ್ಲಿ ಅಕ್ರಮ ಮರಳು ಫಿಲ್ಟರ್ ತಯಾರಿಕೆಯಲ್ಲಿ ತೊಡಗಿದ್ದವರ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ ; ಇದರಿಂದಾಗಿ ಸರ್ಕಾರಕ್ಕೆ ಹೊರೆಯಾಗಿರುವ ಆರ್ಥಿಕ ನಷ್ಟ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ಉನ್ನತ ಶಿಕ್ಷಣದ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಣೆ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬೧ (೧೪೨೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉನ್ನತ ಶಿಕ್ಷಣ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡಗಳ ವಿದ್ಯಾರ್ಥಿಗಳಿಗೆ ಬಜೆಟ್‌ನ ಘೋಷಣೆಯಂತೆ ಸಮಾಜ ಕಲ್ಯಾಣ ವತಿಯಿಂದ ಉಚಿತ ಲ್ಯಾಪ್ ಟಾಪ್‌ಗಳನ್ನು ನೀಡಲಾಗುತ್ತಿದೆಯೇ ;

(ಆ) ಹಾಗಿದ್ದಲ್ಲಿ, ಎಷ್ಟು ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್ ಟಾಪ್ ಸೌಲಭ್ಯ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ತಾಂತ್ರಿಕ ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಠ ಜಾತಿ/ ಪರಿಶಿಷ್ಠ ಪಂಗಡಗಳ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳು ಮತ್ತು ಲ್ಯಾಪ್ ಟಾಪ್ ವಿತರಿಸುವ ಕಾರ್ಯಕ್ರಮ ಜಾರಿಯಲ್ಲಿದೆಯೇ;

(ಈ) ಪರಿಶಿಷ್ಠ ಜಾತಿ/ ಪರಿಶಿಷ್ಠ ಪಂಗಡಗಳ ತಾಂತ್ರಿಕ ಶೈಕ್ಷಣಿಕ ಸಂಸ್ಥೆಗಳಿಗೆ ಕಟ್ಟಡ ನಿರ್ಮಾಣಕ್ಕಾಗಿ ಅನುದಾನ ನೀಡಲಾಗುತ್ತಿದೆಯೇ ;

(ಉ) ಹಾಗಿದ್ದಲ್ಲಿ, ಈ ಮೇಲಿನ ಎರಡು ಕಾರ್ಯಕ್ರಮಗಳು ಎಲ್ಲೆಲ್ಲಿ ಜಾರಿಗೊಳಿಸಲಾಗಿದೆ ; ಎಷ್ಟು ಹಣ ಖರ್ಚು ಮಾಡಲಾಗಿದೆ ; ಈ ಕಾರ್ಯಕ್ರಮವನ್ನು ಮುಂದಿನ ಸಾಲಿಗೂ ಮುಂದುವರೆಸಲಾಗುವುದೇ ?

## R.T.E. ಅಡಿಯಲ್ಲಿ ಅರ್ಜಿ ಸ್ವೀಕರಿಸಲು ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೬೨ (೧೪೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿಕ್ಷಣ ಹಕ್ಕು ಕಾಯ್ದೆ ಅಡಿಯಲ್ಲಿ ೨೦೧೭–೧೮ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಲು ವಿಳಂಬವಾಗಿರುವುದು ; ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಆರ್.ಟಿ.ಇ. ಅಡಿಯಲ್ಲಿ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಸಲ್ಲಿಸಲು ಪೋಷಕರಿಗೆ ಸರಿಯಾದ ಮಾರ್ಗದರ್ಶನ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಹಾಗಿದ್ದಲ್ಲಿ, ಈ ತೊಂದರೆಯನ್ನು ನಿವಾರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕಲ್ಲು ಗಣಿಗಾರಿಕೆಗಳನ್ನು ನಡೆಸಲು ಅನುಮತಿ ನೀಡುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೬೩ (೧೪೧೭) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಕಲ್ಲು ಗಣಿಗಾರಿಕೆ ನಡೆಸಲು ಗುತ್ತಿಗೆ ಪರವಾನಗಿ ಕೋರಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಮಂಜೂರಾದ ಅರ್ಜಿಗಳೆಷ್ಟು; ಇವುಗಳಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳಿಗೆ ಸೇರಿದ ಅರ್ಜಿಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಗಣಿ ಗುತ್ತಿಗೆಗಾಗಿ ಇಲಾಖೆಯು ಅರ್ಜಿಗಳನ್ನು ಸ್ವೀಕರಿಸಿದ್ದು, ಠೇವಣಿ ಮುಂಗಡ ಹಣವನ್ನು ಪಡೆದಿದ್ದು, ಇಲಾಖಾ ಹಂತದಲ್ಲಿ ಮಂಜೂರಾಗದೆ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಸಂಖ್ಯೆ ಎಷ್ಟು;

(ಈ) ಬಂದ ಅರ್ಜಿಗಳನ್ನು ಸಕಾಲದಲ್ಲಿ ಪರಿಶೀಲಿಸದೆ ಗುತ್ತಿಗೆ ನೀಡದೆ ಇರುವ ಹಂತದಲ್ಲಿ ಹರಾಜು ನೀತಿಯನ್ನು ಜಾರಿಗೆ ತಂದಿರುವುದು ಮತ್ತು ಆ ಅರ್ಜಿಗಳನ್ನು ರದ್ದುಪಡಿಸಿರುವ ಸರ್ಕಾರದ ಕ್ರಮ ಸರಿಯೇ ;

(ಉ) ಮಂಜೂರಾಗದ ಪರಿಶೀಲನೆ ಹಂತದಲ್ಲಿರುವ ಅರ್ಜಿದಾರರಿಗೆ ಒಂದು ಬಾರಿ ಅವಕಾಶ ನೀಡಿ ಹರಾಜು ನೀತಿಯಿಂದ ವಿನಾಯಿತಿ ಕೊಡಲು ಸರ್ಕಾರ ಕ್ರಮ ಜರುಗಿಸಲಾಗುವುದೇ ?

## ವಸತಿ ಯೋಜನೆ ಅಡಿಯಲ್ಲಿ ಮನೆ ನಿರ್ಮಿಸುವ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೬೪ (೧೪೧೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಸತಿ ಇಲಾಖೆಯು ಕಳೆದ ೨೦೧೫–೧೬ನೇ ಸಾಲುಗಳಲ್ಲಿ ಆಶ್ರಯ, ಅಂಬೇಡ್ಕರ್, ಬಸವ ಇಂದಿರಾ ಅವಾಜ್, ವಾಜಪೇಯಿ ವಸತಿ ಯೋಜನೆ ಅಡಿಯಲ್ಲಿ ಮನೆ ಕಟ್ಟಿಕೊಳ್ಳಲು ನಿಗಧಿಪಡಿಸಿದ ಗುರಿ ಎಷ್ಟು; ಸಾಧನೆ ಎಷ್ಟು; ಖರ್ಚು ಮಾಡಿದ ಹಣ ಎಷ್ಟು;

(ಆ) ವಿವಿಧ ಯೋಜನೆಗಳಲ್ಲಿ ಫಲಾನುಭವಿಗಳಿಗೆ ನಿಗಧಿಪಡಿಸಿದ ಹಣದ ಮೊತ್ತ ಎಷ್ಟು;

(ಇ) ಇವುಗಳಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳಿಗೆ ನೀಡಿದ ಮನೆಗಳ ಸಂಖ್ಯೆ ಎಷ್ಟು ?

## ಬೀದರ್ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೭೬೫ (೧೫೨೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಘೋಷಣೆ ಮಾಡಿದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿಗೆ ಸ್ಥಳ ಆಯ್ಕೆಗೊಂಡಿದೆಯೇ ;

(ಆ) ೨೦೧೭–೨೦೧೮ನೇ ಸಾಲಿನಲ್ಲಿ ಕಾಲೇಜು ಆರಂಭವಾಗಲಿದೆಯೇ ;

(ಇ) ಕಾಲೇಜು ಆರಂಭಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ಸರ್ಕಾರಿ ಶಾಲೆಗಳ ದಾಖಲಾತಿಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೭೬೬ (೧೫೨೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಸರ್ಕಾರಿ ಶಾಲೆಗಳಲ್ಲಿ ೧೦ ವಿದ್ಯಾರ್ಥಿಗಳ ಕಡಿಮೆ ದಾಖಲಾತಿ ಇರುವ ಶಾಲೆಗಳಲ್ಲಿ ೨೦೧೬–೨೦೧೭ನೇ ಸಾಲಿನಲ್ಲಿ ದಾಖಲಾತಿ ಹೆಚ್ಚಿಸಲು ಕೈಗೊಂಡ ಕ್ರಮಗಳೇನು ;

(ಆ) ಬೀದರ್ ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಹುದ್ದೆಗಳನ್ನು ನೇಮಕ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ೨೦೧೬-೨೦೧೭ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ ತಾಲ್ಲೂಕು ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಕಾಮಗಾರಿಗಳು ಮಂಜೂರು ಆಗಿದ್ದು ಯಾವಾಗ ; ಅಂದಾಜು ವೆಚ್ಚ ಹಾಗೂ ಇಲ್ಲಿಯವರೆಗೆ ಎಷ್ಟು ಕಾಮಗಾರಿ ಪೂರ್ಣಗೊಂಡಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ತಾಲ್ಲೂಕು ಯೋಜನಾಧಿಕಾರಿ ಹುದ್ದೆಯನ್ನು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ವೃಂದದಿಂದ ತುಂಬುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೬೭ (೧೪೫೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಯೋಜನಾಧಿಕಾರಿ ಹುದ್ದೆಯಲ್ಲಿ ಯೋಜನಾಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆಯೇ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ಹಾಲಿ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪ್ರತಿ ತಾಲ್ಲೂಕಿನಲ್ಲಿ ಯೋಜನಾಧಿಕಾರಿ ಹುದ್ದೆ ಇಲ್ಲದಿದ್ದಲ್ಲಿ, ಅದನ್ನು ಸೃಜಿಸಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ವೃಂದದಿಂದ ಪದೋನ್ನತಿ ನೀಡಿ ಹಾಲಿ ಖಾಲಿ ಇರುವ ಯೋಜನಾಧಿಕಾರಿ ಹುದ್ದೆಯನ್ನು ತುಂಬಲಾಗುವುದೇ ;

(ಇ) ಹಾಲಿ ಇರುವ ಸೇವೆ ಮತ್ತು ವೃಂದಗಳ ನಿಯಮಗಳು ಈ ರೀತಿ ಪಂಚಾಯತ್ ಅಭಿವೃದ್ಧಿ ವೃಂದದಿಂದ ತುಂಬಲು ಅವಕಾಶ ನೀಡದಿದ್ದ ಪಕ್ಷದಲ್ಲಿ ಅದಕ್ಕೆ ಬದಲಾವಣೆ ತಂದು ಸದರಿ ಹುದ್ದೆಗಳನ್ನು ತುಂಬಲಾಗುವುದೇ ?

## ರಾಜ್ಯದಲ್ಲಿ ಮಹಿಳಾ ಉದ್ಯಮಿಗಳಿಗೆ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ವಿಶೇಷ ಸವಲತ್ತುಗಳನ್ನು ನೀಡುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೬೮ (೧೪೫೪) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಹಿಳಾ ಉದ್ಯಮಿಗಳು ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲು ಉತ್ತೇಜನ ನೀಡುವ ಸಲುವಾಗಿ ಇಲಾಖೆ ರೂಪಿಸಿರುವ ಕಾರ್ಯಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಸಣ್ಣ ಕೈಗಾರಿಕಾ ವಲಯದಲ್ಲಿ ಮಹಿಳಾ ಉದ್ಯಮಿಗಳು ಹೆಚ್ಚು ತೊಡಗಿಸಿಕೊಳ್ಳಲು ಸರ್ಕಾರ ನೀಡಿರುವ ವಿಶೇಷ ರಿಯಾಯಿತಿ / ಸಬ್ಸಿಡಿ ಮತ್ತು ಇತರೆ ಸವಲತ್ತುಗಳೇನು ; (ವಿವರ ನೀಡುವುದು)

(ಇ) ಸದರಿ ಸವಲತ್ತುಗಳನ್ನು ಬಳಸಿಕೊಂಡು ೨೦೧೨–೧೩ ರಿಂದ ಇಲ್ಲಿಯವರೆಗೆ ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಿರುವ ಮಹಿಳಾ ಉದ್ಯಮಿಗಳ ಸಂಖ್ಯೆ ಎಷ್ಟು ? (ವಿವರಗಳನ್ನು ಜಿಲ್ಲಾವಾರು, ವರ್ಷವಾರು ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಖಾಲಿ ಇರುವ ಪದವಿ ಪೂರ್ವ ಉಪನ್ಯಾಸಕರ ಹುದ್ದೆ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೬೯ (೧೫೯೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಎಷ್ಟು; (ಹೆಸರಿನೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಕಾಲೇಜುಗಳಿಗೆ ಮಂಜೂರಾದ ಉಪನ್ಯಾಸಕರ ಸಂಖ್ಯೆ ಎಷ್ಟು; ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿಷಯವಾರು, ಕಾಲೇಜುವಾರು ಸಂಪೂರ್ಣ ವಿವರ ನೀಡುವುದು)

(ಇ) ಖಾಯಂ ಉಪನ್ಯಾಸಕರ ಕೊರತೆಯಿರುವುದರಿಂದ ವಿದ್ಯಾರ್ಥಿಗಳ ಬೌದ್ಧಿಕ ಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಜಿಲ್ಲೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಯಾವಾಗ ತುಂಬಲಾಗುವುದು ?

## ಕೊಡಗು ಜಿಲ್ಲೆಯಲ್ಲಿ ಪದವಿ / ಸ್ನಾತಕೋತ್ತರ ಅಧ್ಯಯನ ಕೇಂದ್ರಗಳ ಖಾಲಿ ಹುದ್ದೆ ತುಂಬುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೭೦ (೧೫೯೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪದವಿ ಕಾಲೇಜುಗಳು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರಗಳು ಯಾವುವು ; (ಹೆಸರು ಹಾಗೂ ವಿಳಾಸದೊಂದಿಗೆ ಪಟ್ಟಿ ನೀಡುವುದು)

(ಆ) ಸದರಿ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರಗಳಿಗೆ ಮಂಜೂರಾದ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; (ಕಾಲೇಜುವಾರು ವಿವರ ನೀಡುವುದು) ಹಾಗೂ ಬೋಧಕ ಹುದ್ದೆಗಳಲ್ಲಿ ವಿಷಯವಾರು ಮಂಜೂರಾತಿ ಹುದ್ದೆಗಳ ವಿವರ ನೀಡುವುದು)

(ಇ) ಸದರಿ ಮಂಜೂರಾದ ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ತುಂಬಲಾಗುವುದು ? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ವಸತಿ / ನಿವೇಶನ ರಹಿತರಿಗೆ ವಸತಿ ನಿವೇಶನ ಕಲ್ಪಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೭೧ (೧೫೫೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಇರುವ ವಸತಿರಹಿತರ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಪಂಚಾಯತ್‌ವಾರು, ಗ್ರಾಮವಾರು ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಇರುವ ವಸತಿರಹಿತರಿಗೆ ವಸತಿ ಕಲ್ಪಿಸಿ, ಜಿಲ್ಲೆಯನ್ನು ವಸತಿರಹಿತ ಮುಕ್ತ ಜಿಲ್ಲೆಯನ್ನಾಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಜಿಲ್ಲೆಯಲ್ಲಿ ಗುರುತಿಸಿರುವ ನಿವೇಶನರಹಿತರ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಪಂಚಾಯತಿವಾರು, ಗ್ರಾಮವಾರು ವಿವರ ನೀಡುವುದು) ಸದರಿ ನಿವೇಶನರಹಿತರಿಗೆ, ನಿವೇಶನ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕುಡಿಯುವ ನೀರಿಗೆ ೨೦೧೫-೧೬, ೨೦೧೬-೧೭ರ ಅನುದಾನ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೭೭೨ (೧೫೧೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ವತಿಯಿಂದ ೨೦೧೫-೧೬ ಮತ್ತು ೨೦೧೬-೧೭ನೇ ಸಾಲಿನಲ್ಲಿ ಸರ್ಕಾರದಿಂದ ಈವರೆಗೂ ಬಿಡುಗಡೆಯಾಗಿರುವ ಒಟ್ಟು ಅನುದಾನವೆಷ್ಟು; ಸದರಿ ಅನುದಾನದಲ್ಲಿ ಖರ್ಚಾಗಿರುವ ಮತ್ತು ಉಳಿದಿರುವ ಅನುದಾನವೆಷ್ಟು; (ಸಂಪೂರ್ಣ ಜಿಲ್ಲಾವಾರು ವಿವರ ನೀಡುವುದು)

(ಆ) ೨೦೧೫-೧೬ ಮತ್ತು ೨೦೧೬-೧೭ನೇ ಸಾಲಿನಲ್ಲಿ ಇಲಾಖೆಯಿಂದ ಹೊಸದಾಗಿ ಕೊರೆದಿರುವ ಕೊಳವೆ ಬಾವಿಗಳೆಷ್ಟು; (ಗ್ರಾಮವಾರು ವಿವರ ನೀಡುವುದು)

(ಇ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಂ.ಪಿ/ಎಂ.ಎಲ್.ಎ/ ಎಂ.ಎಲ್.ಸಿ. ಲ್ಯಾಡ್‌ನ ಅನುದಾನದಲ್ಲಿ ಹೊಸದಾಗಿ ಕೊರೆದಿರುವ ಬಾವಿಗಳ ಸಂಖ್ಯೆ ಎಷ್ಟು; ಪ್ರಗತಿಯ ಹಂತದಲ್ಲಿರುವ ಕಾಮಗಾರಿಗಳು ಯಾವುವು; ಕಾಮಗಾರಿಗಳು ವಿಳಂಬವಾಗಲು ಕಾರಣವೇನು ? (ಸಂಪೂರ್ಣ ವಿವರ ನೀಡುವುದು)

## ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಇಲಾಖೆಯಿಂದ ಸಬ್ಸಿಡಿ ಸಾಲ ಮಂಜೂರು ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೭೩ (೧೪೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಇಲಾಖಾ ವತಿಯಿಂದ ಯಾವ ಯಾವ ಉದ್ದೇಶಕ್ಕೆ ಸಬ್ಸಿಡಿ ಸಾಲ ಮಂಜೂರು ಮಾಡಲಾಗಿದೆ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ; ಖರ್ಚು ಮಾಡಲಾದ ಹಣವೆಷ್ಟು ; ಖರ್ಚಾಗದೆ ಉಳಿದ ಹಣವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಮನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಈ ಅನುದಾನದಲ್ಲಿ ಕೈಗೊಳ್ಳಲಾದ ಕಾಮಗಾರಿಗಳಾವುವು ಹಾಗೂ ವೆಚ್ಚ ಮಾಡಲಾಗಿರುವ ಮೊತ್ತವೆಷ್ಟು ? (ತಾಲ್ಲೂಕುವಾರು ಪ್ರತ್ಯೇಕವಾದ ಮಾಹಿತಿ ನೀಡುವುದು)

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಬಿಡುಗಡೆಯಾದ ಅನುದಾನ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೭೪ (೧೪೭೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮುಖಾಂತರ ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಸರ್ಕಾರ ಬಿಡುಗಡೆ ಮಾಡಿದ್ದ ಅನುದಾನದಲ್ಲಿ ಇದುವರೆವಿಗೂ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ; (ಕಾಮಗಾರಿಗಳವಾರು ವಿವರ ಒದಗಿಸುವುದು)

(ಈ) ಈ ಯೋಜನೆಯ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕೂಡಲೇ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ಮಾಣದ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೭೫ (೧೪೬೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆಯಲ್ಲಿ ಕಳೆದ ೨ ವರ್ಷಗಳಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲು ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಕೈಗೊಂಡಿರುವ ಕಾಮಗಾರಿಗಳಾವುವು ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಈ ಯೋಜನೆಯಡಿ ಬಿಡುಗಡೆಯಾದ ಅನುದಾನದಲ್ಲಿ ಇದುವರೆವಿಗೂ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಿಸಲಾಗಿದೆ ; ಅವುಗಳಿಗೆ ಖರ್ಚು ಮಾಡಲಾದ ಹಣವೆಷ್ಟು ; (ಈ ಕಾಮಗಾರಿಗಳ ಪ್ರಸ್ತುತ ಪ್ರಗತಿಯ ವಿವರಗಳನ್ನು ನೀಡುವುದು)

(ಇ) ಈ ಯೋಜನೆಯಡಿ ಪ್ರತಿ ಗ್ರಾಮಗಳಿಗೆ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲು ಅನುಸರಿಸಲಾಗುವ ಮಾನದಂಡಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಅಂತರ್ಜಲ ಕುಸಿತದಿಂದಾಗಿ ಗ್ರಾಮೀಣ ಪ್ರದೇಶದ ಜನರು ಪ್ಲೋರೈಡ್‌ಯುಕ್ತ ನೀರನ್ನು ಕುಡಿದು ಮಾರಣಾಂತಿಕ ಖಾಯಿಲೆಗಳಿಗೆ ಒಳಗಾಗುತ್ತಿದ್ದು ಪ್ರತಿ ಗ್ರಾಮಕ್ಕೆ ಒಂದು ಶುದ್ಧ ಘಟಕ ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಉ) ಹಾಗಿದ್ದಲ್ಲಿ, ಈ ಯೋಜನೆಯನ್ನು ಯಾವಾಗ ಜಾರಿಗೆ ತರಲಾಗುವುದು ? (ಮಾಹಿತಿ ನೀಡುವುದು)

## ಬಿ.ಎಂ.ಟಿ.ಸಿ. ಬಸ್ಸುಗಳ ಸುಸ್ಥಿತಿಯ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೭೬ (೧೪೬೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ಸುಗಳನ್ನು ಸುಸ್ಥಿತಿಯಲ್ಲಿಡಲು ನೇಮಕಗೊಂಡಿರುವ ಅಧಿಕಾರಿ / ನೌಕರರ ಸಂಖ್ಯೆ ಎಷ್ಟು ; (ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್‌ಗಳನ್ನು ಒಳಭಾಗ ಮತ್ತು ಹೊರಭಾಗದಲ್ಲಿ ಶುಚಿತ್ವಗೊಳ್ಳದೆ ; (ತೊಳೆಯದೆ) ಪ್ರತಿನಿತ್ಯ ಸಂಚರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಬಸ್ಸುಗಳನ್ನು ಶುಚಿಗೊಳಿಸುವಂತೆ ಕೋರಿ ಪ್ರಯಾಣಿಕರಿಂದ ಬಂದಿರುವ ದೂರುಗಳೆಷ್ಟು; (ವಿವರ ನೀಡುವುದು)

(ಈ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ಸುಗಳನ್ನು ಶುಚಿಗೊಳಿಸಿ ಸುಸ್ಥಿತಿಯಲ್ಲಿಡಲು ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ವಸತಿ ಯೋಜನೆಗಳಡಿ ಮಂಜೂರಾದ ಮನೆಗಳ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೭೭ (೧೪೬೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿವಿಧ ಯೋಜನೆಗಳಡಿಯಲ್ಲಿ ಮಂಜೂರು ಮಾಡುತ್ತಿರುವ ಮನೆಗಳ ಸಂಖ್ಯೆಯೆಷ್ಟು ; (ಜಿಲ್ಲಾವಾರು, ಯೋಜನೆಗಳವಾರು ವಿವರಗಳನ್ನು ನೀಡುವುದು)

(ಆ) ರಾಮನಗರ ಜಿಲ್ಲೆಗೆ ಮನೆಗಳ ಹಂಚಿಕೆಯಲ್ಲಿ ತಾರತಮ್ಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಹೆಚ್ಚಿಸಲಾಗುವುದು ; (ವಿವರ ನೀಡುವುದು)

(ಈ) ಪ್ರಸ್ತುತ ನೀಡುತ್ತಿರುವ ಮನೆಗಳ ಪ್ರಮಾಣವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿಯೇ ಗರಿಷ್ಠ ಪ್ರಮಾಣದ ಮನೆಗಳನ್ನು ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಊ) ಹಾಗಿದ್ದಲ್ಲಿ, ರಾಮನಗರ ಜಿಲ್ಲೆಗೆ ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗುವುದು ? (ತಾಲ್ಲೂಕುವಾರು ವಿವರ ನೀಡುವುದು)

## ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕಾಮಗಾರಿಗಳನ್ನು ಕೈಗೊಂಡಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೭೮ (೧೪೨೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ರಾಜ್ಯಾದ್ಯಂತ ಎಷ್ಟು ಹಾಗೂ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಹೆಚ್.ಡಿ. ಕೋಟೆ ತಾಲ್ಲೂಕು, ಸರಗೂರು ಹೋಬಳಿ, ಮುಳ್ಳೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಯಾವ ಯಾವ ಸ್ಥಳಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ;

(ಇ) ಮುಳ್ಳೂರು ಗ್ರಾಮ ಪಂಚಾಯಿತಿ ಕಾಮಗಾರಿಯ ಗುತ್ತಿಗೆಯನ್ನು ಯಾರು ಯಾರು ತೆಗೆದುಕೊಂಡಿದ್ದರು ; ಈ ಯೋಜನೆಯಡಿ ಎಷ್ಟು ಜನ ನಿರುದ್ಯೋಗಿಗಳಿಗೆ ಎಷ್ಟು ದಿನಗಳ ಕೆಲಸ ನೀಡಲಾಗಿದೆ ; ಹೆಸರು ಸಹಿತವಾಗಿ ಈ ಯೋಜನೆಯಡಿ ಎಷ್ಟು ಕೂಲಿಯನ್ನು ನೀಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಕೂಲಿಯನ್ನು ಬ್ಯಾಂಕು ಖಾತೆಯ ಮೂಲಕ ಪಾವತಿಸಲಾಗಿದೆಯೇ ; ಅಥವಾ ಇತರೆ ಮೂಲಗಳಿಂದ ಪಾವತಿಸಲಾಗಿದೆಯೇ ?

## ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಹೌಸಿಂಗ್ ಬೋರ್ಡ್‌ನಿಂದ ಮನೆಗಳ ನಿರ್ಮಾಣ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೭೭೯ (೧೪೯೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಕರ್ನಾಟಕ ಗೃಹ ಮಂಡಳಿಯಿಂದ ಸಾರ್ವಜನಿಕರಿಗಾಗಿ ಹೆಚ್‌ಐಜಿ/ಎಮ್‌ಐಜಿ/ ಎಲ್‌ಐಜಿ ಮನೆಗಳನ್ನು ಮತ್ತು ಬಹು ಅಂತಸ್ತಿನ ಫ್ಲಾಟ್‌ಗಳನ್ನು ನಿರ್ಮಿಸಿಕೊಡುವ ಬಗ್ಗೆ ಸಮೀಕ್ಷೆಯನ್ನು ನಡೆಸಿ ಯೋಜನೆಯನ್ನು ರೂಪಿಸಲಾಗಿದೆಯೇ ; (ವಿವರ ಒದಗಿಸುವುದು)

(ಆ) ಮೈಸೂರು ನಗರ, ಮೈಸೂರು ಜಿಲ್ಲೆ, ಚಾಮರಾಜನಗರದ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಹೌಸಿಂಗ್ ಬೋರ್ಡ್ ವತಿಯಿಂದ ಎಲ್ಲೆಲ್ಲಿ ಎಷ್ಟೆಷ್ಟು ಮನೆಗಳನ್ನು/ಫ್ಲಾಟ್‌ಗಳನ್ನು ನಿರ್ಮಿಸಲಾಗುತ್ತಿದೆ ;

ಹಾಗೂ ಮನೆ ನಿರ್ಮಾಣ ಯೋಜನೆಗೆ ಎಲ್ಲೆಲ್ಲಿ ಎಷ್ಟು ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ ; (ವಿವರ ಒದಗಿಸುವುದು)

(ಇ) ಈ ಬಗ್ಗೆ ಸಾರ್ವಜನಿಕರಿಂದ ಅರ್ಜಿಗಳನ್ನು / ಸಮೀಕ್ಷಾ ಪೂರ್ವ ಅರ್ಜಿಗಳನ್ನು ಆಹ್ವಾನಿಸಲು ಕ್ರಮ ತೆಗೆದುಕೊಳ್ಳಲಾಗಿದೆಯೇ ?

## ಹಾಸನದಿಂದ ಮೇಲುಕೋಟೆಗೆ ಬಸ್ ಸೌಲಭ್ಯ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೭೮೦ (೧೪೯೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನದಿಂದ ಚನ್ನರಾಯಪಟ್ಟಣ–ಶ್ರವಣಬೆಳಗೊಳ–ಸಂತೇಬಾಚಹಳ್ಳಿ–ತಿರುಗನಹಳ್ಳಿ ಕ್ರಾಸ್ ಮೂಲಕ ಮೇಲುಕೋಟೆಗೆ ನೇರ ಬಸ್ ಸೌಲಭ್ಯ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ; ಬೇಲೂರು ಹಳೇಬಿಡು ಶ್ರವಣಬೆಳಗೊಳ ಮೇಲುಕೋಟೆಯನ್ನು ಸಂದರ್ಶಿಸಲು ಬಯಸುವ ಭಕ್ತಾದಿಗಳೂ ಮತ್ತು ಪ್ರವಾಸಿಗಳಿಗೆ ಹೆಚ್ಚಿನ ಅನುಕೂಲ ಕಲ್ಪಿಸುವ ನೇರವಾದ ಮತ್ತು ಸಮೀಪದ ಈ ಮಾರ್ಗದಲ್ಲಿ ಬಸ್ ಸೌಲಭ್ಯ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಮೈಸೂರಿನಿಂದ ಹೋಬಳಿ ಕೇಂದ್ರವಾದ ಕೃಷ್ಣರಾಜಪೇಟೆ ತಾಲ್ಲೂಕಿನ ಸಂತೇಬಾಚಹಳ್ಳಿಗೆ ನೇರ ಬಸ್ ಸೌಲಭ್ಯ ಇಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗಿದ್ದು, ಮೈಸೂರಿನಿಂದ ಶ್ರೀರಂಗಪಟ್ಟಣ, ಪಾಂಡವಪುರ ರೈಲು ನಿಲ್ದಾಣ, ಚಿನಕುರಳಿ, ತೆಂಡೆಕೆರೆ, ಕೃಷ್ಣರಾಜಪೇಟೆ, ಸಂತೇಬಾಚಹಳ್ಳಿ ಮೂಲಕ ಹಿರಿಸಾವೆಗೆ ನೇರ ಬಸ್ ಸೌಲಭ್ಯ ಕಲ್ಪಿಸುವುದರಿಂದ ಎರಡು ರಾಷ್ಟ್ರೀಯ

ಹೆದ್ದಾರಿಗಳ ನಡುವೆ ಸಂಪರ್ಕ ಮತ್ತು ಮಂಡ್ಯ, ಹಾಸನ ಜಿಲ್ಲೆಗಳ ನಡುವೆ ನೇರ ಬಸ್ ಸಂಪರ್ಕ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ :

(ಇ) ಮೈಸೂರಿನಿಂದ ಸಂತೇಬಾಚಹಳ್ಳಿಗೆ ಮತ್ತು ಸಂತೇಬಾಚಹಳ್ಳಿಯಿಂದ ಮೈಸೂರಿಗೆ ಬೆಳಿಗ್ಗೆ ಮತ್ತು ಸಾಯಂಕಾಲದ ವೇಳೆ ನೇರ ಬಸ್ ಸೌಲಭ್ಯ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಬೆಂಗಳೂರು ವಿಭಜಿತ ವಿಶ್ವವಿದ್ಯಾಲಯ ಆರಂಭ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೭೮೧ (೧೪೯೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಬೆಂಗಳೂರು ಹಾಗೂ ಕೋಲಾರ ವಿಶ್ವವಿದ್ಯಾಲಯಗಳು ಕಾರ್ಯ ನಿರ್ವಹಣೆ ಮಾಡುತ್ತಿದೆಯೇ ; ಹಾಗಿಲ್ಲದಿದ್ದಲ್ಲಿ, ಯಾವ ಹಂತದಲ್ಲಿದೆ ; (ಮಾಹಿತಿ ಒದಗಿಸುವುದು)

(ಆ) ಇದಕ್ಕೆ ಕುಲಪತಿಗಳು ಹಾಗೂ ಸಿಂಡಿಕೇಟ್ ಸದಸ್ಯರ ನೇಮಕಾತಿ ವಿಚಾರ ಯಾವ ಹಂತದಲ್ಲಿದೆ ? (ಮಾಹಿತಿ ಒದಗಿಸುವುದು)

## ವಿಮಾನ ನಿಲ್ದಾಣಕ್ಕೆ ಮಂಗಳೂರಿನಲ್ಲಿ ಭೂಮಿ ನೀಡದಿರುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೭೮೨ (೧೫೩೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ವಿಮಾನ ನಿಲ್ದಾಣದ ವಿಸ್ತರಣೆಗೆ ಭೂಮಿ ಒದಗಿಸದೇ ವಿಸ್ತರಣೆಗೆ ಹಿನ್ನಡೆಯಾಗಿರುವುದಕ್ಕೆ ಇಲಾಖೆ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಆ) ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಮಾನ್ಯತೆಯನ್ನು ಉಳಿಸಿಕೊಳ್ಳಲು ರನ್‌ವೇ ವಿಸ್ತರಣೆ ಅಗತ್ಯ ಇರುವುದು ಇಲಾಖೆಯ ಗಮನದಲ್ಲಿದೆಯೇ ; ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ;

(ಇ) ಹವಾಮಾನ ವೈಪರುತ್ಯ ಉಂಟಾಗಿ ವಿಮಾನವನ್ನು ಇಳಿಸುವ ಮಂಗಳೂರು ವಿಮಾನ ನಿಲ್ದಾಣಕ್ಕೆ ಬೇಕಾದ ಸೌಲಭ್ಯಗಳಿಲ್ಲದಿರುವುದು ನಿಜವೇ ; (ವಿವರ ಒದಗಿಸುವುದು)

(ಈ) ಮಂಗಳೂರು ವಿಮಾನ ನಿಲ್ದಾಣದಿಂದ ಪ್ರವಾಸಿ ರಾಷ್ಟ್ರಗಳಿಗೆ ವಿಮಾನಯಾನ ಆರಂಭಿಸಲು ಇಲಾಖೆ ಕ್ರಮ ಕೈಗೊಳ್ಳುವುದೇ ; ಕೈಗೊಂಡಿದ್ದರೆ, (ವಿವರ ಒದಗಿಸುವುದು ಪ್ರಸ್ತುತ ಯಾವ ಯಾವ ರಾಷ್ಟ್ರಗಳಿಗೆ ವಿಮಾನಯಾನ ವ್ಯವಸ್ಥೆ ಇದೆ ? (ವಿವರ ಒದಗಿಸುವುದು)

## R.T.O ಕಛೇರಿಯನ್ನು ತೆರೆಯುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೭೮೩ (೧೬೩೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಗರದಲ್ಲಿರುವ ಸಾರಿಗೆ ಇಲಾಖೆಯ ಕಛೇರಿಗಳನ್ನು ಗ್ರಾಮಾಂತರ ಪ್ರದೇಶಕ್ಕೆ ವಿಸ್ತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಸುರತ್ಕಲ್ / ಮುಲ್ಕಿಯಲ್ಲಿ ಆರ್.ಟಿ.ಓ ಕಛೇರಿಯನ್ನು ತೆರೆಯಬೇಕೆಂಬ ಬೇಡಿಕೆ ವಿಳಂಬಗೊಳ್ಳಲು ಕಾರಣವೇನು ; (ವಿವರ ಒದಗಿಸುವುದು)

(ಇ) ಮೋಟಾರ್ ವಾಹನ ಕಾಯ್ದೆಗೆ ಕೇಂದ್ರ ಸರ್ಕಾರ ತಂದಿರುವ ತಿದ್ದುಪಡಿಗಳು ಯಾವುವು ; ಇದಕ್ಕೆ ರಾಜ್ಯ ಸರ್ಕಾರದಿಂದ ನಿಯಮಗಳೇನಾದರೂ ರಚಿಸಲಾಗಿದೆಯೇ ;

(ಈ) ಕೇಂದ್ರ ಸರ್ಕಾರದ ಕಾನೂನುಗಳನ್ನು ಯಥಾವತ್ತಾಗಿ ರಾಜ್ಯ ಸರ್ಕಾರ ಪಾಲಿಸುವುದೇ ? (ವಿವರ ಒದಗಿಸುವುದು)

## ಮಂಗಳೂರಿನಲ್ಲಿ ಇನ್‌ವೆಸ್ಟ್ ಕರ್ನಾಟಕದ ಕಾರ್ಯಕ್ರಮವನ್ನು ನಡೆಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೭೮೪ (೧೬೨೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇನ್‌ವೆಸ್ಟ್ ಕರ್ನಾಟಕದಲ್ಲಿ ಮಂಗಳೂರು (ದಕ್ಷಿಣ ಕನ್ನಡ ಜಿಲ್ಲೆಯಲ್ಲಿ) ಯಾವ ಯಾವ ಉದ್ದಿಮೆಗಳಲ್ಲಿ ಹೂಡಿಕೆಯನ್ನು ಮಾಡಲು ನಿರ್ಧರಿಸಲಾಗಿದೆ ; (ವಿವರ ಒದಗಿಸುವುದು)

(ಆ) ಮಂಗಳೂರಿನಲ್ಲಿ ಉದ್ದಿಮೆದಾರರಿಗೆ ಎಲ್ಲಾ ಮೂಲಭೂತ ಸೌಕರ್ಯಗಳು ಇರುವುದರಿಂದ ಹೂಡಿಕೆದಾರರನ್ನು ಆಕರ್ಷಿಸಲು ವಿಶೇಷ ಯೋಜನೆಯನ್ನು ಇಲಾಖೆ ಮೂಲಕ ಮಾಡಲು ಕ್ರಮ ಕೈಗೊಳ್ಳುವುದೇ ;

(ಇ) ಉದ್ದಿಮೆದಾರರನ್ನು ಆಕರ್ಷಿಸಲು ಮಂಗಳೂರಿನಲ್ಲಿ ಇನ್‌ವೆಸ್ಟ್ ಮಂಗಳೂರು ಕಾರ್ಯಕ್ರಮವನ್ನು ಇಲಾಖೆ ಏರ್ಪಾಡು ಮಾಡುವುದೇ ;

(ಈ) ಮಂಗಳೂರು ಬೃಹತ್ ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶವನ್ನು ನೀಡಲು ಹಿಂಜರಿಕೆ ಮಾಡಿಸುವುದರ ಬಗ್ಗೆ ಇಲಾಖೆಯ ಗಮನದಲ್ಲಿದೆಯೇ ; ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ?

## ಮಂಗಳೂರಿನ ವಿಶ್ವವಿದ್ಯಾಲಯದ ಅಧ್ಯಯನ ಪೀಠದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೭೮೫ (೧೬೩೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ವಿಶ್ವವಿದ್ಯಾಲಯದಲ್ಲಿ ಇರುವ ಒಟ್ಟು ಅಧ್ಯಯನ ಪೀಠಗಳ ಸಂಖ್ಯೆ ಎಷ್ಟು; ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ಅಧ್ಯಯನ ಪೀಠಗಳು ನಡೆಸಿರುವ ಕಾರ್ಯಕ್ರಮಗಳೇನು ; (ವಿವರ ಒದಗಿಸುವುದು)

(ಆ) ಕಾರ್ಯನಿರ್ವಹಿಸಿದ ಅಧ್ಯಯನ ಪೀಠಗಳನ್ನು ರದ್ದು ಮಾಡಲು ಇಲಾಖೆ ಮುಂದೆ ಪ್ರಸ್ತಾವನೆ ಇದೆಯೇ ;

(ಇ) ಅಧ್ಯಯನ ಪೀಠಗಳಿಗೆ ಸ್ಪಷ್ಟವಾದ ಮಾರ್ಗಸೂಚನೆಗಳೇನಾದರೂ ರಚಿಸಲಾಗಿದೆಯೇ ; (ವಿವರ ಒದಗಿಸುವುದು)

(ಈ) ಮಂಗಳೂರು ವಿಶ್ವವಿದ್ಯಾನಿಲಯದಲ್ಲಿನ ಅಧ್ಯಯನ ಪೀಠಗಳಿಗೆ ಸರ್ಕಾರ ಬಿಡುಗಡೆಗೊಳಿಸಿದ ಅನುದಾನವೆಷ್ಟು ; ಯಾವ ಯಾವ ಅಧ್ಯಯನ ಪೀಠಗಳಿಗೆ ಎಷ್ಟೆಷ್ಟು ಅನುದಾನ ನೀಡಲಾಗಿದೆ ; (ವಿವರ ಒದಗಿಸುವುದು) ಕಾರ್ಯಕ್ರಮಗಳಿಗೆ ವಿನಿಯೋಗಿಸಿದ ಅನುದಾನ ಎಷ್ಟು ? (ವಿವರ ಒದಗಿಸುವುದು)

## ಸರ್ಕಾರಿ ಶಾಲೆಗಳಿಗೆ ಮೂಲ ಸೌಲಭ್ಯಗಳು ಹಾಗೂ ಶೈಕ್ಷಣಿಕ ಕೊರತೆಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೭೮೬ (೧೬೨೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ / ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; ಭರ್ತಿಗೊಳಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಲು ಇಲಾಖೆ ಕೈಗೊಂಡ ಕ್ರಮಗಳೇನು ;

(ಇ) ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಆಗುತ್ತಿರುವ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ;

(ಈ) ರಾಜ್ಯದಲ್ಲಿ ೧೦ ವಿದ್ಯಾರ್ಥಿಗಳಿಗಿಂತ ಕಡಿಮೆ ಇರುವ ಶಾಲೆಗಳ ಸಂಖ್ಯೆ ಎಷ್ಟು; ೫೦ ವಿದ್ಯಾರ್ಥಿಗಳಿಗಿಂತ ಕಡಿಮೆ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು)

(ಉ) ಶಾಲೆಗಳಲ್ಲಿ ನೈತಿಕ ಶಿಕ್ಷಣ ಬೋಧಿಸಲು ಇಲಾಖೆ ನಿರ್ದೇಶನ ನೀಡಿದೆಯೇ ; ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕಲಬುರಗಿ ಜಿಲ್ಲೆಯ ಗ್ರಾಮ ವಿಕಾಸ ಯೋಜನೆಯ ಅಭಿವೃದ್ಧಿಗೆ ಸಂಬಂಧಿಸಿದಂತೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ):–**

೧೭೮೭ (೧೬೧೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಗ್ರಾಮ ವಿಕಾಸ ಯೋಜನೆಯಡಿಯಲ್ಲಿ ಕಳೆದ ೩ ವರ್ಷಗಳಲ್ಲಿ ಕೈಗೊಳ್ಳಲಾದ ಅಭಿವೃದ್ಧಿಪರ ಕಾರ್ಯಗಳು ಯಾವುವು ;

(ಆ) ಸದರಿ ಯೋಜನೆಗೆ ಬಿಡುಗಡೆಗೊಳಿಸಿದ ಅನುದಾನದ ಪ್ರಮಾಣ ಎಷ್ಟು ;

(ಇ) ಇಂತಹ ಅನುದಾನದಲ್ಲಿ ಎಷ್ಟು ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ ; ಖರ್ಚಾಗಿರುವ ಅನುದಾನವೆಷ್ಟು ; ಬಾಕಿ ಉಳಿದಿರುವ ಅನುದಾನವೆಷ್ಟು ;

(ಈ) ಸದರಿ ಕಾಮಗಾರಿಗಳು ಬಾಕಿ ಉಳಿದಿರುವುದಕ್ಕೆ ಸೂಕ್ತ ಕಾರಣಗಳೇನು ; ಯಾವ ಕಾಲಮಿತಿಯೊಳಗೆ ಕಾಮಗಾರಿಗಳು ಪೂರ್ಣಗೊಳ್ಳಬಹುದು ?

## ಹೈದ್ರಾಬಾದ್ ಕರ್ನಾಟಕ ಭಾಗದ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ / ಬೋಧಕೇತರ ಹುದ್ದೆಗಳ ಬಗ್ಗೆ

**ಶ್ರೀ ಶರಣಪ್ಪ ಮಟ್ಟೂರು (ಶಿಕ್ಷಕರ ಕ್ಷೇತ್ರ):–**

೧೭೮೮ (೧೬೪೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್ ಕರ್ನಾಟಕ ಭಾಗದಲ್ಲಿ ಇರುವ ಸರ್ಕಾರಿ / ಅನುದಾನಿತ / ಅನುದಾನರಹಿತ ಪದವಿ ಕಾಲೇಜುಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಪದವಿ ಕಾಲೇಜುಗಳಿಗೆ ಮಂಜೂರಾದ ಬೋಧಕ / ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; ಆ ಪೈಕಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿಷಯವಾರು ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ?

## ಹೈದ್ರಾಬಾದ್ ಕರ್ನಾಟಕ ಭಾಗದಲ್ಲಿರುವ ಪ್ರೌಢ ಶಾಲಾ / ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ / ಬೋಧಕೇತರ ಹುದ್ದೆಗಳ ಬಗ್ಗೆ

**ಶ್ರೀ ಶರಣಪ್ಪ ಮಟ್ಟೂರು (ಶಿಕ್ಷಕರ ಕ್ಷೇತ್ರ):–**

೧೭೪೯ (೧೬೪೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್ ಕರ್ನಾಟಕ ಭಾಗದಲ್ಲಿ ಇರುವ ಸರ್ಕಾರಿ / ಅನುದಾನಿತ / ಅನುದಾನರಹಿತ ಪ್ರೌಢ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಶಾಲಾ / ಕಾಲೇಜುಗಳಿಗೆ ಮಂಜೂರಾದ ಬೋಧಕ / ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; ಆ ಪೈಕಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಹಾಗೂ ವಿಷಯವಾರು ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲ ಮಿತಿಯೊಳಗೆ ಭರ್ತಿ ಮಾಡಲಾಗುವುದು ?

## ಬಡ್ತಿ ಹೊಂದಿದ ಶಿಕ್ಷಕ / ಉಪನ್ಯಾಸಕರ ವೇತನ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೧೭೬೦ (೧೫೩೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಪ್ರೌಢ ಶಾಲಾ ಶಿಕ್ಷಕರಾಗಿ ಹಾಗೂ ಪ್ರಾಥಮಿಕ ಶಾಲಾ ಮುಖ್ಯ ಗುರುಗಳಾಗಿ ಬಡ್ತಿ ಹೊಂದಿದ ನಂತರ ಪ್ರೌಢ ಶಾಲಾ ಸಹ ಶಿಕ್ಷಕರಿಂದ ಪ್ರೌಢ ಶಾಲಾ ಮುಖ್ಯ ಗುರುಗಳಾಗಿ, ಪದವಿ ಪೂರ್ವ ಉಪನ್ಯಾಸಕರಾಗಿ ಬಡ್ತಿ ಹೊಂದಿದ ನಂತರ ಪದವಿ ಪೂರ್ವ ಉಪನ್ಯಾಸಕರಿಂದ ಪದವಿ ಪೂರ್ವ ಪ್ರಾಚಾರ್ಯರಾಗಿ ಪದೋನ್ನತಿ ಹೊಂದಿದ ಸಂದರ್ಭದಲ್ಲಿ ಅವರಿಗೆ ಸಿಗಬೇಕಾದ ೧೦,೧೫,೨೦,೨೫,೩೦ ವರ್ಷಗಳ ವೇತನ ಬಡ್ತಿ ಸಿಗದೇ ಮೂಲ ಹುದ್ದೆಯಲ್ಲಿ ತತ್ಸಮಾನ ಹುದ್ದೆಯಲ್ಲಿರುವವರು ಪಡೆಯುವ ಸಂಬಳಕ್ಕಿಂತ ಕಡಿಮೆ ವೇತನ ಪಡೆಯುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಅದನ್ನು ಸರಿಪಡಿಸಲು ಸರ್ಕಾರದ ಕ್ರಮವೇನು ;

(ಆ) ಪ್ರೌಢ ಶಾಲಾ ಸಹ ಶಿಕ್ಷಕರಿಂದ ಪದವಿ ಪೂರ್ವ ಉಪನ್ಯಾಸಕರಾಗಿ ರಾಜ್ಯದಲ್ಲಿ ಯಾವಾಗ ಪದೋನ್ನತಿ ನೀಡಲಾಗಿತ್ತು, ಪದೋನ್ನತಿ ನೀಡಲು ಇರುವ ತೊಂದರೆ ಏನು ; ಇಷ್ಟು ದೀರ್ಘ ಕಾಲ ಪದೋನ್ನತಿ ನೀಡದೇ ಇರುವುದು ಅನ್ಯಾಯವಲ್ಲವೇ ; ಇದನ್ನು ಸರಿಪಡಿಸಲು ಸರ್ಕಾರದ ಕ್ರಮವೇನು ; ಪದೋನ್ನತಿ ನೀಡುವ ಕಾರ್ಯವನ್ನು ಯಾವಾಗ ಪ್ರಾರಂಭ ಮಾಡಲಾಗುವುದು ;

(ಇ) ಪದವಿ ಪೂರ್ವ ಉಪನ್ಯಾಸಕರಿಂದ ಪದವಿ ಪೂರ್ವ ಪ್ರಾಚಾರ್ಯರ ಹುದ್ದೆಗೆ ಯಾವಾಗ ಪದೋನ್ನತಿ ನೀಡಲಾಗಿದೆ ; ಈಗ ಪದೋನ್ನತಿ ಕೊಡಲು ಖಾಲಿ ಇರುವ ಪ್ರಾಚಾರ್ಯರ ಹುದ್ದೆಗಳ ಸಂಖ್ಯೆ ಎಷ್ಟು ; ಕಲಂ ೩೭೧ ಜೆ ಅಳವಡಿಸಿಕೊಂಡು ಪದೋನ್ನತಿ ನೀಡಲಾಗಿದೆಯೇ ; ಖಾಲಿ ಇರುವ ಹುದ್ದೆಗಳಿಗೆ ಯಾವಾಗ ಪದೋನ್ನತಿ ನೀಡಲಾಗುವುದು ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0314/900 ಪ್ರತಿಗಳು/17–03–2017